17 July 2026 Friday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ವ್ಯಕ್ತಿಯ ವ್ಯಕ್ತಿತ್ವ ಗಡಿಯಾರದಲ್ಲಿಯ ಸಂಖ್ಯೆ ಆಗಬೇಕೇ ವಿನಃ ಕಾಲಕ್ಕೆ ತಕ್ಕಂತೆ ಬದಲಾಗುವ ಮುಳ್ಳಾಗಬಾರದು!

-ಸ್ನೇಹಾ ಆನಂದ್

info.varthaman@gmail.com



ರೈತರ ಹಲ್ಲೆಗೆ ಕ್ರಮಕ್ಕೆ ಸರ್ಕಾರಿ ನೌಕರರ ಸಂಘ ಖಂಡನೆ

ಪುಟ ಸಂ. 2



ಮೈತ್ರಿ ಗೆಲುವಿಗೆ ಶ್ರಮಿಸಿ: ಜೆಡಿಎಸ್ ನಗರಾಧ್ಯಕ್ಷ ಎಸ್.ಬಿ.ಎಂ.ಮಂಜು ಕರೆ

ಪುಟ ಸಂ. 3



ರಾಮನಗರದ ಸರ್ವಾಂಗೀಣ ಅಭಿವೃದ್ಧಿ ಮುಖ್ಯಮಂತ್ರಿ ಆಶಯ

ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 228 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಪ್ರಾಣೇಶ್ ಎಂಎಲ್ಸಿ ಸ್ಥಾನ ರದ್ದು

## ಹೈಕೋರ್ಟ್ ತೀರ್ಪು ಎತ್ತಿಹಿಡಿದ ಸುಪ್ರೀಂ ಕೋರ್ಟ್





**ಬೆಂಗಳೂರು:** ವಿಧಾನ ಪರಿಷತ್ ಸದಸ್ಯತ್ವ ರದ್ದತಿ ಮಾಡಿದ್ದ ಹೈಕೋರ್ಟ್ ತೀರ್ಪು ಪ್ರಶ್ನಿಸಿ ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಚಿಕ್ಕಮಗಳೂರು ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿದ್ದ ಎಂ.ಕೆ.ಪ್ರಾಣೇಶ್ ಅವರ ಸದಸ್ಯತ್ವವನ್ನು ರದ್ದುಪಡಿಸಲಾಗಿದೆ. ಈ ಸಂಬಂಧ ಪ್ರಾಣೇಶ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ಪ್ರತಿಸ್ಪರ್ಧಿ ಗಾಯತ್ರಿ ಶಾಂತೇಗೌಡ ಮೇಲುಗೈ ಸಾಧಿಸಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜಾಯ್ ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ.ಪಂಚೋಲಿ ಅವರನ್ನೊಳಗೊಂಡ ಪೀಠವು ಈ ತೀರ್ಪು ನೀಡಿದೆ. ಚಿಕ್ಕಮಗಳೂರು ಕ್ಷೇತ್ರದಿಂದ ವಿಧಾನ ಪರಿಷತ್ ಸ್ಥಾನಕ್ಕೆ 2021ರ ಡಿಸೆಂಬರ್ ನಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿಯಿಂದ ಎಂ.ಕೆ.ಪ್ರಾಣೇಶ್ ಸ್ಪರ್ಧಿಸಿದ್ದರೆ, ಕಾಂಗ್ರೆಸ್ ನಿಂದ ಗಾಯತ್ರಿ ಶಾಂತೇಗೌಡ ಸ್ಪರ್ಧಿಸಿದ್ದರು.

ಚುನಾವಣೆಯಲ್ಲಿ ಚಲಾವಣೆಯಾಗಿದ್ದ 2,410 ಮತಗಳ ಪೈಕಿ 39 ಮತಗಳು ಅಸಿಂಧುವಾಗಿದ್ದವು. 1,188 ಮತಗಳನ್ನು ಪಡೆದಿದ್ದ ಪ್ರಾಣೇಶ್ ಆರು ಮತಗಳ ಅಂತರದಲ್ಲಿ ಗೆಲುವು ಸಾಧಿಸಿದ್ದರು. ಗಾಯತ್ರಿ ಶಾಂತೇಗೌಡ 1,182 ಮತಗಳನ್ನ ಗಳಿಸಿದ್ದರು.

ಈ ಚುನಾವಣೆಯಲ್ಲಿ ನಿಯಮ ಉಲ್ಲಂಘನೆಯಾಗಿದೆ ಎಂದು ಆರೋಪಿಸಿ ಗಾಯತ್ರಿ ಶಾಂತೇಗೌಡ ನ್ಯಾಯಾಲಯದ ಮೆಟ್ಟಿಲೇರಿದ್ದರು. ಶೃಂಗೇರಿ, ಕೊಪ್ಪ, ಎನ್.ಆರ್.ಪುರ, ಮೂಡಿಗೆರೆ ಪಟ್ಟಣ ಪಂಚಾಯತ್ ಗಳ 12 ನಾಮನಿರ್ದೇಶಿತ ಸದಸ್ಯರು ಮತದಾನ ಮಾಡಿದ್ದರು.

ನಾಮನಿರ್ದೇಶಿತ ಸದಸ್ಯರಿಗೆ ಮತದಾನಕ್ಕೆ ಅವಕಾಶ ಇಲ್ಲ ಎಂದು ಗಾಯತ್ರಿ ಶಾಂತೇಗೌಡ ಪರ ವಕೀಲರು ವಾದ ಮಂಡಿಸಿದ್ದರು. ಆ ಸದಸ್ಯರ ಮತಗಳನ್ನು ಪ್ರತ್ಯೇಕವಾಗಿ ಇರಿಸಿ ಮತಗಳ ಮರು ಎಣಿಕೆ ಮಾಡುವಂತೆ ಜಿಲ್ಲಾಧಿಕಾರಿಗೆ ಹೈಕೋರ್ಟ್ ಸೂಚನೆ ನೀಡಿತ್ತು. ಅದರಂತೆ ಮತಗಳ ಮರು ಎಣಿಕೆ 2025ರ ಫೆಬ್ರವರಿ 28ರಂದು ಚಿಕ್ಕಮಗಳೂರಿನಲ್ಲಿ ನಡೆದಿತ್ತು. ಮುಚ್ಚಿದ ಲಕೋಟೆಯಲ್ಲಿ ಸುಪ್ರೀಂ ಕೋರ್ಟ್ಗೆ ಜಿಲ್ಲಾಧಿಕಾರಿ ಪುಟ 2ಕ್ಕೆ

## ಪಿಯು ಉಪನ್ಯಾಸಕರು 9–10ನೇ ತರಗತಿಗೂ ಪಾಠ ಮಾಡಬೇಕು



**ಬೆಂಗಳೂರು:** ಪಿಯುಸಿ ಉಪನ್ಯಾಸಕರು 9, 10ನೇ ತರಗತಿ ವಿದ್ಯಾರ್ಥಿಗಳಿಗೂ ಕಡ್ಡಾಯವಾಗಿ ಪಾಠ ಮಾಡಬೇಕು ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

2013ರ ನೇಮಕಾತಿ ನಿಯಮವನ್ನು ಸರ್ಕಾರ ತಿದ್ದುಪಡಿ ಮಾಡಿದೆ. ಈ ವರ್ಷದಿಂದಲೇ ನಿಯಮ ಜಾರಿಯಾಗಲಿದೆ. ಇದರನ್ವಯ ನೇರ ನೇಮಕಾತಿ ಮತ್ತು ಬಡ್ತಿಯಿಂದ ನೇಮಕವಾದ ಉಪನ್ಯಾಸಕರು 9 ಮತ್ತು 10ನೇ ತರಗತಿಗೆ ಪಾಠ ಮಾಡಬೇಕು ಎಂದು ಸರ್ಕಾರ ಆದೇಶಿಸಿದೆ.

ರಾಜ್ಯ ಸರ್ಕಾರ 15 ಸಾವಿರ ಶಿಕ್ಷಕರ

# ಸಂಪುಟ ಚರ್ಚೆ: ಬರಿಗೈಲಿ ವಾಪಸ್

## ಮಲ್ಲಿಕಾರ್ಜುನ ಖರ್ಗೆ ದೆಹಲಿಗೆ ಆಗಮಿಸಿದ ನಂತರ ಅಂತಿಮ ತೀರ್ಮಾನ



**ನವದೆಹಲಿ:** ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚಿಸಲು ನವದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ ಮೊಟಕುಗೊಳಿಸಿ ಬರಿಗೈಲಿ ಬೆಂಗಳೂರಿಗೆ ವಾಪಸ್ ಆಗಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬೆಂಗಳೂರಿಗೆ ವಾಪಸ್ ಆದ ಕಾರಣ ಕಾಂಗ್ರೆಸ್ ಹೈಕಮಾಂಡ್ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಯಾವುದೇ ನಿರ್ಧಾರ ಕೈಗೊಳ್ಳಲಿಲ್ಲ. ಮತ್ತೊಮ್ಮೆ ಚರ್ಚಿಸಿ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದೆ. ಹೀಗಾಗಿ ಮಾಜಿ ಸಿಎಂ ಸಿದ್ದರಾಮಯ್ಯ ಗುರುವಾರ ರಾತ್ರಿಯೇ ವಾಪಸ್ ಆದರು. ಸಿಎಂ ಡಿ.ಕೆ.ಶಿವಕುಮಾರ್ ಶುಕ್ರವಾರ ವಾಪಸ್ ಆಗುವ ನಿರೀಕ್ಷೆ ಇದೆ.

ನವದೆಹಲಿಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಗುರುವಾರ ಭೇಟಿ ಮಾಡಿ ಚರ್ಚಿಸಿದರು. ವರಿಷ್ಠರ ಜೊತೆ ಚರ್ಚೆ ಬಳಿಕ, ಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ರಾಹುಲ್ ಮನೆಯಿಂದ ನಿರ್ಗಮಿಸಿದ್ದಾರೆ.

ಮಗನ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬೆಂಗಳೂರಿಗೆ ವಾಪಸ್ ಆಗಿದ್ದಾರೆ ಎನ್ನಲಾಗಿದೆ. ವರಿಷ್ಠರ ಜೊತೆಗೆ ಸಭೆಯಲ್ಲಿ ಭಾಗಿಯಾಗಿಲ್ಲ. ಕೆ.ಸಿ.ವೇಣುಗೋಪಾಲ್ ಸಹ ಅನಾರೋಗ್ಯದ ಕಾರಣದಿಂದ ಗೈರಾಗಿದ್ದರು. ಈ ಹಿನ್ನೆಲೆಯಲ್ಲಿ ಸಭೆಯನ್ನು ಅರ್ಧಕ್ಕೆ ಪುಟ 2ಕ್ಕೆ

### ಸುರ್ಜೆವಾಲಾ ಜೊತೆ ಡಿಕೆಶಿ–ಸಿದ್ದು ಪ್ರತ್ಯೇಕ ಸಭೆ

**ನವದೆಹಲಿ:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುರುವಾರ ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಅವರನ್ನು ಭೇಟಿಯಾಗಿ ಮಹತ್ವದ ಸಮಾಲೋಚನೆ ನಡೆಸಿದರು.

ರಾಜಕೀಯ ವಿದ್ಯಮಾನಗಳು, ಸಂಪುಟ ವಿಸ್ತರಣೆ ಹಾಗೂ ಪಕ್ಷದ ಆಡಳಿತಾತ್ಮಕ ವಿಷಯಗಳ ಕುರಿತು ಇಬ್ಬರು ನಾಯಕರು ಸುದೀರ್ಘವಾಗಿ ಚರ್ಚಿಸಿದರು. ಸುರ್ಜೆವಾಲಾ ಅವರೊಂದಿಗೆ ಸಭೆ ಮುಗಿದ ಬೆನ್ನಲ್ಲೇ ಮುಖ್ಯಮಂತ್ರಿಗಳು ದೆಹಲಿಯ ಕರ್ನಾಟಕ ಭವನಕ್ಕೆ ತೆರಳಿದರು.

ಮುಖ್ಯಮಂತ್ರಿಗಳು ತೆರಳಿದ ನಂತರ ಉಸ್ತುವಾರಿಯವರೊಂದಿಗೆ ಪ್ರತ್ಯೇಕವಾಗಿ ಕುಳಿತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸುದೀರ್ಘ ಸಮಾಲೋಚನೆ ನಡೆಸಿದರು. ಸರ್ಕಾರದ ಮುಂದಿನ ಕಾರ್ಯತಂತ್ರಗಳ ಬಗ್ಗೆ ಇಬ್ಬರು ನಾಯಕರ ನಡುವೆ ಗಹನವಾದ ಚರ್ಚೆ ನಡೆದಿದೆ ಎಂದು ವರದಿಯಾಗಿದೆ.

ಮುಖ್ಯಮಂತ್ರಿ ಡಿ.ಕೆ. ಪುಟ 2ಕ್ಕೆ

### ಜು.20, 22 ಶುಭದಿನ

ರಾಹುಲ್ ಗಾಂಧಿ ಭೇಟಿ ಬಳಿಕ ಆರಂಭಿಕ ಸುತ್ತಿನ ಮಾತುಕತೆ ನಡೆಸುತ್ತಿರುವ ಡಿ.ಕೆ ಶಿವಕುಮಾರ್ ಅವರು, ಸಂಪುಟ ವಿಸ್ತರಣೆಗೆ ಹೈಕಮಾಂಡ್ ಮುಂದೆ ಎರಡು ದಿನಾಂಕಗಳನ್ನ ಪ್ರಸ್ತಾಪಿಸಿದ್ದಾರೆ. ಜುಲೈ 20 ರ ಸೋಮವಾರ ಹಾಗೂ ಜುಲೈ 22ರ ಬುಧವಾರ ಸಂಪುಟ ವಿಸ್ತರಣೆಗೆ ಶುಭ ಮುಹೂರ್ತ ಎಂದಿದ್ದಾರೆ. ಇದಕ್ಕೆ ಕಾಂಗ್ರೆಸ್ ಹೈಕಮಾಂಡ್ ಒಪ್ಪಿದರೆ ಪುಟ 2ಕ್ಕೆ

# ಎಚ್‌ಎಂಟಿ ಜಮೀನು ಮಾರಾಟ ಮಾಡಿದ್ದು ಇಂದಿನ ಮುಖ್ಯಮಂತ್ರಿ!

## ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಎಚ್.ಡಿ.ಕುಮಾರಸ್ವಾಮಿ ಆರೋಪ



**ಬೆಂಗಳೂರು:** ಎಚ್‌ಎಂಟಿ ಜಮೀನು ಮಾರಾಟ ಮಾಡಿರುವುದು ಇಂದಿನ ಮುಖ್ಯಮಂತ್ರಿ. 2004ರಲ್ಲಿ ನಗರಾಭಿವೃದ್ಧಿ ಸಚಿವರಾಗಿದ್ದ ಸಂದರ್ಭದಲ್ಲಿ ಮಾರಾಟ ಮಾಡಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸಿಎಂ ಡಿ.ಕೆ.ಶಿವಕುಮಾರ್ ಹೆಸರು ಹೇಳದೆ ಕಿಡಿಕಾರಿದರು.

ಎಚ್‌ಎಂಟಿ ಜಮೀನು ಅರಣ್ಯ ಇಲಾಖೆಗೆ ಸೇರಿದೆ ಎಂಬ ಸಚಿವ ಈಶ್ವರ್ ಖಂಡ್ರೆ ಹೇಳಿಕೆಗೆ ಗುರುವಾರ ಜಾಲಹಳ್ಳಿಯ ಕ್ಯಾಂಪಸ್ ಎಚ್‌ಎಂಟಿ ವೀಕ್ಷಣೆ ಮಾಡಿದ ಕುಮಾರಸ್ವಾಮಿ, ಎಚ್‌ಎಂಟಿಗೆ ಹೊಸ ಕಾಯಕಲ್ಪ ಕೊಡಲು ಮುಂದಾಗಿದ್ದೆ. ರಾಜ್ಯ ಸರ್ಕಾರ ನಿರಂತರವಾಗಿ ತೊಂದರೆ ಕೊಡ್ತಾ ಇದೆ. ಕಾಟ ಕೊಟ್ಟು ಜಮೀನು ಹೊಡೆಯುವ ಪ್ಲ್ಯಾನ್ ಮಾಡಿದ್ದಾರೆ ಎಂದರು.

ಈಶ್ವರ್ ಖಂಡ್ರೆ 175 ಎಕರೆ ಜಾಗವನ್ನು ಎಚ್‌ಎಂಟಿ ಅವರು ಮಾರಿದ್ದಾರೆ ಅಂತ ಆರೋಪ ಮಾಡಿದ್ದಾರೆ. ಅರಣ್ಯ ಇಲಾಖೆ ಜಾಗ ಅಂತ ಹೇಳ್ತಾರೆ. ನ್ಯಾಯಬದ್ಧವಾಗಿ ಜಾಗ ಎಚ್‌ಎಂಟಿಗೆ ಕೊಡಲಾಗಿದೆ ಎಂದು ತಿಳಿಸಿದರು.

ಎಚ್‌ಎಂಟಿ ಅಧಿಕಾರಿಗಳು ಹಿಂದೆ ಶಾಮೀಲಾಗಿ ಈ ಜಾಗ ಮಾರಾಟ ಮಾಡಿದ್ದಾರೆ. ಈ ಬಗ್ಗೆ ತನಿಖೆ ಆಗಬೇಕು. ಈ ಬಗ್ಗೆ ತನಿಖೆಗೆ ಒಳಪಡಿಸಬೇಕಾಗುತ್ತದೆ. ಈಶ್ವರ್ ಖಂಡ್ರೆ ಅವರೇ ನಿಮ್ಮ ಸಿಎಂ ಅವರು ಬದಲಾವಣೆ ಆಗಿದ್ದಾರೆ. ಅವರಿಗೆ ಹೇಳಿಸಿ ಅಕ್ರಮವಾಗಿ ಮಾರಾಟ ಮಾಡಿರೋ ಬಗ್ಗೆ ತನಿಖೆ ಮಾಡಿ ಎಂದು ಹೇಳಿದರು.

## ಅಶ್ಲೀಲ ಕಮೆಂಟ್: ಕಠಿಣ ಕಾಯ್ದೆ ಜಾರಿ

**ಬೆಂಗಳೂರು:** ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲವಾಗಿ ಕಮೆಂಟ್ ಮಾಡುವವರ ಹಾವಳಿ ತಡೆಯುವ ಉದ್ದೇಶದಿಂದ ಕಠಿಣ ಕಾಯ್ದೆಯನ್ನು ಜಾರಿಗೆ ತರಲಾಗಿದೆ ಅಶ್ಲೀಲ ಕಾಮೆಂಟ್ ಶೂರರಿಗೆ ಶಾಕ್ ನೀಡಲಾಗಿದೆ.

ಸಾಮಾಜಿಕ ಜಾಲತಾಣದಲ್ಲಿ ಕೆಟ್ಟದಾಗಿ ಕಮೆಂಟ್ ಮಾಡಿದರೆ 6 ತಿಂಗಳಿಂದ 1 ವರ್ಷದವರೆಗೆ ಜೈಲು ಶಿಕ್ಷೆ ನೀಡಲಾಗುವುದು. ಜೊತೆಗೆ 1 ವರ್ಷದವರೆಗೆ ಜಾಮೀನು ರಹಿತ ಕಠಿಣ ಕಾಯ್ದೆಯನ್ನು 2024ರ ಜುಲೈ 1ರಿಂದ ಜಾರಿಗೆ ಬಂದಿರುವ ಐಟಿ ಕಾಯ್ದೆಗಳನ್ವಯ ಜಾರಿಗೆ ತರಲಾಗಿದೆ.

ಈ ಶಿಕ್ಷೆಯಾದ ಮೇಲೆ ಹೈಕೋರ್ಟ್ ತನಕ ಹೋದರೂ ಜಾಮೀನು ಸಿಗುವುದಿಲ್ಲ. ದಂಡ ಇರುವ ಎರಡು ಸೆಕ್ಷನ್ ಜಾರಿ ಮಾಡಲಾಗಿದೆ. ಒಂದು ವೇಳೆ 1 ಲಕ್ಷ ರೂ. ದಂಡ ಕಟ್ಟದಿದ್ದರೆ ದಂಡ ಕಟ್ಟುವ ತನಕ ಜೈಲುಶಿಕ್ಷೆ ಕಡ್ಡಾಯಗೊಳಿಸಿದ್ದಾರೆ.

# ಜಾತಿ ಸಮೀಕರಣ ಕೈಬಿಡಿ: ಪಕ್ಷದ ನಿಷ್ಠರಿಗೆ ಮಣೆ ಹಾಕಿ

### ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ಹಿರಿಯ ಶಾಸಕರ ಆಗ್ರಹ

**ನವದೆಹಲಿ:** ಸಂಪುಟ ವಿಸ್ತರಣೆಯಲ್ಲಿ ಜಾತಿ ಸಮೀಕರಣ ಹೊರತುಪಡಿಸಿ ಪಕ್ಷದ ಬಗೆಗಿನ ನಿಷ್ಠೆ ಉಳ್ಳವರಿಗೆ ಆದ್ಯತೆ ನೀಡುವಂತೆ ಕೆಲವು ಕಾಂಗ್ರೆಸ್ ಶಾಸಕರು ಪಕ್ಷದ ಹೈಕಮಾಂಡ್ ಅನ್ನು ಒತ್ತಾಯಿಸಿದ್ದಾರೆ.

ಜಾತಿ ಸಮೀಕರಣಗಳ ಮೇಲೆ ಅವಲಂಬಿತರಾಗುವ ಬದಲು ಪಕ್ಷದ ಕಾರ್ಯಕರ್ತರ ತ್ಯಾಗ, ದೀರ್ಘಕಾಲದ ಸೇವೆ ಮತ್ತು ನಿಷ್ಠೆಯನ್ನು ಪರಿಗಣಿಸುವಂತೆ ಹಲವು ನಾಯಕರು ಪಕ್ಷದ ವರಿಷ್ಠರನ್ನು ಒತ್ತಾಯಿಸಿದ್ದಾರೆ ಎಂದು ಶಾಸಕ ಅಶೋಕ್ ಪಟ್ಟಣ್ ತಿಳಿಸಿದರು.

ದೆಹಲಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಜಾತಿಯನ್ನು ಅವಲಂಬಿಸದಂತೆ ನಾವು ನಮ್ಮ ನಾಯಕರಲ್ಲಿ ಮನವಿ ಮಾಡಿದ್ದೇವೆ. ನಾಯಕರ ತ್ಯಾಗ, ಅವರು ಎಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ ಮತ್ತು ಪಕ್ಷದ ಮೇಲಿರುವ ಅವರ ನಿಷ್ಠೆ ಪರಿಗಣಿಸಬೇಕು. ನಾವು ಇದರ ಆಧಾರದ ಮೇಲೆ ಪ್ರಸ್ತಾವನೆಯನ್ನು ಸಲ್ಲಿಸಿದ್ದೇವೆ. ನಾನು ಪಕ್ಷಕ್ಕೆ ಶೇ 100ರಷ್ಟು ನಿಷ್ಠನಾಗಿದ್ದೇನೆ. ಅನಗತ್ಯವಾಗಿ ಜಾತಿ ಮತ್ತು ಉಪಜಾತಿಗಳನ್ನು ಪರಿಗಣಿಸಿದರೆ, ಅದು ನಮಗೆ ಅನ್ಯಾಯವಾಗುತ್ತದೆ. ಉಪಜಾತಿ ಅಥವಾ ಕೇವಲ ಜಾತಿಯ ಆಧಾರದ ಮೇಲೆ ಗಮನಹರಿಸಬಾರದು. ನಾನು ಸಚಿವರಾಗಲು ಗಂಭೀರ ಪ್ರಯತ್ನ ನಡೆಸುತ್ತಿದ್ದೇನೆ ಎಂದು ಅಶೋಕ್ ಹೇಳಿದರು.ಪಕ್ಷದ ಬಗ್ಗೆ ಪ್ರಾಮಾಣಿಕತೆ, ನಿಷ್ಠೆ ಮತ್ತು ಬದ್ಧತೆ ಅತ್ಯಂತ ಮುಖ್ಯವೆಂದು ಹಿರಿಯ ಕಾಂಗ್ರೆಸ್ ಶಾಸಕ ಟಿಬಿ ಜಯಚಂದ್ರ ಒತ್ತಿ ಹೇಳಿದರು. ಪುಟ 2ಕ್ಕೆ


## ಶಾಸಕರ ದೆಹಲಿ ಪೆರೇಡ್

**ನವದೆಹಲಿ:** ಸಚಿವ ಸಂಪುಟ ವಿಸ್ತರಣೆ ಕಸರತ್ತು ಆರಂಭವಾಗಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕರ ದೆಹಲಿ ಪರೇಡ್ ಸಹ ಶುರುವಾಗಿದೆ. ಸಚಿವ ಸ್ಥಾನದ ಆಕಾಂಕ್ಷಿಗಳು ಹೈಕಮಾಂಡ್ ನಾಯಕರ ಮನೆ ಬಾಗಿಲು ತಟ್ಟುತ್ತಿದ್ದಾರೆ. ಈಗಾಗಲೇ 20ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲೇ ಬೀಡುಬಿಟ್ಟಿದ್ದಾರೆ.

ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿರುವ ಸಿಎಂ ಡಿಕೆ ಶಿವಕುಮಾರ್ ಅವರು ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆ ನಡೆಸಿದ್ದಾರೆ.

ಸೋನಿಯಾ ಗಾಂಧಿ ನಿವಾಸದಲ್ಲಿ ರಣದೀಪ್ ಸುರ್ಜೆವಾಲ, ಕೆ.ಸಿ ವೇಣುಗೋಪಾಲ್ ಜೊತೆ ಸಭೆ ನಡೆಸಿದರು. ಬಳಿಕ ಪ್ರತ್ಯೇಕವಾಗಿ ರಾಹುಲ್ ಗಾಂಧಿ ಅವರನ್ನ ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಈ ಸಭೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಕೂಡ ಭಾಗಿಯಾಗಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

# ಯಾರ ಪರವೂ ಲಾಬಿ ಮಾಡಲ್ಲ: ಬಿ.ಕೆ.ಹರಿಪ್ರಸಾದ್





**ಬೆಂಗಳೂರು:** ಸಚಿವ ಸಂಪುಟ ವಿಸ್ತರಣೆಯನ್ನು ಒಂದೇ ಹಂತದಲ್ಲಿ ಮಾಡಬೇಕೇ ಅಥವಾ ಬೇಡವೇ ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದರು. ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ಕುರಿತು ರಾಜಕೀಯ ಚಟುವಟಿಕೆಗಳು ತೀವ್ರ ಗೊಂಡಿರುವ ಬಗ್ಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಮಾಧ್ಯಮಗಳ ಜೊತೆ ಮಾತ ನಾಡಿದರು. ನಾನು ದೆಹಲಿಗೆ ಯಾವುದೇ ಪಟ್ಟಿ ಯನ್ನು ತಂದಿಲ್ಲ. ನಾನು ಪಟ್ಟಿ ಹಿಡಿದು ಕೊಂಡು ಓಡಾಡುವ ವ್ಯಕ್ತಿಯೂ ಅಲ್ಲ. ಪಕ್ಷದ ಅಧ್ಯಕ್ಷನಾಗಿ ನನಗೆ ಎಲ್ಲಾ ನಾಯಕರು ಸಮಾನರು. ನಾನು ಯಾರ ಪರವಾಗಿಯೂ ಲಾಬಿ ಮಾಡುವುದಿಲ್ಲ ಎಂದು ಹರಿಪ್ರಸಾದ್ ಸ್ಪಷ್ಟಪಡಿಸಿದರು.

ಪಕ್ಷದಲ್ಲಿ ಐದಾರು ಬಾರಿ ಶಾಸಕರಾದವರು ಇದ್ದಾರೆ ಹಾಗೂ ಹಲವು ಶಾಸಕರಿಗೆ ಈಗಾಗಲೇ ಹಲವು ಬಾರಿ ಸಚಿವರಾಗುವ ಅವಕಾಶ ಸಿಕ್ಕಿದೆ. ಇವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವ ಕುರಿತು ಹೈಕಮಾಂಡ್ ಅಂತಿಮ ತೀರ್ಮಾನ ಕೈಗೊಳ್ಳಲಿದೆ ಎಂದರು.

ಪಕ್ಷದ ಹೈಕಮಾಂಡ್ ನಿರ್ದಿಷ್ಟವಾಗಿ ಯಾವುದೇ ನಾಯಕರ ಬಗ್ಗೆ ನನ್ನ ಅಭಿಪ್ರಾಯವನ್ನು ಕೇಳಿದರೆ ಪುಟ 2ಕ್ಕೆ

# ಗೌಡ್ರೆ ಹೊಟ್ಟೆ ಉರಿಗೆ ಮಾತಾಡಬೇಡಿ!

## ಎಚ್.ಡಿ.ದೇವೇಗೌಡಗೆ ಚಲುವರಾಯಸ್ವಾಮಿ ತಿರುಗೇಟು



**ಬೆಂಗಳೂರು:** ಎಚ್.ಡಿ.ದೇವೇಗೌಡ ಮತ್ತು ಎಚ್.ಡಿ. ಕುಮಾರಸ್ವಾಮಿ ಅವರು ಹೊಟ್ಟೆ ಉರಿಗೆ ಮಾತಾಡೋದು ಬೇಡ ಎಂದು ಮಾಜಿ ಸಚಿವ ಎನ್ ಚಲುವರಾಯಸ್ವಾಮಿ ಲೇವಡಿ ಮಾಡಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ದೇವೇಗೌಡರು ಈ ಇಳಿ ವಯಸ್ಸಿನಲ್ಲಿ ಒಳ್ಳೆ ಮಾರ್ಗದರ್ಶನ ಕೊಡಲಿ. ಅಶೋಕ್‌ಗೆ ಸಹ ದೇವೇಗೌಡರು ಮಾರ್ಗದರ್ಶನ ನೀಡಲಿ. ಅದು ಬಿಟ್ಟು ಅಸೂಯೆ ಬೀಳಬೇಡಿ ಎಂದು ಟೀಕಿಸಿದರು.


ಎಸ್‌ಎಂ ಕೃಷ್ಣ ಸಿಎಂ ಆಗಿದ್ದು ನಿಮಗೆ ಇಷ್ಟ ಆಗಿರಲಿಲ್ಲ. ಎರಡನೇ ಬಾರಿ ಧರ್ಮಸಿಂಗ್ ಅವರನ್ನ ಸಿಎಂ ಮಾಡಿದ್ದೀರಿ. ಆದರೆ ಇವತ್ತು ಡಿಕೆಶಿ ಸಿಎಂ ಆಗಿರೋದು ಸಹಿಸೋಕೆ ಆಗ್ತಿಲ್ಲ. ಜನರು ಮಾತಾಡೋದನ್ನು ಅಶೋಕ್, ಕುಮಾರಸ್ವಾಮಿ ನೋಡಬೇಕು.

ಕುಮಾರಸ್ವಾಮಿ, ಅಶೋಕ್ ಭ್ರಮೆಯಲ್ಲಿ ಇದ್ದಾರೆ. ದೇವೇಗೌಡರಿಂದ ಇದನ್ನ ನಿರೀಕ್ಷೆ ಮಾಡಿರಲಿಲ್ಲ. ದೇವೇಗೌಡರ ಸಲಹೆ ಕೊಡಲಿ, ಫಾರ್ಮುಲ ಕೊಡಲಿ. ಬಿಡದಿ ವಿಚಾರದಲ್ಲಿ ಸಿಎಂ ಬೇಕಾದರೆ ಸಲಹೆ ಪಡೆಯುತ್ತಾರೆ ಎಂದು ದೇವೇಗೌಡರಿಗೆ ತಿರುಗೇಟು ನೀಡಿದರು.

ಕುಮಾರಸ್ವಾಮಿ ಪ್ರತಿಭಟನೆ ಸ್ಥಳಕ್ಕೆ ಬನ್ನಿ ಅಂತಾರೆ. ಕುಸ್ತಿ ಆಡೋಕೆ ಹೋಗಬೇಕಾ? ರೈತರ ಸಮಸ್ಯೆ ಇತ್ಯರ್ಥ ಮಾಡೋಕೆ ವಿಧಾನಸೌಧ ಇದೆ. ಹರಿಯಾಣದಲ್ಲಿ ರೈತರ ಪ್ರತಿಭಟನೆಗೆ ಪುಟ 2ಕ್ಕೆ

### ರಾಜ್ಯಕ್ಕೆ ವಿಶೇಷ ಆರ್ಥಿಕ ನೆರವು ನೀಡಲು ಪ್ರಧಾನಿಗೆ ಡಿಸಿಎಂ ಪರಮೇಶ್ವರ್ ಮನವಿ

# ಬರ: ರಾಷ್ಟ್ರೀಯ ವಿಪತ್ತು ಘೋಷಿಸಿ



**ಬೆಂಗಳೂರು:** ಕರ್ನಾಟಕದ ಉಂಟಾಗಿರುವ ಬರ ಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಿ ವಿಶೇಷ ಆರ್ಥಿಕ ನೆರವು ನೀಡುವಂತೆ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ತೀವ್ರ ಮಳೆ ಕೊರತೆ, ಕುಡಿಯುವ ನೀರಿನ ಬಿಕ್ಕಟ್ಟು ಹಾಗೂ ಕೃಷಿ ವಲಯದಲ್ಲಿ ಉಂಟಾಗಿರುವ ಸಂಕಷ್ಟವನ್ನು ಉಲ್ಲೇಖಿಸಿ ಬರ ಪರಿಸ್ಥಿತಿಯನ್ನು 'ರಾಷ್ಟ್ರೀಯ ವಿಪತ್ತು' ಎಂದು ಘೋಷಿಸುವಂತೆ ಆಗ್ರಹಿಸಿ ಡಿಸಿಎಂ ಪರಮೇಶ್ವರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಪರಮೇಶ್ವರ್ ಅವರು, ಕರ್ನಾಟಕದಲ್ಲಿ ಜೂನ್ ತಿಂಗಳಲ್ಲಿ ಶೇ.42ರಷ್ಟು ಹಾಗೂ ಜುಲೈನಲ್ಲಿ ಇದುವರೆಗೆ ಶೇ.34ರಷ್ಟು ಮಳೆ ಕೊರತೆ ದಾಖಲಾಗಿದೆ. ಈ ಮಳೆ ಕೊರತೆಯಿಂದ ಬೆಳೆಗಳಿಗೆ ಭಾರೀ ಹಾನಿಯಾಗಿದ್ದು, ಅಂತರ್ಜಲ ಮಟ್ಟ ಕುಸಿತ, ಜಲಾಶಯಗಳಿಗೆ ನೀರಿನ ಹರಿವು ಕಡಿಮೆಯಾಗಿರುವುದು ಹಾಗೂ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದೆ ಎಂದು ಅವರು ಹೇಳಿದ್ದಾರೆ.

ಕರ್ನಾಟಕ ದಲ್ಲಿ ತೀವ್ರ ಮಳೆ ಕೊರತೆ, ಕುಡಿಯುವ ನೀರಿನ ಬಿಕ್ಕಟ್ಟು ಹಾಗೂ ಕೃಷಿ ಮತ್ತು ಗ್ರಾಮೀಣ ಜೀವನೋಪಾಯದ ಮೇಲೆ ಗಂಭೀರ ಪರಿಣಾಮ ಉಂಟಾಗಿರುವ ಹಿನ್ನೆಲೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಶೇಷ ನೆರವು ಕೋರಿ ಪತ್ರ ಬರೆದಿದ್ದೇನೆ ಎಂದು ಪರಮೇಶ್ವರ್ ತಿಳಿಸಿದ್ದಾರೆ.

ರಾಜ್ಯದ ಹಲವು ಪ್ರದೇಶಗಳಲ್ಲಿ ಬಿತ್ತನೆಯಾದ ಬೆಳೆಗಳಲ್ಲಿ ಸುಮಾರು ಶೇ.80ರಷ್ಟು ನಷ್ಟ ಸಂಭವಿಸಿದೆ. ರೈತರು ಮತ್ತು ಗ್ರಾಮೀಣ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಲಾಶಯಗಳಿಗೆ ನೀರಿನ ಹರಿವು ಕಡಿಮೆ ಆಗಿದೆ. ಅಂತರ್ಜಲ ಮಟ್ಟ ಕುಸಿದಿರುವುದರಿಂದ ನೀರಿನ ಭದ್ರತೆಗೂ ಧಕ್ಕೆಯಾಗಿದೆ ಎಂದು ಹೇಳಿದ್ದಾರೆ. ಪುಟ 2ಕ್ಕೆ

### ಬರ ನಿಯಮ ಬದಲಿಸಿ

ಬರ ಪರಿಹಾರ ವ್ಯವಸ್ಥೆಯನ್ನು ಆಧುನೀಕರಿಸುವಂತೆ ಕೇಂದ್ರ ಸರ್ಕಾರವನ್ನು ಪರಮೇಶ್ವರ್ ಒತ್ತಾಯಿಸಿದ್ದಾರೆ. ಸಣ್ಣ ಮತ್ತು ಅತಿ ಸಣ್ಣ ರೈತರ ಗುರುತಿಸುವಿಕೆಗೆ 2015–16ರ ಕೃಷಿ ಜನಗಣತಿ ಮಾಹಿತಿಯ ಬದಲಾಗಿ, ಕರ್ನಾಟಕ ಸರ್ಕಾರದ ನವೀಕರಿಸಿದ ಡೇಟಾಬೇಸ್ ಅನ್ನು ಪರಿಗಣಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಪುಟ 2ಕ್ಕೆ

### ಮಳೆ ಕೊರತೆಯೇ ಮಾನದಂಡ

ಬಿತ್ತನೆ ಅವಧಿಯಲ್ಲಿ ಶೇ.20ರಿಂದ ಶೇ.59ರವರೆಗಿನ ಮಳೆ ಕೊರತೆಯನ್ನೂ ಬರ ಘೋಷಣೆಯ ಮಾನದಂಡವಾಗಿ ಪರಿಗಣಿಸಬೇಕು ಎಂದು ಡಿಸಿಎಂ ಪರಮೇಶ್ವರ್ ಅವರು ಕೇಂದ್ರ ಪುಟ 2ಕ್ಕೆ

# ಮಕ್ಕಳ ಹಕ್ಕುಗಳ ರಕ್ಷಿಸಿ

## ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಹೇಳಿಕೆ

**ಚಾಮರಾಜನಗರ,** ಮಕ್ಕಳಿಗೆ ಕುಟುಂಬದ ಸದಸ್ಯರ ಜೊತೆ ಬದುಕುವ ಹಕ್ಕು ಇದ್ದು, ಇದಕ್ಕೆ ಚ್ಯುತಿ ಬಾರದಂತೆ ರಕ್ಷಣೆ ಮಾಡಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್ ಅವರು ತಿಳಿಸಿದರು.

ಮಲ್ಲಯ್ಯನಪುರದ ಪಿ.ಎಂ.ಶ್ರೀ ಆದರ್ಶ ವಿದ್ಯಾಲಯದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳ ಅರಿವು ಮತ್ತು ನೆರವು ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಿಗೆ ಸಂಬಂಧಿಸಿದಂತೆ ಸಾಕಷ್ಟು ಹಕ್ಕುಗಳಿವೆ. ಇವುಗಳಲ್ಲಿ ಬದುಕುವ, ಅಭಿವೃದ್ಧಿ ಹೊಂದುವ, ಭಾಗವಹಿಸುವ, ದೌರ್ಜನ್ಯದಿಂದ ರಕ್ಷಣೆ ಪಡೆಯುವ ಹಕ್ಕುಗಳು ಮುಖ್ಯವಾಗಿದೆ. 6 ರಿಂದ 14 ವರ್ಷದ ಮಕ್ಕಳು ಕಡ್ಡಾಯವಾಗಿ ಶಿಕ್ಷಣ ಪಡೆಯಲೇಬೇಕು. 14 ವರ್ಷದ ಒಳಗಿನ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ದುಡಿಮೆಗಾಗಿ ಬಳಸಿಕೊಳ್ಳುವುದು, ಮಕ್ಕಳನ್ನು ಕದ್ದು ಸಾಗಾಣೆ ಮಾಡುವುದು, ಹೆಣ್ಣು ಮಕ್ಕಳನ್ನು ಲೈಂಗಿಕ ಕೃತ್ಯಗಳಿಗೆ ತೊಡಗಿಸುವುದು, ಬಿಕ್ಷಾಟನೆ ಯಂತಹ ಪ್ರಕರಣಗಳು ಕಂಡುಬಂದರೆ ಅಂತಹವರಿಗೆ ಮಕ್ಕಳ ರಕ್ಷಣೆ ಹಕ್ಕುಗಳ ಅಡಿಯಲ್ಲಿ ಕಠಿಣ ಶಿಕ್ಷೆಯಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಮಹದೇವಸ್ವಾಮಿ ಅವರು ಆದರ್ಶ ವಿದ್ಯಾಲಯವು ಪಟ್ಟಣದ ಹೊರವಲಯದಲ್ಲಿ ಇರುವುದರಿಂದ ರಕ್ಷಣೆಗಾಗಿ ಶಾಲೆಗೆ ಕಾಂಪೌಂಡ್ ವ್ಯವಸ್ಥೆಯಾಗಬೇಕಿದೆ. ಸಂಸ್ಥೆಗೆ ಅಗತ್ಯವಿರುವ ಮೂಲ ಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸಲು ಸಂಬಂಧಪಟ್ಟ ಇಲಾಖೆ ಗಮನ ಹರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮಕ್ಕೂ ಮೊದಲು ಶಾಲಾ ಆವರಣದಲ್ಲಿ ನ್ಯಾಯಾಧೀಶರು ಹಾಗೂ ಇತರೆ ಗಣ್ಯರು ಗಿಡ ನೆಟ್ಟು ನೀರೆರೆದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಭಾರ ಉಪನಿರ್ದೇಶಕರು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಲತಾ, ಬಾಲನ್ಯಾಯ ಮಂಡಳಿ ಸದಸ್ಯರಾದ ಗಂಗಾಧರಸ್ವಾಮಿ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಹಾಗೂ ಶಿವಪುರ ಗ್ರಾಮ ಪಂಚಾಯಿತಿಯ ಆಡಳಿತ ಅಧಿಕಾರಿ ಕೆ.ಎಲ್. ಶಾಂತಮ್ಮ, ಮಹಿಳಾ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರಾದ ಕೆ.ರಘು, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ, ವೈದ್ಯಾಧಿಕಾರಿ ಉಮಾರಾಣಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಫೈಸಲ್ ಉರ್ ರೆಹಮನ್ ಶೆರೀಫ್, ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರಾದ ವಿ.ಜಿ. ತ್ಯಾಗರಾಜಮೂರ್ತಿ, ಪ್ರಾಂಶುಪಾಲರಾದ ಲಿಂಗಯ್ಯ, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಅರುಣ್‌ಕುಮಾರ್, ಸಮಷ್ಠಿ ಸಮಗ್ರ ಅಭಿವೃದ್ಧಿ ಟ್ರಸ್ಟ್‌ನ ಕಾರ್ಯಕ್ರಮ ಸಂಯೋಜಕರಾದ ಮಣಿ, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.




### ಬಾಲ್ಯವಿವಾಹ ತಡೆಗೆ ಮುಂದಾಗಿ

ಬಾಲ್ಯವಿವಾಹ ತಡೆಗೆ ಮುಂದಾಗಬೇಕು. ಎಲ್ಲಿಯೇ ಆಗಲಿ ಬಾಲ್ಯವಿವಾಹ ನಡೆಯುವ ಸುಳಿವು ಕಂಡುಬಂದಲ್ಲಿ 1098 ಗೆ ಕರೆ ಮಾಡಬೇಕು ಅಥವಾ ಪೊಲೀಸ್ ಠಾಣೆಯ 112ಗೆ ಕರೆ ಮಾಡಿ ದೂರು ಸಲ್ಲಿಸಬೇಕು. ವಿದ್ಯಾರ್ಥಿಗಳು ಅನಗತ್ಯ ವಿಷಯಗಳತ್ತ ಆಕರ್ಷಿತರಾಗದೇ ಕ್ರೀಡೆಗಳ ಬಗ್ಗೆ ಗಮನ ನೀಡಬೇಕು. ಇದರಿಂದ ಆರೋಗ್ಯ ವೃದ್ಧಿ ಮತ್ತು ಓದಿನ ಕಡೆ ಏಕಾಗ್ರತೆ ಹೆಚ್ಚುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಅವರು ಸಲಹೆ ಮಾಡಿದರು.

# ರೈತರ ಹಲ್ಲೆಗೆ ಖಂಡನೆ

## ಕ್ರಮಕ್ಕೆ ಸರ್ಕಾರಿ ನೌಕರರ ಸಂಘ ಒತ್ತಾಯ

ರಾಮನಗರ: ಬಿಡದಿ ಹೋಬಳಿಯಲ್ಲಿ ಉದ್ದೇಶಿತ ಸಮಗ್ರ ಉಪನಗರ ನಿರ್ಮಾಣಕ್ಕೆ ಭೂಸ್ವಾಧೀನ ವಿಚಾರದಲ್ಲಿ ಸರ್ವೆಗೆ ತೆರಳಿದ್ದ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಗೆ ರೈತರು ಪೊರಕೆಯಲ್ಲಿ ಏಟು ಕೊಟ್ಟಿರುವುದನ್ನು ಜಿಲ್ಲಾ ಸರ್ಕಾರಿ ನೌಕರರ ಸಂಘ ಖಂಡಿಸಿದೆ. ಅಧಿಕಾರಿಗಳು ಮತ್ತು ನೌಕರರಿಗೆ ಜಿಲ್ಲಾಡಳಿತ ಮತ್ತು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಜಿಬಿಎ) ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಸಂಘ ಆಗ್ರಹಿಸಿದೆ.

ಈ ಸಂಬಂಧ ಕಂದಾಯ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಸತೀಶ್ ಮಾತನಾಡಿದರು. ಸರ್ಕಾರದ ನಿಯಮಗಳನ್ನು, ಸೂಚನೆಗಳನ್ನು ಆಧರಿಸಿ ಅಧಿಕಾರಿಗಳು ಮತ್ತು ನೌಕರರು ತಮ್ಮ ಕರ್ತವ್ಯವನ್ನು ನಿರ್ವಹಿಸಲು ಸರ್ವೆ ಕಾರ್ಯಕ್ಕೆ ತೆರಳಿದ್ದಾರೆ. ಆದರೆ ಭೂಸ್ವಾಧೀನವನ್ನು ವಿರೋಧಿಸುತ್ತಿರುವ ರೈತರು ಇವರ ಮೇಲೆ ಹಲ್ಲೆ ನಡೆಸಿರುವುದು ಸರಿಯಲ್ಲ. ಮಾತಿನ ಮೂಲಕವೇ ಅಧಿಕಾರಿಗಳು ಮತ್ತು ನೌಕರರನ್ನು ಹಿಂದಕ್ಕೆ ಕಳುಹಿಸಬಹುದಿತ್ತು. ಮೇಲಾಗಿ ಭೂಸ್ವಾಧೀನಕ್ಕೆ ಅನುಮತಿ ಕೊಟ್ಟ ಮಾಲೀಕರ ಭೂಮಿಯ ಸರ್ವೆಗೆ ಅಧಿಕಾರಿಗಳು ತೆರಳಿದ್ದರು. ವಿರೋಧ ವ್ಯಕ್ತಪಡಿಸುತ್ತಿರುವವರ ಭೂಮಿಯ ಸರ್ವೆಗೆ ಅಲ್ಲ ಎಂದು ಅವರು ತಿಳಿಸಿದರು.

ಈ ವೇಳೆ ಶಿವಸ್ವಾಮಿ, ಬೈರಪ್ಪ, ಜಯಪ್ರಕಾಶ್, ಶಿವಕಲ್ಲಯ್ಯ, ಆಂಜನೇಯ, ಮಹೇಶ್, ಮಂಜುನಾಥ್ ಮುಂತಾದವರು ಉಪಸ್ಥಿತರಿದ್ದರು.




### ಕಠಿಣ ಕ್ರಮಕ್ಕೆ ಒತ್ತಾಯ

ಸರ್ಕಾರಿ ನೌಕರರಿಗೂ ವೈಯಕ್ತಿಕ ಬದುಕಿದೆ. ಕುಟುಂಬವಿದೆ. ಹಲ್ಲೆ ಘಟನೆಯಿಂದಾಗಿ ಕುಟುಂಬಸ್ಥರು ದಿಗ್ಭ್ರಾಂತರಾಗಿದ್ದಾರೆ. ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಬೇಕೆ ಹೊರತು ನೌಕರರ ಮೇಲೆ ಹಲ್ಲೆ ಮಾಡಿರುವುದನ್ನು ಸಂಘ ಸಹಿಸುವುದಿಲ್ಲ. ಹಲ್ಲೆ ಮಾಡಿದ ಪ್ರತಿಯೊಬ್ಬರ ವಿರುದ್ಧವೂ ಕಾನೂನಿನ್ವಯ ಕಠೀಣ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಈ ವಿಚಾರದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿರುವುದಾಗಿ ತಿಳಿಸಿದರು. ಸರ್ಕಾರಿ ನೌಕರರ ಮೇಲೆ ಈ ರೀತಿಯ ಹಲ್ಲೆಗಳ ಘಟನೆಗಳು ಪದೇ ಪದೇ ಮರುಕಳಿಸುತ್ತಿದೆ. ಸರ್ಕಾರ ಸೂಕ್ತ ಕಾನೂನನ್ನು ಜಾರಿಗೊಳಿಸಿ ಸರ್ಕಾರಿ ನೌಕರರನ್ನು ರಕ್ಷಿಸಬೇಕು. ಸರ್ವೆ ಕಾರ್ಯಕ್ಕೆ ಹೊರಟ ಎಲ್ಲಾ ನೌಕರರಿಗೆ ಸೂಕ್ತ ಭದ್ರತೆ ಒದಗಿಸಬೇಕು ಎಂದು ಪೊಲೀಸ್ ಇಲಾಖೆ ಮತ್ತು ಜಿಲ್ಲಾಡಳಿತ, ಜಿಬಿಡಿಎ ಸಹ ಈವಿಚಾರದಲ್ಲಿ ಅಗತ್ಯ ವ್ಯವಸ್ಥೆಯನ್ನು ಕೈಗೊಳ್ಳಬೇಕು ಕೆ.ಸತೀಷ್ ಮನವಿ ಮಾಡಿದರು.

### ಮಾನಸಿಕವಾಗಿ ಕುಗ್ಗಿರುವ ಕುಟುಂಬಸ್ಥರು

ಸರ್ಕಾರಿ ಅಧಿಕಾರಿಗಳು ಮತ್ತು ನೌಕರರ ಮೇಲೆ ನಡೆದಿರುವ ಹಲ್ಲೆಯಿಂದಾಗಿ ಇಡೀ ಸರ್ಕಾರಿ ನೌಕರರಿಗೆ ಮಾನಸಿಕವಾಗಿ ಘಾಸಿಯಾಗಿದೆ. ನಮ್ಮದಲ್ಲದ ತಪ್ಪಿಗೆ ನಮ್ಮ ಮೇಲೆ ಹಲ್ಲೆ ನಡೆದಿದೆ. ಮೇಲಾಗಿ ಟಿವಿ ಚಾನಲ್‌ಗಳಲ್ಲಿ ಪದೇ ಪದೇ ಹಲ್ಲೆ ಮಾಡುತ್ತಿರುವ ದೃಶ್ಯಗಳನ್ನು ಪ್ರಸಾರ ಮಾಡುತ್ತಿರುವದರಿಂದ ಹಲ್ಲೆಗೆ ಒಳಗಾಗದ ನೌಕರರು, ಅಧಿಕಾರಿಗಳ ಕುಟುಂಬದ ಸದಸ್ಯರು ಮಾನಸಿಕವಾಗಿ ಕುಗ್ಗಿ ಹೋಗಿದ್ದಾರೆ. ಚಿಕ್ಕ ಮಕ್ಕಳನ್ನು ಅವರ ಸ್ನೇಹಿತರು ಇದೇ ವಿಚಾರದಲ್ಲಿ ಪ್ರಶ್ನಿಸುತ್ತಿದ್ದಾರೆ. ಹೀಗಾಗಿ ಮಾಧ್ಯಮಗಳು ಈ ವೀಡಿಯೋಗಳ ಪ್ರಸಾರವನ್ನು ನಿಲ್ಲಿಸಬೇಕು ಎಂದು ಮನವಿ ಮಾಡಿದರು.

ಮೊದಲ ಪುಟದಿಂದ

## ಬರ: ರಾಷ್ಟ್ರೀಯ ವಿಪತ್ತು ಘೋಷಿಸಿ

ಪರಿಸ್ಥಿತಿಯ ಗಂಭೀರತೆಯನ್ನು ಗಮನಿಸಿ, ರಾಜ್ಯದ ಬರ ಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಬೇಕು. ಅಥವಾ ಅದಕ್ಕೆ ಸಮಾನವಾದ ವಿಶೇಷ ಆರ್ಥಿಕ ನೆರವನ್ನು ಕೇಂದ್ರ ಸರ್ಕಾರ ನೀಡಬೇಕು. ರೈತರ ಹಿತಾಸಕ್ತಿ, ಗ್ರಾಮೀಣ ಜನರ ಜೀವನೋಪಾಯ ಹಾಗೂ ರಾಜ್ಯದ ಕುಡಿಯುವ ನೀರಿನ ಭದ್ರತೆಯನ್ನು ಕಾಪಾಡಲು ಕೇಂದ್ರ ಸರ್ಕಾರ ತಕ್ಷಣ ಮಧ್ಯಪ್ರವೇಶಿಸುವುದು ಅತ್ಯಗತ್ಯ ಎಂದು ಪರಮೇಶ್ವರ್ ಆಗ್ರಹಿಸಿದ್ದಾರೆ.

### ಮಳೆ ಕೊರತೆಯೇ ಮಾನದಂಡ

ಸರ್ಕಾರವನ್ನು ಆಗ್ರಹಿಸಿದ್ದಾರೆ. ಪ್ರಸ್ತುತ ಇರುವಂತೆ ಕೇವಲ ಋತುಮಾನದ ಒಟ್ಟು ಮಳೆಯ ಪ್ರಮಾಣವನ್ನು ಮಾತ್ರ ಆಧಾರವಾಗಿಟ್ಟುಕೊಳ್ಳದೆ, ಮಳೆ ಕೊರತೆಯನ್ನೂ ಪರಿಗಣಿಸುವಂತೆ ಮನವಿ ಮಾಡಿದ್ದಾರೆ.

ಇದಲ್ಲದೆ, ಸ್ಥಳೀಯ ಕೃಷಿ ಹಾಗೂ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಒಣ ಅವಧಿ ಎಂಬ ವ್ಯಾಖ್ಯಾನವನ್ನು ಪರಿಷ್ಕರಿಸಬೇಕು. ಬೆಳೆ ಬಿತ್ತನೆ ಪೂರ್ಣಗೊಳ್ಳುವವರೆಗೆ ಕಾಯದೆ, ಆರಂಭಿಕ ಹಂತದಲ್ಲಿಯೇ ರಾಜ್ಯ ಸರ್ಕಾರಗಳಿಗೆ ಬರ ಘೋಷಿಸುವ ಅವಕಾಶ ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ಕೋರಿದ್ದಾರೆ.

### ತರಗತಿಗೂ ಪಾಠ ಮಾಡಬೇಕು

ನೇಮಕಾತಿ ಪ್ರಕ್ರಿಯೆಯನ್ನು ಸಹ ಆರಂಭಿಸಿದೆ. ನೇಮಕಾತಿ ಸಂಬಂಧ ಸರ್ಕಾರ ಕರಡು ಗೆಜೆಟ್ ಅಧಿಸೂಚನೆ ಪ್ರಕಟಿಸಿದೆ. ಆಕ್ಷೇಪಣೆಗೆ 15 ದಿನಗಳ ಅವಕಾಶವನ್ನು ನೀಡಿದೆ. ಕಲ್ಯಾಣ ಕರ್ನಾಟಕಕ್ಕೆ 6905 ಹಾಗೂ ಇತರೆ ಜಿಲ್ಲೆಗಳಿಗೆ 8095 ಹುದ್ದೆ ನೇಮಕಕ್ಕೆ ಅಧಿಸೂಚನೆ ಹೊರಡಿಸಲಾಗಿದೆ.

### ಸಂಪುಟ ಚರ್ಚೆ: ಬರಿಗೈಲಿ ವಾಪಸ್

ಮೊಟಕುಗೊಳಿಸಲಾಗಿದೆ. ನವದೆಹಲಿಗೆ ಖರ್ಗೆ ಅವರು ವಾಪಸ್ ಬಂದ ಬಳಿಕ ಮತ್ತೆ ಈ ಬಗ್ಗೆ ಸಭೆ ನಡೆಯಲಿದೆ. ರಾಹುಲ್ ಗಾಂಧಿ ಜೊತೆಗೆ ರಾಜ್ಯದ ನಾಯಕರು ಪ್ರಾಥಮಿಕ ಹಂತದ ಚರ್ಚೆ ನಡೆಸಿದ್ದಾರೆ. ಖರ್ಗೆ ಬಂದ ಬಳಿಕ ವಿಸ್ತೃತ ಚರ್ಚೆ ಮಾಡುವುದಾಗಿ ರಾಹುಲ್ ಗಾಂಧಿ ಹೇಳಿದ್ದಾರೆ. ಅಗತ್ಯ ಬಿದ್ದರೆ ವಾಪಸ್ ಕರೆಯುವುದಾಗಿಯೂ ತಿಳಿಸಿದ್ದಾರೆ ಎಂದು ತಿಳಿದುಬಂದಿದೆ.

### ಪಕ್ಷದ ನಿಷ್ಠರಿಗೆ ಮಣೆ ಹಾಕಿ

ಪಕ್ಷವನ್ನು ಬಲಪಡಿಸಲು ಸಕ್ರಿಯವಾಗಿ ಶ್ರಮಿಸಬಲ್ಲ ನಾಯಕರತ್ತ ಹೈಕಮಾಂಡ್ ಗಮನಹರಿಸಬೇಕು ಎಂದು ಕಾಂಗ್ರೆಸ್ ಶಾಸಕ ಸಿಎಸ್ ನಾಡಗೌಡ ಅಭಿಪ್ರಾಯಪಟ್ಟರು.

### ಬರ ನಿಯಮ ಬದಲಿಸಿ

ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್ ಮಾರ್ಗಸೂಚಿಗಳು ಹಾಗೂ 2020ರ ಬರ ಕೈಪಿಡಿಯಲ್ಲಿರುವ ಬೆಳೆ ನಷ್ಟ ಪರಿಹಾರ ಮಾನದಂಡಗಳನ್ನು ಏಕರೂಪಗೊಳಿಸುವ ಮೂಲಕ ರೈತರಿಗೆ ತ್ವರಿತ ಮತ್ತು ನ್ಯಾಯಸಮ್ಮತ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

# 277 ರೈತರಿಗೆ ಚೆಕ್ ವಿತರಣೆ

ಕೆ.ಆರ್.ಪೇಟೆ: ರೈತರ ಆರ್ಥಿಕ ಸ್ಥಿತಿ ಸುಧಾರಣೆ ಹಾಗೂ ಹಾಲು ಉತ್ಪಾದನೆ ಹೆಚ್ಚಿಸುವ ಉದ್ದೇಶದಿಂದ ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಕೆ.ಆರ್.ಪೇಟೆ ವತಿಯಿಂದ ವಿವಿಧ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಚೆಕ್ ವಿತರಣಾ ಕಾರ್ಯಕ್ರಮವನ್ನು ಮಂಡ್ಯ ಜಿಲ್ಲಾ ಹಾಲು ಒಕ್ಕೂಟ ಉಪ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮನ್ ಮುಲ್ ನಿರ್ದೇಶಕರಾದ ಡಾಲು ರವಿ ಮತ್ತು ಎಂ.ಬಿ.ಹರೀಶ್ನೇತೃತ್ವದಲ್ಲಿ ಒಟ್ಟು 277 ಫಲಾನುಭವಿಗಳಿಗೆ 62, 97,047 ರೂ. ಮೊತ್ತದ ಚೆಕ್ ವಿತರಿಸಲಾ ಯಿರಾಸು ವಿಮೆ ಚೆಕ್31 ಫಲಾನುಭವಿಗಳಿಗೆ 16,20,000 ರೂ. ವಿತರಿಸಲಾಯಿತು. ರಾಸು ಸಾವನ್ನಪ್ಪಿದ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ ಈ ವಿಮಾ ಮೊತ್ತ ನೀಡಲಾಗಿದೆ. ಗುಂಪು ವಿಮಾ ಯೋಜನೆ4 ಫಲಾನುಭವಿಗಳಿಗೆ 2,00,000 ರೂ. ಚೆಕ್ ನೀಡಲಾಯಿತು.

ರೈತ ಕಲ್ಯಾಣ ಟ್ರಸ್ಟ್ ಚೆಕ್33 ಫಲಾನುಭವಿಗಳಿಗೆ 4,95,000 ರೂ. ವಿತರಿಸಲಾಯಿತು. ಈ ಮೂಲಕ ರೈತರ ಕುಟುಂಬದ ಕಲ್ಯಾಣಕ್ಕೆ ಒತ್ತು ನೀಡಲಾಗಿದೆ.



ಅತೀ ಹೆಚ್ಚು 209 ಫಲಾನುಭವಿಗಳಿಗೆ 39,82,047 ರೂ. ಚೆಕ್ ವಿತರಿಸಲಾಯಿತು. ಯಾಂತ್ರೀಕರಣದಿಂದ ಹಾಲು ಕರೆಯುವ ಕೆಲಸ ಸುಲಭವಾಗಲಿದೆ. ನಿರ್ದೇಶಕ ಡಾಲು ರವಿ, ನಿರ್ದೇಶಕ ಎಂ.ಬಿ.ಹರೀಶ್‌ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ವಿವಿಧ ಹಾಲು ಉತ್ಪಾದಕರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ನೂರಾರು ರೈತರು ಮತ್ತು ಒಕ್ಕೂಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಚೆಕ್ ಪಡೆದ ರೈತರು ಒಕ್ಕೂಟದ ಈ ಕ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

# ಕಂಬಳಕ್ಕೆ ಆಗ್ರಹಿಸಿದ ರಕ್ಷಣಾ ವೇದಿಕೆ

ಮೈಸೂರು: ವಾಸ್ತವವಾಗಿ ವಿಜಯನಗರದ ಅರಸರ ಕಾಲದ ದಸರಾವನ್ನು ಮೈಸೂರು ಅರಸರೂ ಮುಂದುವರಿಸಿದ್ದಾರೆ. ಇಲ್ಲಿನ ಜಟ್ಟಿ ಕಾಳಗ ಸಹಾ ಹೊರಗಿನಿಂದ ಬಂದುದೇ ಆಗಿದೆ. ಹೀಗಿರುವಾಗ ಈ ಬಾರಿ ಕಂಬಳ ಆಯೋಜನೆ ತಪ್ಪಲ್ಲ. ಸಂಸದ ಯದುವೀರ್ ಇದರ ಅರಿವಿನಿಂದ ಕಂಬಳವನ್ನು ಸ್ವಾಗತಿಸಬೇಕಾಗಿತ್ತು. ಇದೇ ವೇಳೆ ಸಮೂಹ ಸನ್ನಿ ಎಂಬಂತೆ ಇತರರು ಸಹಾ ಢೋಂಗಿ ಪರಿಸರವಾದಿಗಳ ವಾದ ಅನುಸರಿಸಿ ಕಂಬಳ ವಿರೋಧಿಸುತ್ತಿದ್ದಾರೆ ಎಂದು ಮೈಸೂರು ರಕ್ಷಣಾ ವೇದಿಕೆ ಅಧ್ಯಕ್ಷ ಮೈ.ಕಾ. ಪ್ರೇಮ್ ಕುಮಾರ್ ವಾಗ್ದಾಳಿ ನಡೆಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಂಬಳಕ್ಕೆ ಸುಮಾರು 800 ವರ್ಷಗಳ ಇತಇಹಾಸವಿದೆ. ವರ್ಷವಿಡೀ ತಮ್ಮ ಜಮೀನಿನಲ್ಲಿ ದುಡಿದ ರೈತರು ಬಲಿಷ್ಠ ಕೋಣಗಳ ಸಾಹಸ ಮತ್ತು ಸಾಮರ್ಥ್ಯ ಪ್ರದರ್ಶಿಸುವ ಒಂದು ಸಾಹಸ ಕ್ರೀಡೆಯಾಗಿದೆ. ಇದನ್ನು ಸರ್ಕಾರ ದಸರಾ ವೇಳೆ ಆಯೋಜಿಸುತ್ತಿರುವುದು ಸ್ವಾಗತಾರ್ಹ. ಇದಕ್ಕಾಗಿ ತಾನಾಗೇ ಬೆಳೆದ ಬೆಲೆಬಾಳದ ಕುರುಚಲು ಗಿಡಗಳಂತಹ ಮರ ಕಡಿಯುವುದು ತಪ್ಪಲ್ಲ, ಹೀಗಾಗಿ ಢೋಂಗಿ ಪರಿಸರ ವಾದಿಗಳ ವಾದಕ್ಕೆ ಇತರರು ಮಣಿಯಬಾರದು. ಜೊತೆಗೆ ಸರ್ಕಾರ ಸಹಾ ಇವರ ಆಕ್ಷೇಪಕ್ಕೆ ಸೊಪ್ಪು ಹಾಕಬಾರದೆಂದರು.




ಕಂಬಳ ಕ್ರೀಡೆ ನಡೆಸಲು ನೀಡಿರುವ ಜಾಗ ಭವಿಷ್ಯದಲ್ಲಿ ಯಾವುದಾದರೊಂದು ಸಾರ್ವಜನಿಕ ಉದ್ದೇಶಕ್ಕೆ ಮೀಸಲಿಟ್ಟದ್ದಾಗಿದೆ. ಇದಲ್ಲದೆ, ಇಲ್ಲಿನ ಮರ ಕಡಿಯಬಾರದೆಂದು ಅರಣ್ಯ ಇಲಾಖೆಗೆ ದೂರು ನೀಡುವುದು, ಇದರ ಅಡಿಯಲ್ಲಿ ಇಲಾಖೆ ಎಫ್‌ಐಆರ್ ದಾಖಲಿಸುವುದು ಸರಿಯಲ್ಲ. ಈ ಢೋಂಗಿ ಪರಿಸರ ವಾದಿಗಳು ಕುಕ್ಕರಹಳ್ಳಿ ಬಳಿಯ ರೈಲ್ವೆ ಗೇಟ್‌ನಿಂದ ಸಾರ್ವಜನಿಕರಿಗೆ ಆಗಾಗ್ಗೆ ಆಗುತ್ತಿರುವ ಕಿರಿಕಿರಿ ತಪ್ಪಿಸಲು ಅಂಡರ್ ಬ್ರಿಡ್ಜ್ ಅಥವಾ ಓವರ್ ಬ್ರಿಡ್ಜ್ ನಿರ್ಮಾಣಕ್ಕೂ ವಿರೋಧ ವ್ಯಕ್ತಪಡಿಸಿದ್ದಾರೆ. ಇವರು ಸದಾ ಮೈಸೂರಿನ ಅಭಿವೃದ್ಧಿಗೆ ಅಡ್ಡಗಾಲು ಹಾಕುತ್ತಿರುವವರಾಗಿದ್ದಾರೆ ಎಂದು ಕಟುವಾಗಿ ಟೀಕಿಸಿದರು. ಉಪಾಧ್ಯಕ್ಷ ಕುಮಾರ್‌ಗೌಡ

# ಇಂದು ರಾಜ್ ಕುಟುಂಬ ಗಾನ ಕಾರ್ಯಕ್ರಮ

ಮೈಸೂರು: ಗಾನ ನಂದನ, ಅಲೆಯನ್ಸ್ ಕ್ಲಬ್ ಆಫ್ ಮೈಸೂರು ನಾಲ್ವಡಿ ವತಿಯಿಂದ ಇಲ್ಲಿನ ನಾದಬ್ರಹ್ಮ ಸಭಾಂಗಣದಲ್ಲಿ ಜುಲೈ 17ರಂದು ಡಾ.ರಾಜ್ ಕುಟುಂಬ ಗಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕ್ಲಬ್ ಅಧ್ಯಕ್ಷ ಎನ್.ಬೆಟ್ಟೇಗೌಡ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್‌ಕುಮಾರ್ ಹಾಗು ಅವರ ಕುಟುಂಬದ ನಟರ ಸಿನಿಮಾ ಹಾಡುಗಳನ್ನು 8 ಮಂದಿ ಹವ್ಯಾಸಿ ಗಾಯಕರು ಪ್ರಸ್ತುತಪಡಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ಉಪ ನಿರ್ದೇಶಕ ಎಂ.ಡಿ.ಸುದರ್ಶನ್ ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಸುಗಮ ಸಂಗೀತ ಪರಿಷತ್ ನಗರ ಘಟಕದ ಅಧ್ಯಕ್ಷ ನಾಗರಾಜು ವಿ.ಭೈರಿ ಅಧ್ಯಕ್ಷತೆ ವಹಿಸುವರು ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಹವ್ಯಾಸಿ ಗಾಯಕರ ನಾಗೇಂದ್ರ, ನಟರಾಜ್ ಇದ್ದರು.




# ಬೇಡಿಕೆಗಳ ಈಡೇರಿಕೆಗೆ ಒತ್ತಾಯ

**ಚಾಮರಾಜನಗರ,** ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜಿಲ್ಲಾ ಅಂಗ ವಿಕಲರ ಕ್ಷೇಮಾಭಿವೃದ್ಧಿ ಸಮಿತಿ ವತಿಯಿಂದ ಗುರುವಾರ ಪ್ರತಿಭಟನೆ ನಡೆಯಿತು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಜೈ ಭುವನೇಶ್ವರಿ ವೃತ್ತ, ಶ್ರೀ ಬಿ.ರಾಚಯ್ಯ ಜೋಡಿ ರಸ್ತೆಯ ಮೂಲಕ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆ ಕೂಗುತ್ತ ಜಿಲ್ಲಾಡಳಿತ ಭವನ ತೆರಳಿದರು. ಇದೆ ವೇಳೆ ಸಂಘದ ಜಿಲ್ಲಾಧ್ಯಕ್ಷ ಸಿದ್ದನಪುರ ರಮೇಶ್ ಮಾತನಾಡಿ,ಇಂದಿರಾ ಗಾಂಧಿ ರಾಷ್ಟ್ರೀಯ ಯೋಜನೆಯಾದ ವಿಕಲಚೇತನರ ಮತ್ತು ವೃದ್ಧಾಪ್ಯ ಹಾಗೂ ವಿಧವ ವೇತನದ ಕುಟುಂಬ ವಾರ್ಷಿಕ ಆದಾಯ ಮಿತಿಯನ್ನು ರೂ.32 ಸಾವಿರ ರೂ.ಗಳನ್ನು ರದ್ದುಪಡಿಸಿ ರೂ.2 ಲಕ್ಷ ಗಳಿಗೆ ಹೆಚ್ಚಿಸುವುದು.ಈಗಾಗಲೇ ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ ಮೂರು ತಿಂಗಳ ಪಿಂಚಣಿ ವೇತನವನ್ನು ಅತೀ ಶೀಘ್ರದಲ್ಲಿ ಬಿಡುಗಡೆ ಮಾಡುವುದು, ಮಾಸಾಸನ ರೂ.800, ರೂ.1,400 ರೂ.ಗಳ ಬದಲಿಗೆ ರೂ.3 ಸಾವಿರ ರೂ.ಗಳಿಗೆ ಏರಿಕೆ ಮಾಡುವುದು.ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವುದು.ಈಗಿರುವ ರಿಯಾಯಿತಿ ಬಸ್ ಪಾಸ್ ಅನ್ನು ರದ್ದುಪಡಿಸಿ ವಿಕಲ ಚೇತನರಿಗೂ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣ ಮಾಡಲು ಅವಕಾಶ ಕಲ್ಪಿಸುವುದು, ರಾಜ ಕೀಯ ಮೀಸಲಾತಿಯಲ್ಲಿ ವಿಕಲ ಚೇತನರಿಗೆ ಶೇಕಡಾ 5% ರಷ್ಟು ಮೀಸಲಾತಿ ನೀಡಿ ಸ್ಪರ್ಧಿಸಲು ಅವಕಾಶವನ್ನು ಕಲ್ಪಿಸಿಕೊಡಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಕೈಬಿಟ್ಟರು. ಪ್ರತಿಭಟನೆಯಲ್ಲಿ ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ್, ವಜ್ರಮಣಿ, ತಾಲೂಕು ಅಧ್ಯಕ್ಷ ರೂಪೇಶ್, ಮಹದೇವಸ್ವಾಮಿ ಸೇರಿದಂತೆ ಇತರರು ಭಾಗವಹಿಸಿದ್ದರು.




ಮೊದಲ ಪುಟದಿಂದ

## ಲಾಬಿ ಮಾಡಲ್ಲ

ಮಾತ್ರ ನಾನು ನನ್ನ ಅನಿಸಿಕೆ ಹಂಚಿಕೊಳ್ಳುತ್ತೇನೆ ಎಂದು ಅವರು ತಿಳಿಸಿದರು. ಸಚಿವ ಸಂಪುಟ ವಿಸ್ತರಣೆ ಅತ್ಯಂತ ಅಗತ್ಯವಾಗಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಎದುರಿಸಲು ಹಾಗೂ ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವುದರಿಂದ ಜನರ ಸಂಕಷ್ಟಕ್ಕೆ ಸ್ಪಂದಿಸಲು ಪೂರ್ಣ ಪ್ರಮಾಣದ ಮಂತ್ರಿ ಮಂಡಲದ ಅವಶ್ಯಕತೆ ಇದೆ ಎಂದು ಅವರು ಹೇಳಿದರು.

### ಎಂಎಲ್ಸಿ ಸ್ಥಾನ ರದ್ದು

ಮೀನಾ ನಾಗರಾಜ್ ವರದಿ ಸಲ್ಲಿಸಿದ್ದರು. ಈ ಮಧ್ಯೆ 2021ರ ವಿಧಾನ ಪರಿಷತ್ ಚುನಾವಣೆ ಮತಗಳ ಮರು ಎಣಿಕೆಗೆ ಆದೇಶಿಸಿದ್ದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಪ್ರಾಣೇಶ್ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಸರ್ವೋಚ್ಚ ನ್ಯಾಯಾಲಯ ಈ ಅರ್ಜಿಯನ್ನು ವಜಾಗೊಳಿಸಿದೆ.

### ಜು.20, 22 ಶುಭದಿನ

ಜು.20ರಂದೇ ಸಂಪುಟ ವಿಸ್ತರಣೆ ಆಗುವ ಸಾಧ್ಯತೆ ಇದೆ. ಅಲ್ಲದೆ ಅದೇ ದಿನ ನೂತನ ಸಚಿವರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎನ್ನಲಾಗಿದೆ.

## ಹೊಟ್ಟೆ ಉರಿಗೆ ಮಾತಾಡಬೇಡಿ!

ಯಾಕೆ ದೇವೇಗೌಡ ಹೋಗಿಲ್ಲ? ಕುಮಾರಸ್ವಾಮಿಗೆ ಮಾತುಕತೆಗೆ ಕರೆದರೆ ವಿಧಾನಸೌಧಕ್ಕೆ ಬರಲ್ಲ ಅಂತಾರೆ ಎಂದು ಲೇವಡಿ ಮಾಡಿದರು. ದೇವೇಗೌಡರು ಸತ್ಯಾಗ್ರಹ ಮಾಡ್ತೀನಿ ಅಂತಾರೆ. ನೀಟ್ ಲೋಪ ಆದಾಗ ಮಕ್ಕಳು ಆತ್ಮಹತ್ಯೆ ಮಾಡಿಕೊಂಡಾಗ ಈ ದೇವೇಗೌಡ ಮಾತೇ ಆಡಲಿಲ್ಲ. ದೇವನಹಳ್ಳಿಯಲ್ಲಿ ರೈತರು ಪ್ರತಿಭಟನೆ ಮಾಡಿದಾಗ ದೇವೇಗೌಡರು ಏಕೆ ಅಲ್ಲಿಗೆ ಹೋಗಿರಲಿಲ್ಲ ಎಂದು ಪ್ರಶ್ನೆ ಮಾಡಿದರು.

### ಪ್ರತ್ಯೇಕ ಸಭೆ

ಶಿವಕುಮಾರ್ ಅವರು ಕರ್ನಾಟಕ ಭವನದಲ್ಲಿ ಬೀಡುಬಿಟ್ಟಿರುವ ರಾಜ್ಯದ ಶಾಸಕರನ್ನು ಭೇಟಿಯಾದರು. ಕೆಲವು ಶಾಸಕರು ಸಚಿವ ಸ್ಥಾನಕ್ಕಾಗಿ ಡಿಕೆಶಿ ಮನವೊಲಿಸುವ ಯತ್ನ ನಡೆಸಿದ್ದಾರೆ.

## ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಬೆಂಬಲಿಸಿ ಧರಣಿ ಸತ್ಯಾಗ್ರಹ

# ಧರ್ಮೇಂದ್ರ ಪ್ರಧಾನ್ ರಾಜಿನಾಮೆಗೆ ಒತ್ತಾಯ

ಚಾಮರಾಜನಗರ, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ,ಅಕ್ರಮ ಖಂಡಿಸಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ಹಾಗೂ ಪರಿಸರ,ಮಾನವ ಹಕ್ಕುಗಳ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಬೆಂಬಲಿಸಿ ನಾಗರೀಕರಾದ ನಾವು ಸಮಿತಿ ಆಶ್ರಯದಲ್ಲಿ ಪ್ರಗತಿಪರ ಸಂಘಟನೆಗಳ ಮುಖಂಡರು ನಗರದ ಜಿಲ್ಲಾಢಳಿತ ಭವನದ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು.

ಬಳಿಕ ಸಾಮಾಜಿಕ ಹೋರಾಟಗಾರ ಕೆ.ವೆಂಕಟರಾಜು ಮಾತನಾಡಿ ನೀಟ್ ಹಗರಣ ಪ್ರಕರಣವನ್ನು ವಿರೋಧಿಸಿ, ಹಾಗೂ ಕೇಂದ್ರ ಸಚಿವ ಧರ್ಮೇಂದ್ರ ಪ್ರಸಾದ್ ರಾಜಿನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವುದಾಗಿ ಹೇಳಿದರು. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಅಕ್ರಮವನ್ನು ಖಂಡಿಸಿ ಪರಿಸರವಾದಿ ,ಮಾನವ ಹಕ್ಕುಗಳ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರು ಉಪವಾಸ ಸತ್ಯಾಗ್ರಹವನ್ನು ನಿಲ್ಲಿಸಬೇಕು ಎಂದು ಮನವಿ ಮಾಡಿಕೊಳ್ಳುತ್ತೇವೆ. ವಾಂಗ್ಚುಕ್ ಅವರ ಜೀವ ಅಮೂಲ್ಯ ಸದಾ ನಾವು ಅವರ ಬೆಂಬಲಕ್ಕಿರುತ್ತೇವೆ. ಅವರ ನೇತೃತ್ವದಲ್ಲಿ ನಡೆಯುವ ಹೋರಾಟದಲ್ಲಿ ಭಾಗಿಯಾಗುತ್ತೇವೆ ಎಂದು ಹೇಳಿದರು.




ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜಿನಾಮೆಗೆ ಒತ್ತಾಯಿಸಿ ದೆಹಲಿಯ ಜಂತರ್ ಮಂತರ್ ನಲ್ಲಿ ಕಾಕ್ರೋಚ್ ಪಾರ್ಟಿ ನಡೆಸುತ್ತಿರುವ ಹೋರಾಟಕ್ಕೆ ಸಂಪೂರ್ಣ ಬೆಂಬಲನೀಡಿತ್ತೇವೆ. ಅಗತ್ಯ ಬಿದ್ದರೆ ತೀವ್ರ ಸ್ವರೂಪದ ಹೋರಾಟಕ್ಕೂ ಸಿದ್ದರಾಗಿದ್ದೇವೆ ಎಂದು ಹೇಳಿದರು. ನಾಗರೀಕರಾದ ನಾವು ಸಮಿತಿಯ ಸಂಘಸೇನಾ, ಕೆ. ವೆಂಕಟರಾಜು, ಪುಣಜನೂರು ದೊರೆಸ್ವಾಮಿ, ಎ.ಡಿ.ಸಿಲ್ವ, ಅಂಬ್ರೋಸ್ ಡಿ ಮೆಲ್ಲೋ, ಡಾ.ಪೂರ್ಣಾನಂದ, ಸೈಯದ್ ಆರೀಫ್, ಬ್ರಿಜೇಶ್ ಒಲಿವೇರಾ, ಸಿ.ಮಹದೇವಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆರು ಮಂದಿಗೆ ಕೆಂಪೇಗೌಡ ಪ್ರಶಸ್ತಿ ಪ್ರಧಾನ



**ಮೈಸೂರು:** ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಆರು ಮಂದಿ ಸಾಧಕರಿಗೆ ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ನಗರದ ನಮನ ಕಲಾಮಂಟಪದಲ್ಲಿ ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನಾ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಯಪ್ಪಹೊನ್ನಾಳಿ(ಸಾಹಿತ್ಯ), ಡಾ. ಎಚ್.ಡಿ.ಸರಿತಾ(ಶಿಕ್ಷಣ), ಎಂ.ಎಸ್.ಸುಶೀಲಾ (ಸಮಾಜ ಸೇವೆ), ಬಿ.ಇ.ಗಿರೀಶ್ ಗೌಡ(ಸಮಾಜಸೇವೆ) ಹಾಗೂ ಕೆ.ಮಧು(ಉದ್ಯಮ) ಕ್ಷೇತ್ರದ ಸಾಧಕರಿಗೆ ಕಾರ್ಯಕ್ರಮ ಉದ್ಘಾಟಿಸಿದ ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ.ಯೋಗಣ್ಣ ಪ್ರಶಸ್ತಿ ಪ್ರಧಾನ ಮಾಡಿದರು.

ಬಳಿಕ ಮಾತನಾಡಿ, ಕೆಂಪೇಗೌಡರು ಜಾತ್ಯಾತೀತ ವಾಗಿ ಪೇಟೆಗಳನ್ನು ನಿರ್ಮಿಸಿ ಎಲ್ಲಾ ಸಮುದಾಯದ ನಾಯಕರಾದರು. ಬೆಂದಕಾಳೂರನ್ನು ಮುಂದೆ ಬೆಂಗಳೂರು ಆಗಿ ಪರಿವರ್ತಿಸಿ ಎಲ್ಲಾ ಸಮುದಾಯಕ್ಕೂ ಅಲ್ಲಿ ಆಸರೆಯಾಗುವಂತೆ ಮಾರುಕಟ್ಟೆಯನ್ನು ಸೃಷ್ಠಿ ಅನೇಕರಿಗೆ ನೆರಳಾಗಿದ್ದಾರೆ. ಅಂತಹವರ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವ ವೇದಿಕೆ ಕಾರ್ಯ ನಿಜಕ್ಕೂ ಶ್ಲಾಘನೀಯ. ಕೆಂಪೇಗೌಡರು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಮುಂದಿನ ಪೀಳೀಗೆಗೂ ಪರಿಚಯಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮ ಪೂರಕವಾಗಿವೆ ಎಂದರು. ಸಾಹಿತಿ ಹಾಗೂ ಸಂಸ್ಕೃತ ವಿದ್ವಾಂಸೆ ಡಾ.ಕೆ.ಲೀಲಾ ಪ್ರಕಾಶ್ ಪ್ರಧಾನ ಭಾಷಣ ಮಾಡಿದರು. ಸಂಧ್ಯಾಸುರಕ್ಷಾಟ್ರಸ್ಟ್ ಅಧ್ಯಕ್ಷ ಡಾ.ಬಿ.ಆರ್.ನಟರಾಜ್ ಜೋಯ್ಸ್ ಉಪಸ್ಥಿತಿಯೊಂದಿಗೆ ವೀರಗಾಸೆ ಕಲಾವಿದ ಅಂಬಳೆ ಶಿವಣ್ಣ ಅಧ್ಯಕ್ಷತೆವಹಿಸಿದ್ದರು. ನಗರಪಾಲಿಕೆ ಮಾಜಿ ಸದಸ್ಯ ಪಿ.ಪ್ರಶಾಂತ್‌ಗೌಡ, ಮೈಸೂರು ಶರಣ ಮಂಡಳಿ ಅಧ್ಯಕ್ಷ ಮೂಗೂರು ನಂಜುಂಡಸ್ವಾಮಿ ಅತಿಥಿಗಳಾಗಿದ್ದರು. ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ಬಸವರಾಜೇಂದ್ರಸ್ವಾಮಿ, ಆರ್.ಕೆ.ಸ್ವಾಮಿ, ವೀರಭದ್ರಸ್ವಾಮಿ, ಗುರುಮಲ್ಲೇಶ, ಸುಮ, ವೀಣಾ, ರೇಖಾ, ಪಂಚಾಕ್ಷರಿ ಉಪಸ್ಥಿತರಿದ್ದರು.

# ಬ್ಲಾಕ್‌ಬೆಲ್ಟ್ ಪ್ರಶಸ್ತಿ ಪ್ರದಾನ



ರಾಮನಗರ: ಬೆಂಗಳೂರು ದಕ್ಷಿಣ ಜಿಲ್ಲಾ ಟೇಕ್ವಾಂಡೋ ಸಂಸ್ಥೆ ವತಿಯಿಂದ 2026ನೇ ಸಾಲಿನ ಟೇಕ್ವಾಂಡೋ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಕ್ರೀಡಾ ಪಟುಗಳಿಗೆ ಬ್ಲಾಕ್ ಬೆಲ್ಟ್ ಪ್ರಶಸ್ತಿ ಪತ್ರಗಳನ್ನು ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ವಿತರಿಸಿದರು.

ಈ ವೇಳೆ ಮಾತನಾಡಿದ ಅವರು, ಕ್ರೀಡಾಪಟುಗಳು ಮುಂಬರುವ ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಶುಭ ಹಾರೈಸಿದರು. ಕಠಿಣ ಪರಿಶ್ರಮ, ಶಿಸ್ತು ಮತ್ತು ನಿರಂತರ ಅಭ್ಯಾಸದಿಂದ ಇನ್ನಷ್ಟು ಉನ್ನತ ಮಟ್ಟದ ಸಾಧನೆ ಮಾಡಬೇಕೆಂದು ತಿಳಿಸಿದರು.

ವಾರುನೀ ಜಿ., ನಯನ ಪ್ರಿಯಾ, ಹರ್ಮೈನ್ ಫಾತಿಮಾ, ಗುಂಜಾನ್ ಡಿ. ಆಜರಿಕರ್, ಇಶಾನ್ ಜಿ., ಧ್ರುವ ಕುಮಾರ್ ಹಾಗೂ ಮೊಹಮ್ಮದ್ ಜೈನುಲ್ ಅಬ್ಬಿನ್ ಖಾನ್ ಅವರು ಬ್ಲಾಕ್ ಬೆಲ್ಟ್ ಪ್ರಶಸ್ತಿ ಪತ್ರಗಳನ್ನು ಸ್ವೀಕರಿಸಿದರು.

ಜಿಲ್ಲಾ ಪಂಚಾಯಿತಿ ಅಧಿಕಾರಿ ಚಿಕ್ಕಸುಬ್ಬಯ್ಯ, ಟೇಕ್ವಾಂಡೋ ತರಬೇತಿದಾರ ಬೆಂಗಳೂರು ದಕ್ಷಿಣ ಜಿಲ್ಲಾ ಟೇಕ್ವಾಂಡೋ ಸಂಸ್ಥೆ ಕಾರ್ಯದರ್ಶಿ ಗೋವಿಂದ್ ಎಂ., ಅಧ್ಯಕ್ಷ ಕೃಷ್ಣಮೂರ್ತಿ, ಪೋಷಕರು ಹಾಗೂ ಇತರ ಗಣ್ಯರು ಉಪಸ್ಥಿತರಿದ್ದು ಕ್ರೀಡಾಪಟುಗಳಿಗೆ ಶುಭಾಶಯ ಕೋರಿದರು.

# ಗ್ರಾಮೀಣ ಪ್ರದೇಶಕ್ಕೆ ಮೂಲ ಸೌಕರ್ಯಗಳನ್ನು ಒದಗಿಸಿ



ಹನೂರು: ಸರ್ಕಾರ ಮತ್ತು ಜನಪ್ರತಿನಿಧಿಗಳು ರೈತರನ್ನು ಕಡೆಗಣಿಸುವ ಜೊತೆಗೆ ಗ್ರಾಮೀಣ ಪ್ರದೇಶದ ಜನಸಾಮಾನ್ಯರಿಗೆ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸುವಲ್ಲಿ ನಿರ್ಲಕ್ಷ್ಯ ತೋರುತ್ತಿರುವುದನ್ನು ಮನಗಂಡು ಸರ್ಕಾರವನ್ನು ಎಚ್ಚರಿಸುವಂತಹ ಕೆಲಸವನ್ನು ಕರ್ನಾಟಕ ರಾಜ್ಯ ರೈತ ಸಂಘಟನೆ ಮಾಡುತ್ತಿದೆ ಎಂದು ರೈತ ಸಂಘ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ನೇತ್ರಾವತಿ ತಿಳಿಸಿದರು.

ತಾಲೂಕಿನ ಪುದುರಾಮಪುರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ರಾಜ್ಯ ರೈತ ಸಂಘ ಹನೂರು ತಾಲೂಕು ಸಮಿತಿ ರೈತ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ರೈತ ಮುಖಂಡರಾದ ಪ್ರೊಫೆಸರ್ ಎಂ ಡಿ ನಂಜುಂಡಸ್ವಾಮಿ ಕೆ ಎಸ್ ಪುಟ್ಟಣ್ಣಯ್ಯ ಸೇರಿದಂತೆ ಇತ್ತೀಚೆಗೆ ಬಡಗಲಪುರ ನಾಗೇಂದ್ರ ರವರ ರೂಪಿಸಿದ ಹೋರಾಟ ಮತ್ತು ಚಳುವಳಿಗಳು ಇಂದು ರೈತರಿಗೆ ರೈತರ ಆಶಯಗಳನ್ನು ಈಡೇರಿಸುವಲ್ಲಿ ಸಫಲವಾಗಿದೆ.

ಹನೂರು ತಾಲೂಕಿನಲ್ಲಿ ರೈತ ಸಂಘಟನೆ ಹೋರಾಡಿದ ಫಲವಾಗಿ ಮತ್ತು ಮಹಿಳಾ ರೈತ ಹೋರಾಟಗಾರ್ತಿಯರು ಹೋರಾಟದಲ್ಲಿ ಭಾಗವಹಿಸಿ ನೀರಿಗಾಗಿ ಕಣ್ಣೀರು ಹರಿಸಿದ್ದರ ಫಲವಾಗಿ ಸರ್ಕಾರ ಹನೂರು ತಾಲೂಕಿನ ನೀರಾವರಿ ಅಭಿವೃದ್ಧಿಗಾಗಿ 490 ಕೋಟಿ ರೂಪಾಯಿಗಳ ನೀರಾವರಿ ಯೋಜನೆಗೆ ಅನುದಾನ ನೀಡಿದೆ. ಇದು ರೈತ ಸಂಘಟನೆಯ ಹೋರಾಟದ ಫಲವಾಗಿದೆ.

ರೈತರು ಹಲವು ಸಮಸ್ಯೆ ಮತ್ತು ಸವಾಲುಗಳೊಂದಿಗೆ ಬೇಸಾಯ ಮಾಡಿಕೊಂಡು ದೇಶಕ್ಕೆ ಅನ್ನ ನೀಡುವ ಅನ್ನದಾತರಾಗಿದ್ದಾರೆ. ಒಮ್ಮೊಮ್ಮೆ ಮಳೆಯೊಂದಿಗಿನ ಜುಜಾಟದಲ್ಲಿ ಹರಸಾಹಸ ಮಾಡಿ ಗೆಲ್ಲುವ ರೈತರು, ಬೆಳೆ ಬಂದ ಮೇಲೆ ಬೆಲೆ ಜೊತೆಗಿನ ಜೂಜಾಟದಲ್ಲಿ ಸೋಲುತ್ತಿದ್ದಾರೆ. ಇದೊಂದು ಆತಂಕಕಾರಿ ಬೆಳವಣಿಗೆಯಾಗಿದೆ. ರೈತರ ಬದುಕು ಹಸನಾಗುವ ಉದ್ದೇಶದಿಂದ ಇನ್ನಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಲು ಕರ್ನಾಟಕ ರಾಜ್ಯ ರೈತ ಸಂಘ ಮಹಿಳಾ ಘಟಕಗಳನ್ನು ರಾಜ್ಯಾದ್ಯತ ಸ್ಥಾಪಿಸುವ ಹಿನ್ನೆಲೆಯಲ್ಲಿ ಇಂದು ಪ್ರಪ್ರಥಮ ಬಾರಿಗೆ ಪುದುರಾಮಪುರ ಗ್ರಾಮದಲ್ಲಿ ರೈತ ಮಹಿಳೆಯರ ಸಭೆಯನ್ನು ಆಯೋಜನೆ ಮಾಡಲಾಗಿದೆ. ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ರೈತ ಚಳುವಳಿಗೆ ಭಾಗವಹಿಸುವಂತೆ ಕರೆ ನೀಡಿದರು. ಈ ಸಂದರ್ಭದಲ್ಲಿ ಮಹಿಳಾ ರೈತ ಮುಖಂಡರಾದ ಪಾಂಡವಪುರದ ರೂಪ, ರಾಮನಗರ ರತ್ನಮ್ಮ, ರಮ್ಯ ಮಮತಾ, ಪೋಂಗಡಿ, ಸ್ಥಳೀಯ ರೈತ ಮುಖಂಡರಾದ ಪಳನಿಸ್ವಾಮಿ,ಭಾಸ್ಕರ್, ಶಕ್ತಿವೇಲು, ಸ್ವಾಮಿ, ಬಸವರಾಜು, ಗೋಪಾಲ್, ಕನಕಮ್ಮ, ಮುಂತಾದವರು ಉಪಸ್ಥಿತರಿದ್ದರು.

## ರೈತ ಕಣ್ಮಣಿಗಳು ಎನಿಸಿಕೊಂಡವರ ಮೇಲೆ ಗುರುತರದ ಆರೋಪ

**ಹನೂರು ಹಾಗೂ ಚಾಮರಾಜನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಸಕ್ರಿಯವಾಗಿ ರೈತ ಹೋರಾಟಗಳಲ್ಲಿ ಪಾಲ್ಗೊಳ್ಳುತ್ತಿದ್ದ ಕರ್ನಾಟಕ ರಾಜ್ಯ ರೈತ ಸಂಘದ ಹನೂರು ತಾಲೂಕು ಅಧ್ಯಕ್ಷ ಅಮ್ಜದ್ ಖಾನ್ ರವರು ರೈತರೊಬ್ಬರ ಹತ್ತಿರ ಸಾಗುವಳಿ ಚೀಟಿ ಕೊಡಿಸುವುದಕ್ಕೆ ಹಣ ಪಡೆದುಕೊಂಡಿರುವುದಾಗಿ ಆರೋಪಿಸಿದ್ದು ರಾಜ್ಯ ಸಮಿತಿ ವತಿಯಿಂದ ಅಮ್ಜದ್ ಖಾನ್ ರವರ ಸದಸ್ಯತ್ವ ರದ್ದು ಮಾಡಲಾಗಿದೆ . ಜೊತೆಗೆ ಚಾಮರಾಜನಗರ ಜಿಲ್ಲಾ ಉಪಾಧ್ಯಕ್ಷರಾದ ಗೌಡೇಗೌಡ ರವರು ಕೂಡ ಜಿಲ್ಲಾ ಸಮಿತಿಗೆ ಮಾಹಿತಿ ಕೊಡದೆ ರೈತರ ಜೊತೆ ಹಲವಾರು ಸಭೆಗಳನ್ನು ಮಾಡಿ ಅವರ ಹತ್ತಿರ ಶಾಲು ಮತ್ತು ಗುರುತಿನ ಚೀಟಿ ನೀಡುವುದಾಗಿ ಹಣ ಪಡೆದುಕೊಂಡಿರುವುದಾಗಿ ಹಲವಾರು ರೈತರು ಆರೋಪ ಮಾಡಿದ ಹಿನ್ನೆಲೆ ರಾಜ್ಯ ಸಮಿತಿಯ ಆದೇಶದ ಮೇರೆಗೆ ಗೌಡೆ ಗೌಡ ಅವರನ್ನು ಆರು ತಿಂಗಳ ವರೆಗೆ ಅಮಾನತು ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷ ಮಹಾದೇವ ಸ್ವಾಮಿ ತಿಳಿಸಿದ್ದಾರೆ.**

# ಗಿಗ್ ಕಾರ್ಮಿಕರು ಒಂದಾಗಿ

## ಸ್ವಿಗ್ಗಿ, ಜಮೋಟಾ ಕಾರ್ಮಿಕರಿಗೂ ಸೌಲಭ್ಯ ಒದಗಿಸಲು ಸಂಘಟಿಸಿ



ಮೈಸೂರು: ಸ್ವಿಗ್ಗಿ, ಜಮೋಟೊ ಹೀಗೆ ಅಸಂಘಟಿತ ಕಾರ್ಮಿಕರನ್ನು ಸಂಘಟಿಸಿ ಅವರಿಗೆ ಇಲಾಖೆ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ ಪ್ರತ್ಯೇಕ ನಿಗಮ ಸ್ಥಾಪನೆಗೆ ಮನವಿ ಮಾಡಿದ್ದೇವೆ ಎಂದು ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷ ಕೆ.ಪುಟ್ಟಸ್ವಾಮಿ ಗೌಡ ತಿಳಿಸಿದರು.

ನಗರ ಕಾಂಗ್ರೆಸ್ ಭವನದಲ್ಲಿ ಆಯೋಜಿಸಿದ್ದ ಕಾರ್ಮಿಕವಿಭಾಗದ ವಾರ್ಷಿಕ ಕಾರ್ಯಕಾರಿಣಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸ್ವಿಗ್ಗಿ, ಜಮೋಟಾ, ಕಲ್ಲು ಕ್ವಾರಿ ಹೀಗೆ ಅಸಂಘಟಿತ ವಲಯದಲ್ಲಿ ದುಡಿಯುವವರೇ ನಮ್ಮಲ್ಲಿ ಶೇ.50ಕ್ಕಿಂತ ಹೆಚ್ಚಾಗಿದ್ದಾರೆ. ಅಂತಹವರನ್ನು ಸಂಘಟಿಸುವ ನಿಟ್ಟಿನಲ್ಲಿ ಈಗಾಗಲೇ 20 ಜಿಲ್ಲೆಯಲ್ಲಿ ಅರಿವು ಕಾರ್ಯಕ್ರಮ ನಡೆಸಿದ್ದೇವೆ. ಕಾರ್ಮಿಕ ಇಲಾಖೆಯಲ್ಲಿ ಸಿಗುವ 35ಕ್ಕಿಂತಲೂ ಹೆಚ್ಚಿನ ಸೌಲಭ್ಯ ಒದಿಸುವುದು ನಮ್ಮ ಮೂಲ ಉದ್ದೇಶವಾಗಿದೆ. ಕಾರ್ಮಿಕ ಇಲಾಖೆಯಲ್ಲಿ ಹುಟ್ಟಿನಿಂದ ಅಂತ್ಯಸಂಸ್ಕಾರದವರೆಗೂ ನೆರವಿಗೆ ಬರುವ ಯೋಜನೆಗಳಿವೆ. ಅವುಗಳನ್ನು ಜನರಿಗೆ ತಲುಪಿಸುವುದೇ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಆ ಮೂಲಕ 2028ಕ್ಕೂ ನಮ್ಮ ಪಕ್ಷ ಮತ್ತೆ ಅಧಿಕಾರಕ್ಕೆ ತರುವುದೇ ನಮ್ಮ ಉದ್ದೇಶ ಎಂದರು.

ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಮಾತನಾಡಿ, ಜಿಲ್ಲೆಯ ಎಲ್ಲಾ ಬ್ಲಾಕ್ ಗಳು ಕನಿಷ್ಠ ನೂರು ಮಂದಿ ಕಾರ್ಮಿಕರಿಗೆ ಕಾರ್ಡ್ ಮಾಡಿಸುವ ಕೆಲಸವನ್ನು ಮಾಡಬೇಕು. ಜತೆಗೆ ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟದ ಕಾರ್ಮಿಕ ಅರಿವು ಕಾರ್ಯಕ್ರಮಕ್ಕೂ ಹೆಚ್ಚಿನ ಜನರನ್ನು ಸೇರಿಸಿ ಸರ್ಕಾರಿ ಯೋಜನೆಗಳ ಬಳಕೆ ಆಗಬೇಕು. ಕೆಲಸ ಮಾಡದ ಬ್ಲಾಕ್ ಅಧ್ಯಕ್ಷರನ್ನು ತೆಗೆಯಲಾಗುವುದ. ರಾಜ್ಯದಲ್ಲೇ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅತ್ಯುತ್ತಮ ಕಾರ್ಯ ರೂಪಿಸುತ್ತಿದೆ. ಹೀಗಾಗಿ ಎಲ್ಲಾ ಬ್ಲಾಕ್ ಅಧ್ಯಕ್ಷರೂ ಈ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಹೇಳಿದರು.

ನಿವೃತ್ತ ಜಂಟಿ ಕಾರ್ಮಿಕ ವಸಂತಕುಮಾರ್ ಕಾರ್ಮಿಕ ಇಲಾಖೆಯಿಂದ ಸಿಗುವ ಸೌಲಭ್ಯ ಹಾಗೂ ಕೇಂದ್ರದಲ್ಲಿ ಯುಪಿಎ ಸರ್ಕಾರ ಕಾರ್ಮಿಕರಿಗೆ ತಂದ ಸೌಲಭ್ಯಗಳ ಬಗ್ಗೆ ತಿಳಿಸಿಕೊಟ್ಟರು.

ಮೈಸೂರು ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಸಿದ್ದಲಿಂಗಪುರ ಪ್ರವೀಣ್ ಮಾತನಾಡಿ, ಕಳೆದ ಒಂದೂವರೆ ವರ್ಷದಲ್ಲಿ 300ಕ್ಕೂ ಹೆಚ್ಚು ಮಂದಿಗೆ ಕಾರ್ಮಿಕ ಕಾರ್ಡ್ ಮಾಡಿಸಿಕೊಡುವ ಮೂಲಕ ಅವರಿಗೆ ಸೌಲಭ್ಯ ಒದಗಿಸುವ ಕೆಲಸ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಪಕ್ಷದ ಹಿರಿಯ ಸೂಚನೆಯಂತೆ ತಾಲ್ಲೂಕು ಮಟ್ಟದಲ್ಲಿಯೂ ಹೆಚ್ಚಿನ ಸಂಘಟನೆ ಹಾಗೂ ಸೌಲಭ್ಯ ಜನರಿಗೆ ತಲುಪಿಸಲಾಗುವುದು ಎಂದರು.

ಇದೇ ವೇಳೆ ಹಲವರಿಗೆ ವಿವಿಧ ವಿಭಾಗದ ನೇಮಕಾತಿ ಪತ್ರ ವಿತರಿಸಲಾಯಿತು. ಕಾರ್ಮಿಕ ವಿಭಾಗದ ರಾಜ್ಯ ಉಪಾಧ್ಯಕ್ಷೆ ಹಾಗೂ ಮೈಸೂರು ಉಸ್ತುವಾರಿ ಹರಿಣಿಗೌಡ, ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು. ಜಿಲ್ಲಾ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಹೆಡತಲೆ ಮಂಜುನಾಥ್, ಜಿಲ್ಲಾ ಕಾರ್ಮಿಕ ವಿಭಾಗದ ಕಾರ್ಯದರ್ಶಿ ಕಾಮಾಕ್ಷಿಗೌಡ ಇನ್ನಿತರರು ಉಪಸ್ಥಿತರಿದ್ದರು.

### ಪ್ರಶ್ನಿಸುವವರು ಎಲ್ಲೋದರೂ?

**ಕಾಂಗ್ರೆಸ್ ನ ಪ್ರತಿ ವಿಚಾರವನ್ನು ಪ್ರಶ್ನಿಸುವ ವಾಟ್ಸಾಪ್ ಯೂನಿವರ್ಸಿಟಿಯ ಸೋಷಿಯಲ್ ಮೀಡಿಯಾ ಸೃಷ್ಟಿಕರ್ತರು ಈಗ ದೇಶದ ರಾಮ ಮಂದಿರದಲ್ಲಿ ನಡೆದಿರುವ ಅಕ್ರಮದ ಬಗ್ಗೆ ಯಾಕೆ ಪ್ರಶ್ನಿಸುತ್ತಿಲ್ಲ? ಎಲ್ಲರೂ ಎಲ್ಲಿ ಹೋದರು. ಈ ಬಗ್ಗೆ ಕಾಂಗ್ರೆಸ್ ನವರು ಪ್ರಶ್ನಿಸುವ ಕೆಲಸವನ್ನು ಮಾಡಬೇಕು. ನಾವೆಲ್ಲಾ ಹಿಂದೂವಿರೋಧಿಗಳಂತೆ ಬಿಂಬಿಸಿದರು. ಈಗ ರಾಮನ ದುಡ್ಡು ಕದ್ದ ನಿಜವಾದ ಹಿಂದೂ ವಿರೋಧಿಗಳು ಯಾರು ಎಂದು ಕೆ.ಪುಟ್ಟಸ್ವಾಮಿ ಗೌಡ ಪ್ರಶ್ನಿಸಿದರು.**

# ಜು.17ಕ್ಕೆ ಯೋಗ ಘಟಿಕೋತ್ಸವ

ಮೈಸೂರು: ಇಲ್ಲಿನ ವಿಜಯನಗರದ ಮೈಸೂರು ವಿವೇಕಾನಂದ ಯೋಗ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ(ಎಂ.ವಿ.ಯೋಗಾಸ್)ನಿಂದ ನಗರದ ಕಿರು ರಂಗಮಂದಿರದಲ್ಲಿ ಜುಲೈ 18ರಂದು ಬೆಳಿಗ್ಗೆ 8.30ಕ್ಕೆ ಯೋಗ ಘಟಿಕೋತ್ಸವ ಸಮಾರಂಭ ಆಯೋಜಿಸಲಾಗಿದೆ ಎಂದು ಸಂಸ್ಥೆ ಅಧ್ಯಕ್ಷ ಪಿ.ಎನ್.ಗಣೇಶ್ ಕುಮಾರ್ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಆಧ್ಯಾತ್ಮಿಕ ಚಿಂತಕಿ ಸುಚರಿತ ಮಾತಾಜಿ ಸಾನಿಧ್ಯದಲ್ಲಿ ಶಾಸಕ ಜಿ.ಟಿ.ದೇವೇಗೌಡ ಉದ್ಘಾಟಿಸುವರು. ಶಾಸಕ ಟಿ.ಎಸ್.ಶ್ರೀವತ್ಸ ಅವರು ಪದವಿ ಪ್ರದಾನ ಹಾಗೂ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವೈದ್ಯಾಧಿಕಾರಿ ಎಚ್.ಎ.ಶಶಿರೇಖಾ ಮುಖ್ಯ ಭಾಷಣ ಮಾಡುವರು. ಬಿಜೆಪಿ ಮುಖಂಡ ಸಿದ್ದರಾಜು ಅಧ್ಯಕ್ಷತೆ ವಹಿಸುವರು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಎಂಟು ಮಂದಿ ಸಾಧಕರಿಗೆ ಯೋಗ ಕೌಸ್ತುಭ ಮತ್ತು ಯೋಗ ಮಕರಂದ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಸಂಸ್ಥೆ ವಿದ್ಯಾರ್ಥಿಗಳಿಂದ ಯೋಗ ನೃತ್ಯ ನಡೆಯಲಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆ ಪದಾಧಿಕಾರಿಗಳಾದ ಮೋಹನ್, ಮಂಜುಳಾ, ಗೀತಾ ಕುಮಾರ್, ವಿವೇಕ್ ಇದ್ದರು.



ವರ್ತಮಾನ
ಜಾಹಿರಾತಿಗೆ
ಉತ್ತಮ ಮಾಧ್ಯಮ

# ಅಕ್ರಮ ಕೇರಳ ಲಾಟರಿ ಮಾರಾಟ: ವ್ಯಕ್ತಿ ಬಂಧನ



ಗುಂಡ್ಲುಪೇಟೆ: ಅಕ್ರಮವಾಗಿ ಕೇರಳ ಲಾಟರಿ ಟಿಕೆಟ್‌ಗಳನ್ನು ಮಾರಾಟ ಮಾಡುತ್ತಿದ್ದ ವ್ಯಕ್ತಿಯೊಬ್ಬರನ್ನು ಗುಂಡ್ಲುಪೇಟೆ ಠಾಣೆ ಪೊಲೀಸರು ಬಂಧಿಸಿ, ಲಾಟರಿ ಟಿಕೆಟ್ ಗಳನ್ನು ವಶಕ್ಕೆ ಪಡೆದ ಘಟನೆ ಪಟ್ಟಣದಲ್ಲಿ ನಡೆದಿದೆ.

ಯಳಂದೂರು ತಾಲೂಕಿನ ಅಂಬಳೆ ಗ್ರಾಮದ ಮಣಿಕಂಠ ಬಂಧಿತ ಆರೋಪಿ. ಈತ ಪಟ್ಟಣದ ಕೆಎಸ್ ಆರ್ ಟಿಸಿ ಬಸ್ ನಿಲ್ದಾಣದ ಸಮೀಪ ಸಾರ್ವಜನಿಕ ಸ್ಥಳದಲ್ಲಿ ಕೇರಳ ಲಾಟರಿ ಟಿಕೆಟ್ ಗಳನ್ನು ಮಾರಾಟ ಮಾಡುತ್ತಿದ್ದ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪಟ್ಟಣ ಠಾಣೆಯ ಪೊಲೀಸರು ಆರೋಪಿಯನ್ನು ಬಂಧಿಸಿ ಆತನ ಬಳಿಯಿದ್ದ ಸುಮಾರು 79500 ರೂ. ಮೌಲ್ಯದ 1470 ಲಾಟರಿ ಟಿಕೆಟ್ ಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ಈ ಸಂಬಂಧ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾರ್ಯಾಚರಣೆಯಲ್ಲಿ ಪಿಐ ಜಯಕುಮಾರ್ ಹಾಗೂ ಪೊಲೀಸ್ ಸಿಬ್ಬಂದಿಗಳಾದ ನಟೇಶ್, ನವೀನ್, ಮಣಿ ಭಾಗವಹಿಸಿದ್ದರು.

# ಕಂಬಳ ವಿರೋಧಿಸಿ ರಕ್ಷಣಾ ವೇದಿಕೆ ಪ್ರತಿಭಟನೆ



**ಮೈಸೂರು:** ಮೈಸೂರು ವಿಶ್ವ ವಿಖ್ಯಾತ ದಸರಾ ಮಹೋತ್ಸವದ ಅಂಗವಾಗಿ ಕಂಬಳ ಸ್ಪರ್ಧೆಯನ್ನು ಆಯೋಜಿಸಿರುವುದನ್ನು ವಿರೋಧಿಸಿ ಕನ್ನಡಾಂಬೆ ರಕ್ಷಣ ವೇದಿಕೆ ಹಾಗೂ ಮೈಸೂರು ಹೃದಯವಂತ ಕನ್ನಡಿಗರ ಬಳಗದ ವತಿಯಿಂದ ಕಂಬಳ ಆಯೋಜನೆಗೆ ನಿಗದಿಪಡಿಸಿರುವ ಸ್ಥಳದ ಬಳಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಕನ್ನಡಾಂಬೆ ರಕ್ಷಣ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ರಾಜಶೇಖರ್ ಮಾತನಾಡಿ, "ನಮಗೆ ಕಂಬಳ ಅಥವಾ ಕರಾವಳಿ ಭಾಗದ ಜನಪದ ಕ್ರೀಡೆಯ ವಿರುದ್ಧ ಯಾವುದೇ ವಿರೋಧವಿಲ್ಲ. ಕರಾವಳಿ ಭಾಗದ ಸಂಸ್ಕೃತಿ ಅವರಿಗೆ ಹೇಗೆ ಹೆಮ್ಮೆಯೋ, ಅದೇ ರೀತಿ ಮೈಸೂರಿನ ದಸರಾ, ಜಂಬೂಸವಾರಿ ಹಾಗೂ ಇಲ್ಲಿನ ಸಾಂಸ್ಕೃತಿಕ ಪರಂಪರೆ ನಮಗೆ ಹೆಮ್ಮೆ. ಎರಡೂ ಸಂಸ್ಕೃತಿಗಳಿಗೆ ತಮ್ಮದೇ ಆದ ವೈಶಿಷ್ಟ್ಯವಿದೆ. ಆದ್ದರಿಂದ ಮೈಸೂರು ದಸರಾದಂತಹ ಐತಿಹಾಸಿಕ ಉತ್ಸವದಲ್ಲಿ ಮೈಸೂರಿನ ಪರಂಪರೆ ಮತ್ತು ಸಂಸ್ಕೃತಿಗೆ ಆದ್ಯತೆ ನೀಡಬೇಕು" ಎಂದು ಹೇಳಿದರು.

ಸುಮಾರು ಕೋಟಿ ವೆಚ್ಚದಲ್ಲಿ ಕಂಬಳ ಆಯೋಜನೆ ಮಾಡುವ ಬದಲು, ಆ ಹಣವನ್ನು ರಾಜ್ಯದ ರೈತರ ಕಲ್ಯಾಣಕ್ಕೆ, ಕೃಷಿ ಅಭಿವೃದ್ಧಿಗೆ, ಕುಸ್ತಿ ಸೇರಿ ಸ್ಥಳೀಯ ಕ್ರೀಡೆಗಳಿಗೆ ಉತ್ತೇಜನ ನೀಡಲು ಹಾಗೂ ದಸರಾ ಮಹೋತ್ಸವದಲ್ಲಿ ಭಾಗವಹಿಸುವ ಕಲಾವಿದರಿಗೆ ಹೆಚ್ಚಿನ ಗೌರವಧನ ಮತ್ತು ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಬಳಸಬೇಕು ಎಂದು ಅವರು ಒತ್ತಾಯಿಸಿದರು. ನಾಲ್ಕು ಶತಮಾನಗಳಿಗೂ ಅಧಿಕ ಇತಿಹಾಸ ಹೊಂದಿರುವ ವಿಶ್ವವಿಖ್ಯಾತ ಮೈಸೂರು ದಸರಾ ಮತ್ತು ಜಂಬೂಸವಾರಿ ತನ್ನದೇ ಆದ ವೈಭವ, ಸಂಪ್ರದಾಯ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಹೊಂದಿದೆ. ಈ ಪರಂಪರೆಯನ್ನು ಇನ್ನಷ್ಟು ಅದ್ದೂರಿಯಾಗಿ ಆಚರಿಸುವ ಮೂಲಕ ದಸರಾ ಮಹೋತ್ಸವದ ಗೌರವವನ್ನು ಹೆಚ್ಚಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಮೈಸೂರು ಹೃದಯವಂತ ಬಳಗದ ಅಧ್ಯಕ್ಷ ಡಿಪಿಕೆ ಪರಮೇಶ್, ಹರೀಶ್, ಸೋಮು ,ಕುಮಾರ್, ಡಾಬಾ ಸೋಮಣ್ಣ , ರಘು, ಕಬಿನಿ ಸುರೇಶ್, ದಿನೇಶ್ ಇತರರು ಇದ್ದರು.

* ಅರ್ಚಕರಹಳ್ಳಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ

# ರಾಮನಗರದ ಸರ್ವಾಂಗೀಣ ಅಭಿವೃದ್ಧಿ ಮುಖ್ಯಮಂತ್ರಿ ಆಶಯ



ರಾಮನಗರ: ಜಿಲ್ಲಾ ಕೇಂದ್ರ ರಾಮನಗರದ ಸರ್ವಾಂಗೀಣ ಅಭಿವೃದ್ಧಿ ಮಾಡಿ, ರಾಜ್ಯದಲ್ಲಿ ಮಾದರಿ ನಗರವನ್ನಾಗಿ ರೂಪಿಸುವುದು ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರ ಆಶಯವೂ ಆಗಿದೆ. ಹೀಗಾಗಿ ನಗರದ ಜನತೆ ನಿರಾಶರಾಗುವುದು ಬೇಡ, ಹಂತಹಂತವಾಗಿ ಮೂಲಸೌಕರ್ಯಗಳನ್ನು ವೃದ್ಧಿಸಲಾಗುವುದು ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿದರು.

ನಗರದ 31ನೇ ವಾರ್ಡು ಅರ್ಚಕರಹಳ್ಳಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ನಗರದ ಎಲ್ಲಾ 31 ವಾರ್ಡುಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಇದೆ. ಒಂದಲ್ಲ ಒಂದು ಸಮಸ್ಯೆ ಇದೆ. ಸರ್ವಾಂಗೀಣ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮರ್ ಅವರನ್ನು ಭೇಟಿ ಮಾಡಿ ಅವರ ಗಮನ ಸೆಳೆದಿದ್ದೇವೆ. ಅವರು ಸಹ ಅಭಿವೃದ್ಧಿಯ ವಿಚಾರದಲ್ಲಿ ಆಸಕ್ತಿವಹಿಸಿದ್ದಾರೆ ಎಂದರು.

ವಾರ್ಡ್ 31ಕ್ಕೆ 25 ಕೋಟಿ ಅನುದಾನವೂ ಸಾಲೋಲ್ಲ. ನಗರದಲ್ಲಿ ವಾರ್ಡ್ ಸಂಖ್ಯೆಗಳಾದ 1, 22, 23, 24, 25 ಮತ್ತು 31ನೇ ವಾರ್ಡುಗಳು ಅತಿ ದೊಡ್ಡ ವಿಸ್ತೀರ್ಣವನ್ನು ಹೊಂದಿರುವ ವಾರ್ಡುಗಳು. ವಾರ್ಡ್ 31 ಸಹ ದೊಡ್ಡ ವಾರ್ಡು. ಈ ವಾರ್ಡಿನಲ್ಲಿ ಹೊಸ ಹೊಸ ಬಡಾವಣೆಗಳು ತಲೆ ಎತ್ತುತ್ತಿವೆ. ಮೂಲ ಸೌಕರ್ಯಗಳ ಕೊರತೆ ಇದೆ. ಈ ಕೊರತೆ ನೀಗಿಸಲು 25 ಕೋಟಿ ರೂ ಅನುದಾನವೂ ಸಾಲೋದಿಲ್ಲ. ಆದರೂ ಅತ್ಯಗತ್ಯವಾಗಿ ಆಗಬೇಕಾಗಿರುವ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದೇವೆ ಎಂದರು.

1.17 ಕೋಟಿ ರೂ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ

ಅರ್ಚಕರಹಳ್ಳಿಯ ಟ್ರಾಕ್ಟರ್ ಶೋರೂಂನಿಂದ ಸರ್ಕಾರ ಶಾಲೆಯವರೆಗಿನ 230 ಅಡಿ ಉದ್ದದ ಆಸ್ಫಾಲ್ಟ್ ರಸ್ತೆಯನ್ನು ನಗರೋತ್ಥಾನ ಅನುದಾನದಲ್ಲಿ 1.17 ಕೋಟಿ ರೂ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದರು. ಅರ್ಚಕರಹಳ್ಳಿಯಲ್ಲಿ ನಾಗರಿಕರು ಹಲವಾರು ಸಮಸ್ಯೆಗಳ ಬಗ್ಗೆ ಗಮನ ಸೆಳೆದಿದ್ದಾರೆ. ಹಂತ ಹಂತವಾಗಿ ಎಲ್ಲ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದರು. ನಗರದ ಎಲ್ಲಾ ವಾರ್ಡುಗಳಲ್ಲಿ ನಗರೋತ್ಥಾನ, ಯುಡಿಎಫ್, ಅಲ್ಪಸಂಖ್ಯಾತರ ಕಲ್ಯಾಣ ನಿಧಿ ಮತ್ತು ನಗರಸಭಾ ನಿಧಿಯನ್ನು ಬಳಸಿಕೊಂಡು ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಜನರ ಬೇಡಿಕೆಗಳನ್ನು ಆಧರಿಸಿ, ಅವಶ್ಯಕವಿರುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಹಂತ ಹಂತವಾಗಿ ಎಲ್ಲಾ ಮೂಲ ಸೌಕರ್ಯಗಳ ಕೊರತೆಯನ್ನು ನೀಗಿಸಲಾಗುವುದು. ಡಿಕೆಶಿ ಅವರ ಆಶಯದಂತೆ ಮಾದರಿ ನಗರವನ್ನಾಗಿ ರೂಪಿಸಲು ಸಾರ್ವಜನಿಕರ ಸಹಕಾರವೂ ಅತ್ಯಗತ್ಯವಾಗಿ ಬೇಕಾಗಿದೆ ಎಂದರು.

ಮಾದರಿ ನಗರವನ್ನಾಗಿ ರೂಪಿಸಲು ಸಂಕಲ್ಪಿಸಲಾಗಿದೆ. ಈ ವಿಚಾರದಲ್ಲಿ ಮುಂದಿಟ್ಟ ಹೆಜ್ಜೆಯನ್ನು ಹಿಂತೆಗೆಯೋಲ್ಲ, ಜನರು ನಿರಾಶರಾಗಬಾರದು ಎಂದರು. ಇದೇ ದಿನ ನಗರದ ವಿವಿಧ ವಾರ್ಡುಗಳಲ್ಲಿ ಅಧ್ಯಕ್ಷ ಕೆ.ಶೇಷಾದ್ರಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ನಗರಸಭೆ ಸದಸ್ಯೆ ವಿಜಯಕುಮಾರಿ, ಮುಖಂಡರಾದ ವೇದ ಮೂರ್ತಿ, ದೀಪು, ವಿಜಯ್ ಕುಮಾರ್, ರಂಗಸ್ವಾಮಿ, ಎಇ ವಿಶ್ವನಾಥ್, ನಿರ್ಮಲಾ, ಗುತ್ತಿಗೆದಾರ ಗೋವಿಂದ ಮತ್ತಿತರರು ಹಾಜರಿದ್ದರು.

# ಕುಮಾರಸ್ವಾಮಿ ಆಕಸ್ಮಿಕ ಸಿಎಂ ಸಂವಿಧಾನವನ್ನೇ ಒಪ್ಪಲ್ಲ

## ಮಾಜಿ ಸಚಿವ ಎನ್. ಚಲುವರಾಯಸ್ವಾಮಿ ಕಿಡಿ




**ಬೆಂಗಳೂರು:** ಎಚ್.ಡಿ. ಕುಮಾರಸ್ವಾಮಿಯವರು ಆಕಸ್ಮಿಕವೋ, ಆಪರೇಷನ್ ಕಮಲವೋ ಯಾವುದೋ ರೀತಿ ಸಿಎಂ ಆದವರು. ಅವರು ಏನೇ ಮಾಡಿದರೂ ಮಾಜಿ ಪ್ರಧಾನಿಗಳ ಮಗ ಎನ್ನುವುದು ಒಂದಿದೆ? ಎಂದು ಮಾಜಿ ಸಚಿವ ಎನ್. ಚಲುವರಾಯಸ್ವಾಮಿ ಲೇವಡಿ ಮಾಡಿದರು.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ನಿನ್ನೆ ನಗೆಪಾಟಲಿನ ವಿಚಾರ ಹೇಳಿದ್ದಾರೆ. ರಾಜ್ಯದಲ್ಲಿ ಸಿಎಂ ಆದವರು.ಒಬ್ಬ ರಾಜಕಾರಣಿ ಇಂತಹ ಮಾತನಾಡಲು ಸಾಧ್ಯವೇ? ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ನಾನು ಸಿಎಂ ಆಗಿ ಒಪ್ಪಿಲ್ಲ ಎಂದಿದ್ದಾರೆ. ಅಂದರೆ ಸಂವಿಧಾನವನ್ನು ಕುಮಾರಸ್ವಾಮಿ ಒಪ್ಪಲ್ಲ ಎಂದು ಅರ್ಥ? ಎಂದು ಹರಿಹಾಯ್ದರು.

**136 ಶಾಸಕರ ಬೆಂಬಲದ ಸಿಎಂ ಡಿಕೆಶಿ:** 15 ಜನರೋ 35 ಜನರೋ ಆಯ್ಕೆಯಿಂದ ಡಿ.ಕೆ. ಶಿವಕುಮಾರ್ ಸಿಎಂ ಆದವರಲ್ಲ. 136 ಶಾಸಕರನ್ನು ಗೆದ್ದು ಡಿ.ಕೆ. ಶಿವಕುಮಾರ್ ಸಿಎಂ ಆದವರು. ಸಿದ್ದರಾಮಯ್ಯ ಅವರು ಬಹಳ ಸಂತೋಷದಿಂದ ಡಿ.ಕೆ. ಶಿವಕುಮಾರ್‌ಗೆ ಸಿಎಂ ಸ್ಥಾನ ಕೊಟ್ಟಿದ್ದಾರೆ. ಕುಮಾರಸ್ವಾಮಿಯಿಂದ ನಾವು ಸರ್ಟಿಫಿಕೇಟ್ ತೆಗೆದುಕೊಳ್ಳುವ ಅವಶ್ಯಕತೆ ಇಲ್ಲ? ಎಂದು ಗುಡುಗಿದರು.

ಮಿಸ್ಟರ್ ಕುಮಾರಸ್ವಾಮಿ ಅಂತ ಹೇಳುವುದಕ್ಕೆ ನಮಗೂ ಬರುತ್ತದೆ. ಕುಮಾರಸ್ವಾಮಿಯವರು ನಾಲಿಗೆ ಬಿಗಿ ಹಿಡಿದು ಮಾತನಾಡಲಿ? ಎಂದು ಎಚ್ಚರಿಕೆ ನೀಡಿದರು.

**2006ರಲ್ಲಿ ತಿಪ್ಪಣ್ಣನನ್ನು ಎತ್ತಾಕಿ ಸಿಎಂ ಮಾಡಿದ್ವಿ?:** 2006ರ ರಾಜಕೀಯ ಬೆಳವಣಿಗೆಯನ್ನು ನೆನಪಿಸಿದ ಚಲುವರಾಯಸ್ವಾಮಿ, ?ಜನತಾ ದಳದಿಂದ 2006ರಲ್ಲಿ ಅಧಿಕೃತವಾಗಿ ನಾಯಕನಾಗಿ ಆಯ್ಕೆ ಆಗಿದ್ರಾ ನೀವು? ತಿಪ್ಪಣ್ಣ ಅವತ್ತು ಜೆಡಿಎಸ್ ಅಧ್ಯಕ್ಷರು. ತಿಪ್ಪಣ್ಣ ಅವರನ್ನು ಎತ್ತಾಕಿಕೊಂಡು ಇಟ್ಟುಕೊಂಡಿದ್ವಿ. ನಾನು, ಸಂತೋಷ್ ಲಾಡ್ ಒಂದು ಕಡೆ ಎತ್ತಾಕಿ ಇಟ್ಟುಕೊಂಡು ಕುಮಾರಸ್ವಾಮಿ ಅವರನ್ನು ಶಾಸಕಾಂಗ ಪಕ್ಷದ ನಾಯಕನಾಗಿ ಮಾಡಿದ್ವಿ? ಎಂದು ಹಳೆಯ ಘಟನೆಯನ್ನು ಬಿಚ್ಚಿಟ್ಟರು.


ರಾಜಕೀಯದಲ್ಲಿ ಹೀಗೆ ಲಘುವಾಗಿ ಬಾಯಿಗೆ ಬಂದಂತೆ ಮಾತನಾಡುವುದು ಬೇಡ. ರಾಜಕಾರಣಿ, ಜನಪ್ರತಿನಿಧಿ ಮಾತನಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ? ಎಂದು ಸಲಹೆ ನೀಡಿದರು.

**ಮೊದಲ ಆಪರೇಷನ್ ಕಮಲ ನಿಮ್ಮದೇ:** ಮೊದಲ ಬಾರಿ ಆಪರೇಷನ್ ಕಮಲ ಮಾಡಿದವರು ಕುಮಾರಸ್ವಾಮಿ. ಕುಮಾರಸ್ವಾಮಿ ಹೇಗೆ ಸಿಎಂ ಆದ್ರಿ ನೆನಪಿಸಿಕೊಳ್ಳಿ ಒಮ್ಮೆ. ಕುಮಾರಸ್ವಾಮಿ ಸಂವಿಧಾನಾತ್ಮಕ ಆಯ್ಕೆಯಾದ ಮುಖ್ಯಮಂತ್ರಿನಾ?? ಎಂದು ಪ್ರಶ್ನಿಸಿದರು. ಕುಮಾರಸ್ವಾಮಿ ನಾಯಕತ್ವದಲ್ಲಿ ಯಾವತ್ತೂ 37 ಸೀಟಿಗಿಂತ ಮೇಲೆ ಹೋಗಿಲ್ಲ. ಸಂವಿಧಾನದ ಪ್ರಕಾರ ಆಯ್ಕೆಯಾದ ಸಿಎಂ ಡಿ.ಕೆ. ಶಿವಕುಮಾರ್. ಡಿ.ಕೆ. ಶಿವಕುಮಾರ್ ಸಿಎಂ ಆಗಿ ಒಂದೇ ತಿಂಗಳಾಗಿದೆ. ಅವರ ಮೇಲೆ ಒಂದಲ್ಲ ಒಂದು ವಿಚಾರದಲ್ಲಿ ಹೊಟ್ಟೆಕಿಚ್ಚಿನ ಮಾತು ನಿಮ್ಮಿಂದ ಬರುತ್ತಿದೆ? ಎಂದು ಆರೋಪಿಸಿದರು.

**ಒಕ್ಕಲಿಗ ಡಿಕೆಶಿ ಸಹಿಸಲ್ಲ:** ಲೋಕಸಭಾ ಸದಸ್ಯರಾಗಿ, ಕೇಂದ್ರ ಸಚಿವರಾಗಿ ಏನೇನ್ ಮಾಡಿದ್ದೀರಾ ಗೊತ್ತಿದೆ. ಎಸ್.ಎಂ. ಕೃಷ್ಣ ಅವರನ್ನು ಮತ್ತೆ ಸಿಎಂ ಮಾಡಲು ಒಪ್ಪದೇ ಇರುವವರು ನೀವು. ಮತ್ತೊಬ್ಬ ಒಕ್ಕಲಿಗ ಡಿ.ಕೆ. ಶಿವಕುಮಾರ್ ಅವರನ್ನು ಒಪ್ಪಲು ಸಾಧ್ಯನಾ ನೀವು? ಕುಮಾರಸ್ವಾಮಿ ಇಷ್ಟೊಂದು ಕೆಟ್ಟ ಮನಸ್ಥಿತಿ ಇಟ್ಟುಕೊಂಡಿದ್ದೀರಲ್ಲ? ಎಂದು ವಾಗ್ದಾಳಿ ನಡೆಸಿದರು.

ಆದರೂ ಡಿ.ಕೆ. ಶಿವಕುಮಾರ್ ಕುಮಾರಸ್ವಾಮಿ ಅವರನ್ನು ಅಣ್ಣ ಎಂದಿದ್ದಾರೆ. ಡಿ.ಕೆ. ಶಿವಕುಮಾರ್ ಅವರನ್ನು ನೋಡಿ ಕಲಿತುಕೊಳ್ಳಿ ಸ್ವಲ್ಪ. ಡಿ.ಕೆ. ಶಿವಕುಮಾರ್ ಬೆನ್ನಿಗೆ 136 ಶಾಸಕರಿದ್ದಾರೆ. ನಿಮ್ಮ ಬೆನ್ನಿಗೆ 20 ಜನ ಇಲ್ಲ, ಇಷ್ಟು ಮಾತನಾಡ್ತೀರಲ್ಲರೀ?

# ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧದ ಶಾಸಕ ರವಿಕುಮಾರ್ ಗೌಡರ ಹೇಳಿಕೆಗೆ ಜೆಡಿಎಸ್ ಖಂಡನೆ



**ಮಂಡ್ಯ:** ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ವ್ಯಂಗ್ಯವಾಡಿದ ಶಾಸಕ ಪಿ.ರವಿಕುಮಾರ್ ಗೌಡ ಅವರ ನಡೆ ಸರಿಯಾದುದಲ್ಲ ಎಂದು ಜೆಡಿಎಸ್ ನಾಯಕ ಬಿ.ಆರ್.ರಾಮಚಂದ್ರು ಖಂಡನೆ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಂಡ ಶ್ರೇಷ್ಠ ನಾಯಕರಲ್ಲಿ ಕುಮಾರಸ್ವಾಮಿ ಅವರು ಒಬ್ಬರು. ಅವರು ಬಿಡದಿಯ ರೈತರ ಪರ ಹೋರಾಟದಲ್ಲಿ ತೊಡಗಿರುವುದಕ್ಕೆ, ಅವರ ಕೆಲಸಗಳ ಸಂಬಂಧ ಆಕ್ಷೇಪ ವ್ಯಕ್ತಪಡಿಸಲಿ. ಅದನ್ನು ಬಿಟ್ಟು ಅಸಂಬದ್ಧ ಪದಗಳನ್ನು ಬಳಸದಂತೆ ತಾಕೀತು ಮಾಡಿದರು.

ಕುಮಾರಸ್ವಾಮಿ ಅವರ ರಾಜಕೀಯ ಅನುಭವದಷ್ಟು ರವಿಕುಮಾರ್ ಅವರಿಗೆ ವಯಸ್ಸಾಗಿಲ್ಲ. ನಾವು, ನೀವು ರಾಜಕಾರಣದಲ್ಲಿ ಇನ್ನು ಅಂಬೆಗಾಲು ಇಡುತ್ತಿದ್ದೇವೆ. ನಮ್ಮ ಪಕ್ಷದ ಒಡಕಿನಿಂದಷ್ಟೇ ನೀವು ಶಾಸಕರಾಗಿ ಆಯ್ಕೆಯಾಗಿದ್ದೀರಿ. ನೀವು ನಿಮ್ಮ ಕೆಲಸಗಳ ಮೂಲಕ ನಿಮ್ಮ ಮುಖ್ಯಮಂತ್ರಿಗಳನ್ನು ಮೆಚ್ಚಿಸಿ, ನಮ್ಮ ನಾಯಕರನ್ನು ಸೈಕೋ ಎನ್ನುವುದನ್ನು ಡಿ.ಕೆ.ಶಿವಕುಮಾರ್ ಅವರು ಮೆಚ್ಚುವುದಿಲ್ಲ ಎಂದು ತಿಳಿ ಹೇಳಿದರು.

ತಮ್ಮ ಮಾತುಗಳನ್ನು ಜಿಲ್ಲೆಯ ಜನತೆ ಗಮನಸುತ್ತಿದ್ದಾರೆ. ಅವರು ಪ್ರಬುದ್ಧರಾಗಿದ್ದಾರೆ ಮುಂದಿನ ದಿನಗಳಲ್ಲಿ ತಮ್ಮ ಹೇಳಿಕೆ ತಕ್ಕ ಬುದ್ಧಿ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು.

3 ವರ್ಷಗಳಿಂದ ಶಾಸಕರು ಉತ್ತಮವಾಗಿ ಕೆಲಸ ಮಾಡಲಿ ಎಂದು ಯಾವುದೇ ರೀತಿ ಮಾತನಾಡಿರಲಿಲ್ಲ. ಕಾಮಗಾರಿಗಳನ್ನು ಮಾಡದೇ ನಾನು ವೈಯಕ್ತಿಕ ತೊಂದರೆ ನೀಡುತ್ತಿರುವುದಾಗಿ ಹೇಳಿಕೊಂಡಿದ್ದಾರೆ. ಮಾಜಿ ಶಾಸಕ ಎಂ.ಶ್ರೀನಿವಾಸ್ ಅವಧಿಯಲ್ಲಿ ಪಡೆದ 11 ಕೋಟಿಯ ಟೆಂಡರ್ ಕಾಮಗಾರಿಯನ್ನು ರದ್ದುಗೊಳಿಸಿ ಅದನ್ನು ಮೂರು ಭಾಗ ಮಾಡಿ ಸರಕಾರಕ್ಕೆ ನಷ್ಟವಾಗುವ ರೀತಿ ಮಾಡಿದ್ದು, ಹಾಲಿ ಶಾಸಕರು ಎಂದು ದೂರಿದರು.

ಎಪಿಎಂಸಿ ಬಳಿಯ ರಸ್ತೆ ಕಾಮಗಾರಿಗೆ ಟೆಂಡರ್ ಆಗಿ 8 ತಿಂಗಳು ಕಳೆದರೂ ಇನ್ನು ವರ್ಕ್ ಆರ್ಡರ್ ನೀಡಲಾಗಿಲ್ಲ. ಆದರೂ ಕೆಲಸ ಮಾಡುತ್ತಿಲ್ಲ ಎಂದು ದೂರುತ್ತಿದ್ದಾರೆ. ದಂಡನಾಯಕನಹಳ್ಳಿ ರಸ್ತೆ ಕಾಮಗಾರಿಗೆ 6 ತಿಂಗಳ ನಂತರ ಇಂದು ಗುದ್ದಲಿ ಪೂಜೆ ನೆರವೇರಿಸಿದ್ದಾರೆ. ಅವರಿಗೆ ನೀಡಬೇಕಾದ ಕಾಣಿಕೆ ನೀಡಿದ್ದೇನೆ ಆದರೂ ವಿನಃ ಕಾರಣ ತೊಂದರೆ ಅವರು ನೀಡುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಶಾಸಕರ ಸೋದರರದ್ದೇ ಕೆಕೆ, ಆತ್ರೇಯ ಮತ್ತು ರಾಮಚಂದ್ರ ಕನ್ಸ್ಟ್ರಕ್ಷನ್ ಎಂಬ 3 ಬೇನಾಮಿ ಗುತ್ತಿಗೆದಾರ ಸಂಸ್ಥೆಗಳಿವೆ. ಅವರು ತಮ್ಮದೇ ಸಂಸ್ಥೆಗಳಿಗೆ ಗುತ್ತಿಗೆ ಬರುವಂತೆ ನೋಡಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ. ಲೋಕೋಪಯೋಗಿ ಇಲಾಖೆಯ ಕಾಮಗಾರಿಯೊಂದಕ್ಕೆ ಮೊದಲ ಕರೆಯಲ್ಲಿ ಟೆಂಡರ್‌ಗೆ ಆಯ್ಕೆಯಾಗಿದ್ದಕ್ಕೆ ವಿನಃ ಕಾರಣ ನಿಯಮ ಬದಲಿಸಿ 2ನೇ ಕರೆ ನೀಡಲಾಗಿದೆ.

ಈ ಸಂಬಂಧ ನ್ಯಾಯಾಲಯದ ಮೊರೆ ಹೋಗಿದ್ದೇನೆ ಅದಕ್ಕೆ ಶಾಸಕರು ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸುವುದೇಕೆ ಎಂದು ಪ್ರಶ್ನಿಸಿದರು.

ಗೋಷ್ಠಿಯಲ್ಲಿ ಜೆಡಿಎಸ್ ನಗರ ಅಧ್ಯಕ್ಷ ಬೋರೇಗೌಡ, ಎಸ್ಸಿ,ಎಸ್ಟಿ ವಿಭಾಗದ ಅಧ್ಯಕ್ಷ ಎಸ್.ಡಿ.ಜಯರಾಂ, ಉಪಾಧ್ಯಕ್ಷ ಭದ್ರಾಚಲಮೂರ್ತಿ, ಮುಖಂಡ ಮಹೇಶ್ ಇದ್ದರು.

## ಪದ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಮನಗರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ ಹಾಗೂ ಬೆಂಗಳೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪದ್ಮ ಪ್ರಶಸ್ತಿ–2026–27 ಸೂಕ್ತ ನಾಮನಿರ್ದೇಶನಗಳಿಗೆ ರಾಷ್ಟ್ರೀಯ ಪುರಸ್ಕಾರ ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ವಿಶೇಷವಾಗಿ ಸಮಾಜದ ಮೇಲೆ ಗಮನಾರ್ಹ ಪರಿಣಾಮ ಬೀರಿದ್ದರೂ ಅವರ ಅಸಾಧಾರಣ ಕೊಡುಗೆಗಳನ್ನು ಪ್ರಶಂಸದೆ ಮತ್ತು ಗುರುತಿಸದೆ ಉಳಿದಿರುವ ಮಹಿಳಾ ಸಾಧಕಿಯರು, ಸಮಾಜ ಸೇವಕರು, ತಳಮಟ್ಟದ ಕಾರ್ಯಕರ್ತರು, ಗ್ರಾಮೀಣ ಮತ್ತು ಬುಡಕಟ್ಟು ಪ್ರದೇಶಗಳಲ್ಲಿ ಕೆಲಸ ಮಾಡುವ ವ್ಯಕ್ತಿಗಳು ಮತ್ತು ಮಹಿಳೆಯರ ಮಕ್ಕಳ ಕಲ್ಯಾಣ, ಪೋಷಣೆ, ಮಹಿಳೆಯರ ವಿರುದ್ಧದ ಅಪರಾಧಗಳ ತಡೆಗಟ್ಟುವಿಕೆ, ಮಕ್ಕಳ ರಕ್ಷಣೆ ದುರ್ಬಲ ವರ್ಗಗಳ ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಸಂಬಂಧಿತ ವಲಯಗಳಿಗೆ ವಿಶೇಷ ಒತ್ತು ನೀಡುವುದು, ಮಹಿಳೆಯರು ಮತ್ತು ಮಕ್ಕಳ ಅಭಿವೃದ್ಧಿ ಪೌಷ್ಟಿಕ ಆಹಾರ, ಮಹಿಳೆಯರ ಮತ್ತು ಮಕ್ಕಳ ದೌರ್ಜನ್ಯ ವಿರುದ್ಧ, ಕಾರ್ಯ ನಿರ್ವಹಿಸುವ ಸಾಮಾಜಿಕ ನ್ಯಾಯ ದುರ್ಬಲ ವರ್ಗದ, ಸಬಲೀಕರಣ, ಸಾಮಾಜಿಕ ನ್ಯಾಯ ಮತ್ತು ಈ ಸಂಬಂಧಿತ ವಿಭಾಗದಲ್ಲಿ ಸಾಧನೆ ಮಾಡಿದ ವ್ಯಕ್ತಿಗಳ ನಾಮನಿರ್ದೇಶನ/ಶಿಫಾರಸ್ಸಿಗೆ ಅರ್ಹರಿರುತ್ತಾರೆ.

ಈ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವ್ಯಕ್ತಿಗಳು ಆನ್‌ಲೈನ್ ಮೂಲಕ ನೇರವಾಗಿ ಇ–ಮೇಲ್ mwcd-padmaawards2027@gov.in ಗೆ ಕಳುಹಿಸಬೇಕು.

# ಜು.19ರಂದು ಚಿತ್ರದುರ್ಗದಲ್ಲಿ ಭೋವಿ ಜನೋತ್ಸವ: ಟಿ.ಸಿ. ಗುರುಪ್ಪ



**ಮಂಡ್ಯ:** ಚಿತ್ರದುರ್ಗ ಜಿಲ್ಲೆಯ ಭೋವಿ ಗುರುಪೀಠದಲ್ಲಿ ಜು.19ರ ಬೆಳಗ್ಗೆ 11 ಗಂಟೆಗೆ ಭೋವಿ ಜನೋತ್ಸವ ಕಾರ್ಯಕ್ರಮನಡೆಯಲಿದೆ ಎಂದು ಭಾರತೀಯ ಭೋವಿ (ಓಡ್) ಜನಾಂಗದ ಪರಿಷತ್ತಿನ ಜಿಲ್ಲಾಧ್ಯಕ್ಷ ಟಿ.ಸಿ.ಗುರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಂಗವಾಗಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿಗಳ 17ನೇ ಪಟ್ಟಾಭೀಷೇಕ ಹಾಗೂ 28ನೇ ಲಾಂಚನ ದೀಕ್ಷಾ ಮಹೋತ್ಸವ ನಡೆಯಲಿದೆ ಎಂದರು.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸುವರು. ಉಪಮುಖ್ಯಮಂತ್ರಿಗಳು ಸೇರಿದಂತೆ ಸರಕಾರದ ಅನೇಕ ಸಚಿವರು, ಶಾಸಕರು, ನಿಗಮ ಮಂಡಳಿ ಅಧ್ಯಕ್ಷ ರಾಮಪ್ಪ ಸೇರಿದಂತೆ ಅನೇಕ ಮಠಾಧೀಶರುಗಳು ಭಾಗವಹಿಸುವರು. ಈ ವೇಳೆ ವಧು–ವರರ ಸಮಾವೇಶ, ರಕ್ತದಾನ ಶಿಬಿರ ಹಾಗೂ ನಾನಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಮಾಡಲಾಗುವುದು. ಒಟ್ಟು 800 ವಿದ್ಯಾರ್ಥಿಗಳಿಗೆ ತಲಾ 5000 ನಗದಿನೊಂದಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ವಿವರಿಸಿದರು.

ಜನಾಂಗದ ಬಂದುಗಳು ಸ್ವ ಪ್ರೇರಣೆಯಿಂದ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಉಪಾಧ್ಯಕ್ಷ ಎಂ.ಆದಯ್ಯ ನಗರ ಅಧ್ಯಕ್ಷ ವಿ.ವೆಂಕಟರಾಮು, ನಿರ್ದೇಶಕರಾದ ಸಿ.ರಮೇಶ್, ಮುರುಗೇಶ್, ತಾ.ಅಧ್ಯಕ್ಷ ಹುಚ್ಚಪ್ಪ ಇದ್ದರು.

## ಮೈಸೂರು ಸಕ್ಕರೆ ಕಾರ್ಖಾನೆ ಅವ್ಯವಹಾರ ಆರೋಪ

# ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರ ವಜಾಕ್ಕೆ ಆಗ್ರಹ




**ಮಂಡ್ಯ:** ಮೈಶುಗರ್ ಆಡಳಿತ ಮಂಡಳಿಯ ವಿರುದ್ಧ ಆರೋಪ ಸಂಬಂಧ ನಿವೃತ್ತ ಸಕ್ಕರೆ ಆಯುಕ್ತ ಶೇಕರ ಗಾಯಕವಾಡ ನೇತೃತ್ವದ ತನಿಖಾ ಸಮಿತಿ ವರದಿಯಲ್ಲಿ ಹಗರಣ ಸಾಬೀತಾಗಿದೆ. ಕಾರ್ಖಾನೆಯ ಹಿತದೃಷ್ಠಿಯಿಂದ ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಹಾಗೂ ವ್ಯವಸ್ಥಾಪಕ ನಿರ್ದೇಶಕ ಮಂಗಲ್‌ದಾಸ್ ಅವರನ್ನು ಪದಚ್ಯುತಗೊಳಿಸಬೇಕು ಎಂದು ಮೈಶುಗರ್ ಉಳಿಸಿ ಹೋರಾಟ ಸಮಿತಿ ಎಂ.ಬಿ.ನಾಗಣ್ಣಗೌಡ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಿತಿಯು ಸರಕಾರಕ್ಕೆ ತನ್ನ ವರದಿ ಸಲ್ಲಿಸಿದೆ. ಮೈಶುಗರ್‌ನಲ್ಲಿ ನಿಯಮಗಳ ಉಲ್ಲಂಘನೆ, ಸ್ವಜನಪಕ್ಷಪಾತ, ಹಣ ದುರ್ಬಳಕೆ, ನಿಯಮಗಳನ್ನು ಗಾಳಿಗೆ ತೂರಿ ಏಜೆನ್ಸಿಗಳ ನೇರ ಗುತ್ತಿಗೆಗೆ ನೇಮಕ, ಹೆಚ್ಚಿನ ಸೇವಾಶುಲ್ಕ ಪಾವತಿ, ಸಕ್ಕರೆ ಎತ್ತುವಳಿ ಮಾಡದೇ ನಷ್ಟ, ನಿಯಬಾಹಿರವಾಗಿ ನಿವೃತ್ತ ನೌಕರರ ನೇಮಕ ಮಾಡಿರುವುದು ದೃಢಪಟ್ಟಿದೆ ಎಂದು ಹೇಳಿದರು.

ಸಿಸಿಟಿವಿ ಅಳವಡಿಕೆಯಲ್ಲಿ, ನಾನಾ ಕಾಮಗಾರಿಗಳ ಹೆಸರಿನಲ್ಲಿ ಅಕ್ರಮ, ಮೊಲಾಸಿಸ್ ಸೋರಿಕೆಯಿಂದ ನಷ್ಟ, ಒಂದೇ ವರ್ಷದಲ್ಲಿ ಹಲವು ಉಪಗುತ್ತಿಗೆ, ಆಂತರಿಕ ಸ್ವಚ್ಚತೆಗಾಗಿ ಆರ್‌ಬಿಟೆಕ್ ಹೆಸರಿನಲ್ಲಿ ಹಣ ಲಪಟಾಯಿಸಿರುವ ಸಾಧ್ಯತೆಯಿದೆ. ಸುಮಾರು 12 ಕೋಟಿ ಬೆಲೆಯ ಬಿ.ಮಿಲ್‌ನಲ್ಲಿ ಕೇವಲ 4.10 ಕೋಟಿಗೆ ಮಾರಾಟ, ಇದಕ್ಕೆ ಕಾರಣ ಕೇಳಿ ಸರಕಾರ ನೋಟಿಸ್ ಜಾರಿ ಮಾಡಿದೆ ಎಂದು ತಿಳಿಸಿದರು.

ಹೋರಾಟದ ಫಲವಾಗಿ ಅಗ್ಗದ ದರಕ್ಕೆ ಮೈಶುಗರ್ ಭೂಮಿ ವಿಲೇವಾರಿ ಪ್ರಕ್ರಿಯೆಗೆ ತಡೆ ಬಿದ್ದಿದೆ. ಸ್ವಾರ್ಥ ಸಾಧನೆಗೆ ಮೈಶುಗರ್ ಕಾರ್ಖಾನೆಯನ್ನು ದುರ್ಬಳಕೆ ಮಾಡಿಕೊಂಡ ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್ ಹಾಗೂ ವ್ಯವಸ್ಥಾಪಕ ನಿರ್ದೇಶಕ ಮಂಗಲ್ ದಾಸ್ ಅವರನ್ನು ತಕ್ಷಣದಿಂದ ಪದಚ್ಯುತಗೊಳಿಸಿ ಸೂಕ್ತ ತನಿಕೆಗೆ ರಾಜ್ಯ ಸರಕಾರ ಮುಂದಾಗಬೇಕು. ನ್ಯಾಯಾಲಯದ ತೀರ್ಪಿನಂತೆ ನಾಗರಾಜಪ್ಪ ಆಸ್ತಿ ಮುಟ್ಟುಗೋಲಿಗೆ ಜಿಲ್ಲಾಧಿಕಾರಿಗಳು ಮುಂದಾಗಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಕರವೇ ಜಿಲ್ಲಾಧ್ಯಕ್ಷ ಎಚ್.ಡಿ.ಜಯರಾಮ್, ವೇಣುಗೋಪಾಲ್, ರಾಜೂಗೌಡ, ಶಿವಳ್ಳಿ ಚಂದ್ರಶೇಖರ್ ಇದ್ದರು.

# 29ರಂದು ಉದ್ಯಮಶೀಲತಾ ತಿಳುವಳಿಕೆ ಶಿಬಿರ: ಅರ್ಜಿ ಆಹ್ವಾನ



**ರಾಮನಗರ:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಾಯೋಜಕತ್ವದಲ್ಲಿ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಸ್ಥಾಪಿಸಲು ಬಯಸುವ ಮಹಿಳೆಯರಿಗೆ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಜು.29 ರಂದು ಆಯೋಜಿಸಲಾಗಿದ್ದು, ಆಸಕ್ತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜು. 27 ಕೊನೆಯ ದಿನವಾಗಿದೆ. ಆಸಕ್ತ ಮಹಿಳಾ ಉದ್ಯಮಶೀಲರಿಗೆ ಅನುಕೂಲವಾಗಲು, ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸುವ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರದ ಕುರಿತು ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಆಯೋಜಿಸಲಾಗಿದೆ. ಅಭ್ಯರ್ಥಿಗಳು 18 ರಿಂದ 40 ವರ್ಷದೊಳಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು. ಎಲ್ಲಾ ವರ್ಗದ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗೆ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ನಂ. 208, ಕಂದಾಯ ಭವನ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ–562159 ಅಥವಾ 7090299843 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಸಿಡಾಕ್‌ನ ಸಲಹೆಗಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರೀಡಾ ಸಾಧಕರಿಗೆ ಉದ್ಯೋಗ ಮೀಸಲಾತಿ ; ವಿಶೇಷ ಪ್ರೋತ್ಸಾಹಧನ

# ರಾಜ್ಯದ 32 ಕಡೆಗಳಲ್ಲಿ 36 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣಗಳ ಅಭಿವೃದ್ಧಿ: ಪರಂ



**ಬೆಂಗಳೂರು:** ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಮಾಜದಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಒಟ್ಟು ಜನಸಂಖ್ಯೆಯಲ್ಲಿ ಶೇ.65ರಷ್ಟು ಜನರು 35 ವರ್ಷಕ್ಕಿಂತ ಕಡಿಮೆ ವಯೋಮಿತಿಯವರಿದ್ದಾರೆ. ಅವರನ್ನು ರಾಜ್ಯದ ಮತ್ತು ರಾಷ್ಟ್ರದ ಅಭಿವೃದ್ಧಿಗೆ ತೊಡಗಿಸಿಕೊಳ್ಳಬೇಕು. ಪದವಿ ಪಡೆಯುವುದರೊಳಗೆ ಮತದಾರರ ಹಕ್ಕು ಪಡೆಯುವ ಅವರಿಂದ ಸಮಾಜದ ಅಭಿವೃದ್ಧಿಗೆ ಉಪಕಾರಿಯಾಗುವಂತಹ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ನಮ್ಮ ಇಲಾಖೆಯು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ಅವರು ತಿಳಿಸಿದರು.

ಬೆಂಗಳೂರಿನ ನೃಪತುಂಗ ರಸ್ತೆಯ ಯವನಿಕಾ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ಶೇ. 15 ರಷ್ಟು ವಿನಾಯಿತಿ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಶೇ. 25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗುವುದು. ಇದನ್ನು ಕೂಡಲೇ ಅನುಷ್ಠಾನಗೊಳಿಸಲಾಗಿದ್ದು, ಸರ್ಕಾರಿ ಆದೇಶ ಹೊರಡಿಸಿರುವುದಾಗಿ ತಿಳಿಸಿದರು.

ವಿದ್ಯಾರ್ಥಿಗಳ ಹಾಜರಾತಿ ಶೇ. 50ರಷ್ಟು ಇದ್ದರೂ ಪರೀಕ್ಷೆ ಬರೆಯಲು ಅವಕಾಶ ನೀಡಬೇಕು. ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಾರೆ. ಅಂಥವರಿಗೆ ಹಾಜರಾತಿ ಬಂದಿರುವುದಿಲ್ಲ. ಇದು ನನ್ನ ಸ್ವಂತ ಅನುಭವವೂ ಹೌದು. ಹಾಗಾಗಿ ಯಾವುದೇ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಬಾರದು. ಈ ಉದ್ದೇಶದಿಂದ ಕ್ರೀಡಾಪಟು ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ವಿನಾಯಿತಿ ಅವಕಾಶ ಕಲ್ಪಿಸಲಾಗಿದೆ. ಒಟ್ಟು 34 ವಿವಿಧ ಕ್ರೀಡೆಗಳಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಹಾಜರಾತಿ ವಿನಾಯಿತಿ ನೀಡಲಾಗಿದ್ದು, ಕ್ರೀಡಾಕೂಟಗಳ ಪಟ್ಟಿಯನ್ನೂ ಸಹ ಒದಗಿಸಲಾಗಿದೆ ಎಂದು ವಿವರಿಸಿದರು.

ಸರ್ಕಾರವು ರಾಜ್ಯದ ಸಾಧಕ ಕ್ರೀಡಾಪಟುಗಳಿಗೆ ಉದ್ಯೋಗಾವಕಾಶ ನೀಡಲು ಹೆಚ್ಚಿನ ಆದ್ಯತೆ ನೀಡುತ್ತಿದೆ. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ 72 ಸಾವಿರ ಹುದ್ದೆಗಳ ಭರ್ತಿಗೆ ಮುಂದಾಗಿದೆ. ಶೇ.2 ರಷ್ಟು ಹುದ್ದೆಗಳನ್ನು ಕ್ರೀಡಾಪಟುಗಳಿಗೆ ಮೀಸಲಿಡಲು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಕರಡು ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸಾರ್ವಜನಿಕರ ಮತ್ತು ಕ್ರೀಡಾಪಟುಗಳ ಆಕ್ಷೇಪಣೆ ಮತ್ತು ಸಲಹೆಗಳನ್ನು ಪರಿಶೀಲಿಸಿ, ಶೀಘ್ರ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು ಎಂದರು.

ಮುಂದುವರೆದು ಮಾತನಾಡಿ, 72 ಸಾವಿರ ಹುದ್ದೆಗಳ ನೇಮಕಾತಿಯಲ್ಲಿ ಶೇ.2 ರಷ್ಟು ಕ್ರೀಡಾ ಮೀಸಲಾತಿ ಪ್ರಕಾರ 2 ಸಾವಿರ ಹುದ್ದೆಗಳು ಕ್ರೀಡಾಪಟುಗಳಿಗೆ ಲಭ್ಯವಾಗಲಿದೆ. ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಪ್ಯಾರಾ ಗೇಮ್ಸ್‌ಗಳಲ್ಲಿ ಪದಕ ವಿಜೇತ ಸಾಧಕ ಕ್ರೀಡಾಪಟುಗಳಿಗೆ ?ಎ? ಮತ್ತು ?ಬಿ? ಗುಂಪಿನ ಹುದ್ದೆಗಳನ್ನು ವಿಶೇಷ ನೇಮಕಾತಿಯಡಿ ಭರ್ತಿ ಮಾಡುತ್ತಿದೆ. ಈಗಾಗಲೇ 13 ಕ್ರೀಡಾಪಟುಗಳಿಗೆ ಆದೇಶ ಪತ್ರಗಳನ್ನು ನೀಡಿದ್ದು, 11 ಜನ ವರದಿ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಪ್ಯಾರಾ ಗೇಮ್ಸ್‌ಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆ ರೂ. 5 ಲಕ್ಷ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು. ಈ ಮೊತ್ತವು ಪದಕ ವಿಜೇತರಿಗೆ ನೀಡಲಾಗುವ ನಗದು ಪುರಸ್ಕಾರ ಮೊತ್ತಕ್ಕೆ ಹೆಚ್ಚುವರಿಯಾಗಿದೆ. ಕ್ರೀಡಾ ಇಲಾಖೆಯಲ್ಲಿ ಖಾಲಿ ಇರುವ ತರಬೇತುದಾರರ ಹುದ್ದೆಯ ಭರ್ತಿಗೆ ಆರ್ಥಿಕ ಇಲಾಖೆಯು ಅನುಮೋದನೆ ನೀಡಿದ್ದು, 50 ಖಾಯಂ ತರಬೇತುದಾರರ ಹುದ್ದೆಗಳ ಶೀಘ್ರ ನೇಮಕಾತಿಗೆ ಕ್ರಮ ವಹಿಸಲಾಗುವುದು ಎಂದರು.

ಮೊಟ್ಟ ಮೊದಲ ಬಾರಿಗೆ 'ಅಂತಾರಾಷ್ಟ್ರೀಯ ಮಟ್ಟದ ಯುವ ಜನೋತ್ಸವ'ವನ್ನು ಆಯೋಜಿಸಲು ಚಿಂತನೆ ನಡೆಸುತ್ತಿದ್ದೇವೆ. ನಮ್ಮ ಸಂಸ್ಕೃತಿ, ಕ್ರೀಡೆ ಮತ್ತು ಯುವಕರ ವಿಚಾರಧಾರೆಗಳನ್ನು ಅಳವಡಿಸಿ ಹಬ್ಬ ಮಾಡಲಾಗುವುದು. ಡಿಸೆಂಬರ್ ಅಥವಾ ಜನವರಿಯಲ್ಲಿ ಆಯೋಜಿಸಲಾಗುವುದು. ಪ್ರಸಕ್ತ ವರ್ಷದಿಂದ ತಾಲ್ಲೂಕು ಮಟ್ಟದಿಂದಲೇ ಅತ್ಯಂತ ವ್ಯವಸ್ಥಿತವಾಗಿ ದಸರಾ ಕ್ರೀಡಾಕೂಟಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ 32 ಕಡೆ ?36 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣಗಳನ್ನು ಅಭಿವೃದ್ಧಿ ಮಾಡುತ್ತಿದ್ದೇವೆ. ಈ ಬಾರಿಯ ಬಜೆಟ್‌ನಲ್ಲೂ ಹಲವು ಕಾರ್ಯಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದ ಅವರು, ಉನ್ನತ ಶಿಕ್ಷಣ ಸಚಿವನಾಗಿದ್ದ ವೇಳೆ ಮೊದಲ ಬಾರಿಗೆ ಸಿಇಟಿಯಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿ ನೀಡಲಾಗಿತ್ತು. ಈ ವರ್ಷ 115 ವಿದ್ಯಾರ್ಥಿಗಳಿಗೆ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಸೀಟುಗಳು ಸಿಕ್ಕಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ದೊಡ್ಡ ಹೆಜ್ಜೆ ಇರಿಸಿದೆ. ಕಂಠೀರವ ಕ್ರೀಡಾಂಗಣವನ್ನು ಪುನರ್ ಅಭಿವೃದ್ಧಿ ಮಾಡಲಾಗುವುದು. ಅಂತಾರಾಷ್ಟ್ರೀಯ ಮಟ್ಟದ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಜೊತೆಗೆ ಕಾಮನ್‌ವೆಲ್ತ್ ಗೇಮ್ಸ್ ಅಥವಾ ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳನ್ನು ಆಯೋಜಿಸಲು ಬೇಕಾದ ಮೂಲಸೌಕರ್ಯಗಳನ್ನು ಒದಗಿಸಲಾಗುವುದು. ಕ್ಯಾಬಿನೆಟ್‌ನಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಲೋಕಸಭಾ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿಯವರು ದೇಶದ ಯುವಜನತೆಗೆ ಭಾರತದ ಬಹುತ್ವದ ಸಂಸ್ಕೃತಿ, ಮತ್ತು ಇತಿಹಾಸದ ಸಂದೇಶವನ್ನು ತಲುಪಿಸುವ ಉದ್ದೇಶದಿಂದ ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಸುಮಾರು 3,570 ಕಿ.ಮೀ.ಗಳಷ್ಟು ಭಾರತ್ ಜೋಡೋ ಯಾತ್ರೆಯನ್ನು ಕೈಗೊಂಡಿದ್ದರು. ಅದರ ನೆನಪಿಗಾಗಿ ವಿಶೇಷ ಕಾರ್ಯಕ್ರಮವನ್ನು ಘೋಷಿಸುವುದಾಗಿ ನಾವು ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದೆವು. ಅದರಂತೆ ಭಾರತ್ ಜೋಡೋ ಯುವ ಸಂಘವನ್ನು ಆರಂಭಿಸುತ್ತಿದ್ದೇವೆ. ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮೊದಲ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ತೇಗದುಕೊಂಡಿದ್ದಾರೆ. ಯುವಕರನ್ನು ಆಯ್ಕೆ ಮಾಡಿ ಭಾರತ್ ಜೋಡೋ ಸಂಘ ಮಾಡಲು ಸರ್ಕಾರಿ ಆದೇಶ ಹೊರಡಿಸಲಾಗಿದೆ ಎಂದು ಈ ಸಂದರ್ಭದಲ್ಲಿ ವಿವರಿಸಿದರು.

ಮುಂದುವರೆದು ಮಾತನಾಡಿ, ಕ್ರೀಡಾ ಇಲಾಖೆಗೆ ಈ ಜವಾಬ್ದಾರಿ ನೀಡಿದ್ದಾರೆ. ಒಂದೊಂದು ಪಂಚಾಯಿತಿಯಲ್ಲಿ 200 ಜನರನ್ನೊಳಗೊಂಡಂತೆ 10 ಸಾವಿರ ಸಂಘಗಳನ್ನು ಮಾಡಿ, ಒಂದು ಸಂಘಕ್ಕೆ ವರ್ಷಕ್ಕೆ 10 ಲಕ್ಷ ರೂ. ನೀಡಲಾಗುವುದು.

# ಕಾನೂನಿನ ಕ್ರಾಂತಿ



ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸಹಕಾರವೇ ಬಾಳಿನ ಆಧಾರ ಎಂಬ ವೇದವಾಕ್ಯಕ್ಕೆ ಕಾನೂನಿನ ಕಸುವು ತುಂಬಿದ ಸಂವಿಧಾನ ಶಿಲ್ಪಿ ಶ್ರೀ ರಾಮ ರೆಡ್ಡಿ ಮಾಮಿಡಿ.2026ರ ಪದ್ಮಶ್ರೀ ಗೌರವಕ್ಕೆ ಭಾಜನರಾದ ಇವರು ಭಾರತದ ಆಧುನಿಕ ಸಹಕಾರಿ ಚಳವಳಿಯ ಪ್ರಮುಖ ರೂವಾರಿ. ಆಂಧ್ರಪ್ರದೇಶ ಪರಸ್ಪರ ನೆರವಿನ ಸಹಕಾರಿ ಸಂಘಗಳ ಕಾಯ್ದೆ, 1995 ಇವರ ದೂರದೃಷ್ಟಿಯ ಹೆಜ್ಜೆಗುರುತು. ಸರ್ಕಾರದ ಕಪಿಮುಷ್ಟಿಯಿಂದ ಸಂಸ್ಥೆಗಳನ್ನು ಮುಕ್ತಗೊಳಿಸಿ, ಸದಸ್ಯರೇ ಮಾಲೀಕರು ಎಂಬ ಸ್ವರಾಜ್ಯದ ಮಂತ್ರಕ್ಕೆ ಕಾನೂನಿನ ಮುದ್ರೆ ಒತ್ತಿದರು.ಕಾನೂನು ರಚಿಸಿ ಕೈತೊಳೆದುಕೊಳ್ಳದೆ, ಅದನ್ನು ನೆಲದ ಮೇಲೆ ನೆಟ್ಟು ಫಲ ನೀಡುವಂತೆ ಮಾಡಿದರು.



ಸ್ಫೂರ್ತಿ ಸುಧೆ - 70


ಅದರ ಫಲವಾಗಿ 585 ಉಳಿತಾಯ ಮತ್ತು ಸಾಲ ಸಂಘಗಳು ಹಳ್ಳಿಯ ಮಣ್ಣಲ್ಲಿ ಅರಳಿದವು. ಬಡವರ ಬೆವರಿನ ಚಿಲ್ಲರೆ ಬ್ಯಾಂಕಿನ ಬಂಡವಾಳವಾಯಿತು. ಸಾಹುಕಾರನ ಬಾಗಿಲು ಕಾಯುತ್ತಿದ್ದ ರೈತನ ಕೈಗೆ ಸ್ವಾಭಿಮಾನದ ಪಾಸ್‌ಬುಕ್ ಸೇರಿತು. ಉದ್ಯೋಗಕ್ಕಾಗಿ ಅಲೆದಾಡುವ ಬದಲು ಉದ್ಯಮ ಕಟ್ಟುವ ಧೈರ್ಯಕ್ಕೆ ಇವರ ಬದುಕೇ ಪಾಠವಾಯಿತು. ಕಾನೂನು ಕಾಗದಲ್ಲೇ ಉಳಿಯದೆ ಜನರ ಜೇಬು ತಲುಪಿತು.

ಇವರ ಶ್ರೇಷ್ಠ ಕೊಡುಗೆ ಮುಲುಕನೂರು ಮಾದರಿ. ಭಾರತದ ಮೊದಲ ಸಂಪೂರ್ಣ ಮಹಿಳಾ ಮಾಲೀಕತ್ವದ ಹೈನುಗಾರಿಕೆ ಇಲ್ಲಿಂದಲೇ ಹುಟ್ಟಿತು. ಹಳ್ಳಿ ಹೆಣ್ಣುಮಕ್ಕಳ ಕೈಗೆ ಲೆಕ್ಕದ ಪುಸ್ತಕ, ಲಾಭದ ಚೆಕ್ ನೀಡಿ ಸಬಲೀಕರಣಕ್ಕೆ ಹೊಸ ವ್ಯಾಖ್ಯಾನ ಬರೆದರು. ಇದು ಅನುದಾನದ ಭಿಕ್ಷೆಯಲ್ಲ, ಸ್ವಾವಲಂಬನೆಯ ಸಾಮ್ರಾಜ್ಯ. ಹೆಣ್ಣಿನ ಕೈಗೆ ಆರ್ಥಿಕ ಅಧಿಕಾರ ನೀಡಿ ಗ್ರಾಮೀಣ ಆರ್ಥಿಕತೆಯ ಚಿತ್ರವನ್ನೇ ಬದಲಿಸಿದರು.

ಈ ಪದ್ಮಶ್ರೀ ಕಾನೂನು ಪಂಡಿತನಿಗಲ್ಲ, ಸಾಮಾಜಿಕ ಕ್ರಾಂತಿಯ ಸೂತ್ರಧಾರನಿಗೆ ಸಂದ ನಮನ. ಅವರ ಸಂದೇಶ ಸ್ಪಷ್ಟ: ಕಾನೂನು ಶಿಕ್ಷಿಸುವ ದಂಡವಲ್ಲ, ಸಮುದಾಯ ಕಟ್ಟುವ ಉಳಿ. ಒಂದು ಐಡಿಯಾಗೆ ಕಾನೂನಿನ ಬಲ ತುಂಬಿದರೆ, ಆ ಐಡಿಯಾವೇ ಯುಗವನ್ನು ಬದಲಿಸಬಲ್ಲದು. ರಾಮ ರೆಡ್ಡಿ ಮಾಮಿಡಿ ಅವರ ಬದುಕು ಅದಕ್ಕೆ ಸಾಕ್ಷಿ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ದಿಲ್‌ದಾರ್ ಚಿತ್ರದ ಫಸ್ಟ್ ಲುಕ್ ಟೀಸರ್ ಬಿಡುಗಡೆ!



ಪಡ್ಡೆಹುಲಿ ಖ್ಯಾತಿಯ ಶ್ರೇಯಸ್ ಮಂಜು ನಾಯಕನಾಗಿ ನಟಿಸಿರುವ ಚಿತ್ರ 'ದಿಲ್‌ದಾರ್'. ಮಧು ಗೌಡ ಗಂಗೂರ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಸಿನಿಮಾದ ಫಸ್ಟ್ ಲುಕ್ ಟೀಸರ್ ಇದೀಗ ಬಿಡುಗಡೆಗೊಂಡಿದೆ. ಈಗಾಗಲೇ ಮಾಸ್ ಪಾತ್ರಗಳ ಮೂಲಕ ಗಮನ ಸೆಳೆದಿರುವ ಶ್ರೇಯಸ್ ಮಂಜು, ಈ ಚಿತ್ರದಲ್ಲಿ ಮತ್ತೊಂದೊಂದು ಹಂತದ ಮಾಸ್ ಅವತಾರದಲ್ಲಿ ಕಾಣಿಸಿಕೊಂಡಿರುವ ಸುಳಿವೊಂದು ಈ ಮೂಲಕ ಜಾಹೀರಾಗಿದೆ.

ಏನ್ಸಿಯಂಟ್ ಮೂವೀಸ್ ಬ್ಯಾನರಿನಡಿಯಲ್ಲಿ ಆರ್. ಸಂತೋಷ್ ಕುಮಾರ್ (ಎಸ್‌ವಿಟಿ) ನಿರ್ಮಾಣ ಮಾಡಿರುವ ದಿಲ್‌ದಾರ್ ಚಿತ್ರವೀಗ ಚಿತ್ರೀಕರಣವನ್ನೆಲ್ಲ ಮುಗಿಸಿಕೊಂಡು ಬಿಡುಗಡೆಯ ಹೊಸ್ತಿಲಲ್ಲಿದೆ. ಈ ಹಂತದಲ್ಲಿ ಫಸ್ಟ್ ಲುಕ್ ಟೀಸರ್ ಮೂಲಕ ಪ್ರೇಕ್ಷಕರನ್ನು ತಲುಪಲು ಚಿತ್ರತಂಡ ಪ್ರಯತ್ನಿಸಿದೆ. ಈ ಹಿಂದೆಯೇ ಶ್ರೇಯಸ್ ಮಂಜು ಈ ಹಿಂದೆಂದೂ ಕಾಣಿಸಿಕೊಂಡಿರದಿದ್ದ ಪಾತ್ರದಲ್ಲಿ ನಟಿಸಿದ್ದಾರೆಂದು ಚಿತ್ರತಮಡ ಹೇಳಿಕೊಂಡಿತ್ತು. ಅದರ ಚಹರೆ ಈ ಟೀಸರ್ ಮೂಲಕ ಅನಾವರಣಗೊಂಡಿದೆ.

ಇದು ಭಿನ್ನವಾದೊಂಣದು ಪ್ರೇಮ ಕಥಾನಕವನ್ನೊಳಗೊಂಡಿರೋ ಪಕ್ಕಾ ಆಕ್ಷನ್ ಚಿತ್ರವೆಂಬ ಬಗ್ಗೆ ಚಿತ್ರತಂಡ ಹೇಳಿಕೊಂಡಿದೆ.

ನಟ ಶರಣ್ ಅವರ ತಂಗಿ ಮಗಳಾದ ಕೀರ್ತಿ ಕೃಷ್ಣ ಈ ಚಿತ್ರದ ಮೂಲಕವೇ ನಾಯಕಿಯಾಗಿ ಪಾದಾರ್ಪಣೆ ಮಾಡುತ್ತಿದ್ದಾರೆ. ಸಾಧು ಕೋಕಿಲಾ, ಚಂದ್ರಪ್ರಭ, ಕಾರ್ತಿಕ್, ಚಿಲ್ಲರ್ ಮಂಜು ಮುಂತಾದ ಹಾಸ್ಯ ನಟರ ದಂಡೇ ಈ ಚಿತ್ರದಲ್ಲಿದೆ. ಕೆಜಿಎಫ್ ಖ್ಯಾತಿಯ ಆಂಡ್ರೋ ಅವಿನಾಶ್, ಭಜರಂಗಿ ಲೋಕಿ, ಅರ್ಪಿತ್ ಖಳ ನಟರಾಗಿ ಅಬ್ಬರಿಸಿದ್ದಾರೆ. ಹರೇಕೃಷ್ಣ ರೆಡ್ಡಿ ಎಸ್ ಕರ್ಯಕಾರಿ ನಿರ್ಮಾಪಕರಾಗಿ ಜೊತೆಯಾಗಿದ್ದಾರೆ. ದಿಲ್ ದಾರ್ ಕುರಿತಾದ ಮತ್ತಷ್ಟು ಮಾಹಿತಿಗಳು ಶೀಘ್ರದಲ್ಲಿಯೇ ಪ್ರೇಕ್ಷಕರನ್ನು ತಲುಪಲಿವೆ.

## ಜಾಕಿ 42 ಚಿತ್ರದ ಮೊದಲ ಹಾಡು ಬಿಡುಗಡೆ




ಗುರುತೇಜ್ ಶೆಟ್ಟಿ ನಿರ್ದೇಶನದಲ್ಲಿ ಕಿರಣ್ ರಾಜ್ ನಾಯಕನಾಗಿ ಅಭಿನಯಿಸಿರುವ ?ಜಾಕಿ 42? ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ.

"ಮುತ್ತು ಮುತ್ತು ಮಾತಾಯಿತ? ಎನ್ನುವ ರೊಮ್ಯಾಂಟಿಕ್ ಲವ್ ಸಾಂಗ್ ಈ ಚಿತ್ರದ ಮೊದಲಗೀತೆಯಾಗಿ ಬಿಡುಗಡೆಯಾಗಿದ್ದು, ನಾಗಾರ್ಜುನ ಶರ್ಮ ಈ ಸುಂದರ ಪ್ರೇಮಗೀತೆಯನ್ನು ಬರೆದಿದ್ದಾರೆ. ವಿನೋದ್ ಯಜಮಾನ್ಯ ಸಂಗೀತ ನೀಡಿದ್ದಾರೆ. ಖ್ಯಾತ ಬಾಲಿವುಡ್ ಗಾಯಕರಾದ ಅರ್ಮಾನ್ ಮಲ್ಲಿಕ್ ಹಾಗೂ ಪಾಲಕ್ ಮುಚ್ಚಲ್ ಹಾಡಿದ್ದಾರೆ

ಗೋಲ್ಡನ್ ಗೇಟ್ ಸ್ಟುಡಿಯೋ ಲಾಂಛನದಲ್ಲಿ ಭಾರತಿ ಸತ್ಯನಾರಾಯಣ ಈ ಚಿತ್ರವನ್ನು ನಿರ್ಮಿಸಿದ್ದು, ಗುರುತೇಜ್ ಶೆಟ್ಟಿ ಕಥೆ ಚಿತ್ರಕಥೆ ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಹಾರ್ಸ್ ರೇಸ್ ಹಿನ್ನೆಲೆಯಲ್ಲಿ ಈ ಚಿತ್ರ ತಯಾರಾಗಿದ್ದು ಭಾರತೀಯ ಚಿತ್ರ ರಂಗದಲ್ಲೇ ಪೂರ್ಣ ಪ್ರಮಾಣದ ಹಾರ್ಸ್ ರೇಸ್ ಹಿನ್ನೆಲೆಯಲ್ಲಿ ಬರುತ್ತಿರುವ ಚಿತ್ರ ಇದಾಗಿದೆ. ಕಿರಣ್ ರಾಜ್, ಹೃತಿಕ ಶ್ರೀನಿವಾಸ್, ಯುಕ್ತ, ದೀಪಕ್ ರೈ, ರಾಜೇಂದ್ರ ಕಾರಂತ್, ಚೇತನ್ ರೈ ಮಣಿ, ಮಧುಸೂದನ್ ರಾವ್, ಗಿರೀಶ್ ಹೆಗ್ಡೆ ಅರುಣ್ ಆಚಾರ್ ಮುಂತಾದ ಕಲಾವಿದರು ತಾರಾ ಗಣದಲ್ಲಿದ್ದಾರೆ.

## ನಿರೂಪ್ ಭಂಡಾರಿ ಜೊತೆಯಾದ ಸ್ವಾತಿಷ್ಟ



ನಿರೂಪ್ ಭಂಡಾರಿ ಅತಿಕಾಯ ನ ಅವತಾರದಲ್ಲಿ ಕಾಣಿಸಿಕೊಳ್ಳುತ್ತಿರುವ ವಿಷಯ ಈಗಾಗಲೇ ತಿಳಿದಿದೆ.

ಜೋಡಿಯಾಗಿ ಸ್ವಾತಿಷ್ಟ ಕೃಷ್ಣನ್ ನಟಿಸುತ್ತಿದ್ದಾರೆ. ಧಾರವಾಡದವರಾದ ಸ್ವಾತಿಷ್, ಕನ್ನಡ, ತಮಿಳು ಹಾಗೂ ತೆಲುಗಿನಲ್ಲಿ ಖ್ಯಾತಿ ಗಳಿಸಿದ್ದಾರೆ.

ತಮಿಳಿನ ಸವರಕತ್ತಿ, ವಿಕ್ರಮ್, ತೆಲುಗಿನ ಗುಂಡೇ ಕಥಾ ವಿಂಟಾರ ಹಾಗೂ ಕನ್ನಡದ ಒಂದು ಸರಳ ಪ್ರೇಮಕಥೆ, ರಕ್ಕಸಪುರದೋಳ್ ಮೊದಲಾದ ಸಿನಿಮಾಗಳಲ್ಲಿ ಅಭಿನಯಿಸಿ ಸೈ ಎನ್ನಿಸಿಕೊಂಡಿರುವ ಸ್ವಾತಿಷ್ಟ, ಇದೀಗ ಅತಿಕಾಯ ದಲ್ಲಿ ನಟಿಸುತ್ತಿದ್ದಾರೆ.

ಈವರೆಗೂ ಚಾಕೋಲೆಟ್ ಬಾಯ್, ಲವರ್ ಬಾಯ್ ಗೆಟಪ್‌ನಲ್ಲಿ ಕಂಗೊಳಿಸುತ್ತಿದ್ದ ನಿರೂಪ್ ಭಂಡಾರಿ, ಇದೀಗ ಸಖತ್ ರಗಡ್ ಲುಕ್‌ನಲ್ಲಿ ಎಂಟ್ರಿ ಕೊಟ್ಟಿದ್ದಾರೆ. ರಕ್ತಸಿಕ್ತ ದಿರಿಸಿನಲ್ಲಿ ಕ್ಯಾಮೆರಾ ಎದುರಿಸಿದ್ದಾರೆ.

ನಾಗರಾಜ್ ಪೀಣ್ಯ, ಅತಿಕಾಯ ನಿಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಬೆಂಗಳೂರಿನ ಜನಜಂಗುಳಿ ಪ್ರದೇಶಗಳಲ್ಲೇ ಬಹುತೇಕ ಚಿತ್ರೀಕರಣ ನಡೆದಿದೆ. ಎ.ಎನ್ ಮೂವಿ ಮೇಕರ ಸ್ ಹಾಗೂ ನಿಹಾಲ್ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಸಿನಿಮಾವನ್ನು ಜೆ.ಮಹೇಶ್ ಕುಮಾರ್ ಅರ್ಪಿಸುತ್ತಿದ್ದಾರೆ. ಹರೀಶ್ ರಾಯ್, ದಿನೇಶ್ ಮಂಗ್ಳೂರು, ಬಿ.ಸುರೇಶ, ಕಾಕ್ರೋಚ್ ಸುಧೀ, ವಜ್ರಧೀರ್ ಜೈನ್, ವರ್ಧನ್ ತೀರ್ಥಹಳ್ಳಿ, ಮಹಾಂತೇಶ್ ಹಾಗೂ ಜಾಕ್ ಜಾಲಿ ಮುಂತಾದವರು ಚಿತ್ರದ ತಾರಾಗಣದಲ್ಲಿದ್ದಾರೆ.

## `ಫಾದರ್ಸ್ ಡೇ` ಪ್ರಮೋಷನ್ ಸಾಂಗ್ ಬಿಡುಗಡೆ..



ರಾಜಾರಾಮ್ ರಾಜೇಂದ್ರನ್ ನಿರ್ಮಾಣ, ನಿರ್ದೇಶನವನ್ನೂ ಮಾಡಿರುವ ಚಿತ್ರ "ಫಾದರ್ಸ್ ಡೇ". ತಂದೆ – ಮಗನ ಬಾಂಧವ್ಯ ಸಾರುವ ಚಿತ್ರ. ಈ ವಾರ ಬಿಡುಗಡೆಯಾಗುತ್ತಿದೆ. ಕನ್ನಡದ ಮೊದಲ ಬೈಕ್ ರೈಡರ್ ಚಿತ್ರವಾಗಿದೆ.

ಚಿತ್ರ ಬಿಡುಗಡೆಗೂ ಪೂರ್ವದಲ್ಲಿ ೦ಐಐ ಔಏ ಸಾರಥ್ಯದಲ್ಲಿ ಮೂಡಿಬಂದಿರುವ ಪ್ರಮೋಷನ್ ಸಾಂಗ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ.

"ಫಾದರ್ಸ್ ಡೇ".. ಒಂದು ದಿನದಲ್ಲಿ ನಡೆಯುವ ಕಥೆ. ಅಪ್ಪ – ಮಗನ ಬಾಂಧವ್ಯದ ಕಥೆಯೂ ಹೌದು. ಸಹ ಪಯಣಿಗರು ಅಪ್ಪ – ಮಗ ಎಂದು ನೋಡುಗರಿಗೆ ತಿಳಿದಿರುತ್ತದೆ. ಆದರೆ ಅವರಿಗೆ ಅದು ಗೊತ್ತಿರುವುದಿಲ್ಲ. ಇದರ ಜೊತೆಗೆ ಯಾರು ನಿರೀಕ್ಷಿಸದ ಕ್ಲೈಮ್ಯಾಕ್ಸ್ ಸಹ ಈ ಚಿತ್ರದಲ್ಲಿದೆ. ಅದೇ ಚಿತ್ರದ ವಿಶೇಷ. ಇನ್ನೂ ಈ ಚಿತ್ರಕ್ಕೆ ಡಬ್ಬಿಂಗ್ ಮಾಡಿಲ್ಲ. ಚಿತ್ರೀಕರಣ ನಡೆಯುವಾಗ ಆಡಿದ ನೈಜ ಸಂಭಾಷಣೆಯನ್ನೇ ಬಳಸಿಕೊಳ್ಳಲಾಗಿದೆ. ಅಜಿತ್ ಹಂಡೆ ಹಾಗೂ ಹರ್ಷಿಲ್ ಕೌಶಿಕ್ ಅಪ್ಪ – ಮಗನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸಾಮ್ರಾಗ್ನಿ ರಾಜನ್, ALL OK, ಕ್ಷೇಮ ಶೆಟ್ಟಿ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸಾಮ್ರಾಗ್ನಿ ಅವರು ಸಹ ಬೈಕ್ ರೈಡಿಂಗ್ ಮಾಡಿದ್ದಾರೆ. ಸೆನ್ಸಾರ್ ಮಂಡಳಿ ಗ/೦ 7+ ಪ್ರಮಾಣಪತ್ರ ನೀಡಿದೆ. ಈ ವಾರ ಚಿತ್ರ ತೆರೆಗೆ ಬರುತ್ತಿದೆ. 'ಫಾದರ್ಸ್ ಡೇ' ದಿನ ಬಿಡುಗಡೆಯಾಗಿದ್ದ ಟ್ರೇಲರ್ ಗೆ ಪ್ರಶಂಸೆ ದೊರಕಿದೆ. ಚಿತ್ರ ಬಿಡುಗಡೆಗೂ ಮುಂಚೆ ಪ್ರಮೋಷನ್ ಸಾಂಗ್ ಅನಾವರಣವಾಗಿದೆ. ಮಕ್ಕಳಿಂದ ಹಿರಿಯರ ತನಕ ನೋಡಬಹುದಾದ ಮನೋರಂಜನೆಯ ಚಿತ್ರ ಇದಾಗಿದೆ ಎಂದು ಚಿತ್ರದ ನಿರ್ದೇಶಕ. ರಾಜಾರಾಮ್ ರಾಜೇಂದ್ರನ್ ತಿಳಿಸಿದರು.

ನಟ ಅಜಿತ್ ಹಂಡೆ ಮಾತನಾಡಿ "ಫಾದರ್ಸ್ ಡೇ" ಕೌಟುಂಬಿಕ ಚಿತ್ರ. ಅಪ್ಪ ಮಗನ ಕಥೆ..

ಈ ಚಿತ್ರದಲ್ಲಿ 1200 ಸಿಸಿ ಬೈಕ್ ಓಡಿಸಿದ್ದು ಒಳ್ಳೆಯ ಅನುಭವ. ಬೈಕ್ ಓಡಿಸಲು ಶುರು ಮಾಡಿದಾಗ ನನಗೆ ಹೇಳಿ ಮಾಡಿಸಿದ ಬೈಕ್ ಅನಿಸಿತು. ಬೈಕ್ ಕೂಡ ಚಿತ್ರದ ಪ್ರಮುಖ ಪಾತ್ರಧಾರಿ ಚಿತ್ರೀಕರಣದ ಅನುಭವ ಕೂಡ ಚೆನ್ನಾಗಿತ್ತು ಎಂದರು.

ನಾಯಕ ಹರ್ಷಿಲ್ ಕೌಶಿಕ್ ಮಾತನಾಡಿ "ಫಾದರ್ಸ್ ಡೇ" ಎಲ್ಲಾ ವಯಸ್ಸಿನವರು ಮುಜುಗರವಿಲ್ಲದೆ ನೋಡಬಹುದಾದ ತಿಳಿಹಾಸ್ಯ ಹಾಗೂ ಶುದ್ದ ಮನೋರಂಜನೆಯ ಚಿತ್ರ. ಮ್ಯೂಸಿಕ್ ಸಹ ತುಂಬಾ ಚೆನ್ನಾಗಿದೆ. ALL OK ಹಾಗೂ ತಂಡದವರು ಒಂದೊಳ್ಳೆ ಪ್ರಮೋಷನ್ ಸಾಂಗ್ ನೀಡಿದ್ದಾರೆ. ಎಂದರು.

ಚಿತ್ರದಲ್ಲಿ "ಬ್ಲೂಸ್" ಶೈಲಿಯ ಸಂಗೀತವಿರುವುದು ವಿಶೇಷ ಎಂದರು ನನ್ನ ತಂದೆ ಹಾಗೂ ತಾಯಿ ಬೈಕ್ ರೈಡರ್ಸ್. ನನಗೂ ಚಿಕ್ಕಂದಿನಿಂದಲೂ ಬೈಕ್ ಓಡಿಸುವುದರಲ್ಲಿ ಆಸಕ್ತಿ. ಈ ಚಿತ್ರದಲ್ಲೂ ಬೈಕ್ ರೈಡರ್ ಪಾತ್ರದಲ್ಲೇ ಅಭಿನಯಿಸಿದ್ದೇನೆ ಎಂದು ನಟಿ ಸಮ್ರಾಗ್ನಿ ರಾಜನ್ ತಿಳಿಸಿದರು. ನಟಿ ಕ್ಷೇಮ ಶೆಟ್ಟಿ ಹಾಗೂ ಸಂಗೀತ ನಿರ್ದೇಶಕಿ ಜೋ ಪ್ಯಾನಿಕರ್ ಪತ್ರಿಕಾಗೋಷ್ಠಿಯಲ್ಲಿದ್ದರು.

## ನಾರಿ ಚಿತ್ರಕ್ಕೆ ಅದ್ದೂರಿ ಚಾಲನೆ



ಕುಬೇರ್ ಕೆ. ಇಂಪೂ ನಿರ್ದೇಶನದ, ರವಿ ಕಲ್ಯಾಣ್ ನಾಯಕನಾಗಿ ನಟಿಸುತ್ತಿರುವ ಚಿತ್ರ

ಆರ್.ಕೆ. ಗೋಲ್ಡನ್ ಮೂವಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ಮುನಿರಾಜು ಮತ್ತು ರೋಜಮ್ಮ ನಿರ್ಮಿಸುತ್ತಿರುವ ನಾರಿ ಚಿತ್ರದ ಮುಹೂರ್ತ ಸಮಾರಂಭ ಸೋಮವಾಗ ಶ್ರೀ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ವಿದ್ಯುಕ್ತವಾಗಿ ನೆರವೇರಿತು. ಈ ಚಿತ್ರದ ಮೂಲಕ ರವಿ ಕಲ್ಯಾಣ್ ನಾಯಕನಾಗಿ ಪದಾರ್ಪಣೆ ಮಾಡುತ್ತಿದ್ದು, ಕುಬೇರ್ ಕೆ. ಇಂಪೂ ಕಥೆ–ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.

ಸುಮಾರು 10 ಚಿತ್ರಗಳಲ್ಲಿ ಖಳನಾಯಕನಾಗಿ ಅಭಿನಯಿಸಿರುವ ರವಿ ಕಲ್ಯಾಣ್, ಈ ಚಿತ್ರದ ಮೂಲಕ ಹೀರೋ ಆಗಿದ್ದಾರೆ. ಅವರ ತಂದೆ–ತಾಯಿ ಈ ಚಿತ್ರದ ನಿರ್ಮಾಪಕರು. ಚಿತ್ರದ ಕುರಿತು ಮಾತನಾಡುವ ಅವರು, ನಾಯಕನಾಗಿ ಇದು ನನ್ನ ಮೊದಲ ಚಿತ್ರ. ಇದಕ್ಕೂ ಮೊದಲು ಸುಮಾರು 10 ಚಿತ್ರಗಳಲ್ಲಿ ಖಳನಾಯಕನಾಗಿ ಅಭಿನಯಿಸಿದ್ದೇನೆ. ದರ್ಶನ್, ಚಿರಂಜೀವಿ ಸರ್ಜಾ, ಸಂಚಾರಿ ವಿಜಯ್ ಮುಂತಾದವರ ಚಿತ್ರಗಳಲ್ಲಿ ನಟಿಸಿದ್ದೇನೆ. ಇದೊಂದು ಒಳ್ಳೆಯ ಕಥೆ. ಸಮಾಜಕ್ಕೆ ಒಂದೊಳ್ಳೆಯ ಸಂದೇಶವಿದೆ. ಒಂದು ಮನೆಗೆ ಗಂಡು ಮಗ ಎಷ್ಟು ಮುಖ್ಯ ಎಂಬುದು ಚಿತ್ರದ ಕಥೆ. ಇಲ್ಲಿ ಕಥೆಯೇ ಹೀರೋ.

ನಿರ್ದೇಶಕರು ಪ್ರತೀ ಪಾತ್ರವನ್ನು ಬಹಳ ಚೆನ್ನಾಗಿ ಬರೆದಿದ್ದಾರೆ. ಈ ಪಾತ್ರಕ್ಕಾಗಿ ಸಾಕಷ್ಟು ತಯಾರಿ ಮಾಡಿಕೊಂಡಿದ್ದೇನೆ ಎಂದು ಹೇಳಿದರು.

ಕಳೆದ 15 ವರ್ಷಗಳಲ್ಲಿ ಪದೇಪದೇ , ಅಭಿನೇತ್ರಿ , ಮಾದ ಮತ್ತು ಮಾನಸಿ , ಧರ್ಮಸ್ಯ , ಪಾದರಸ ಸೇರಿದಂತೆ 20 ಚಿತ್ರಗಳಿಗೆ ಕಥೆ–ಚಿತ್ರಕಥೆ ಬರೆದಿರುವ ಕುಬೇರ್, ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗುತ್ತಿದ್ದಾರೆ. ನಾರಿ ಚಿತ್ರದ ಕುರಿತು ಮಾತನಾಡುವ ಅವರು, ಒಂದು ಸಮಾಜದಲ್ಲಿ ಒಳ್ಳೆಯದ್ದನ್ನೇ ಮಾಡುವುದಕ್ಕೆ ಹೊರಟ ಒಬ್ಬ ಮನುಷ್ಯನ ಜೀವನದಲ್ಲಿ ಏನೆಲ್ಲಾ ಆಗುತ್ತದೆ ಎಂಬುದು ಚಿತ್ರದ ಕಥೆ. ಸಮಾಜಕ್ಕೆ ಸದಾ ಒಳ್ಳೆಯದನ್ನೇ ಬಯಸುವ ವ್ಯಕ್ತಿಗೆ ಸಮಸ್ಯೆಗಳು ಎದುರಾದಾಗ, ಅವನು ಹೇಗೆ ಎದುರಿಸುತ್ತಾನೆ ಎಂಬುದನ್ನು ಈ ಚಿತ್ರದ ಮೂಲಕ ಹೇಳುವುದುಕ್ಕೆ ಹೊರಟಿದ್ದೇವೆ. ಇಲ್ಲಿ ನಾಯಕನ ಪಾತ್ರಕ್ಕೆ ಎರಡು ಶೇಡ್‌ಗಳಿವೆ. ನಾರಿ ಎಂಬ ಶೀರ್ಷಿಕೆ ಕಥೆಗೆ ಸೂಕ್ತವಾಗಿದ್ದು, ಚಿತ್ರ ನೋಡಿದರೆ ಗೊತ್ತಾಗುತ್ತದೆ ಎಂದು ಹೇಳಿದರು. ಈ ಚಿತ್ರಕ್ಕಾಗಿ ಬೆಂಗಳೂರು, ಮಂಡ್ಯ, ಮಧುರೈ ಮುಂತಾದ ಕಡೆ ಚಿತ್ರೀಕರಣ ನಡೆಸಲಾಗುತ್ತದೆ. ವಿಶೇಷವೆಂದರೆ, ತಾಜ್ ಮಹಲ್ ಚಿತ್ರದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಮೂವರು ಜನಪ್ರಿಯ ತಂತ್ರಜ್ಞರು, ಬಹಳ ವರ್ಷಗಳ ನಂತರ ಮತ್ತೊಮ್ಮೆ ಈ ಚಿತ್ರದಲ್ಲಿ ಒಂದಾಗುತ್ತಿದ್ದಾರೆ. ಛಾಯಾಗ್ರಾಹಕ ಕೆ.ಎಸ್. ಚಂದ್ರಶೇಖರ್, ಸಂಗೀತ ನಿರ್ದೇಶಕ ಅಭಿಮನ್ ರಾಯ್ ಮತ್ತು ಸಂಕಲನಕಾರ ಕೆ.ಎಂ. ಪ್ರಕಾಶ್ ಈ ಚಿತ್ರಕ್ಕೆ ಕೆಲಸ ಮಾಡುತ್ತಿದ್ದಾರೆ.

ವಿ. ನಾಗೇಂದ್ರ ಪ್ರಸಾದ್ ಮತ್ತು ಬಹದ್ದೂರ್ ಚೇತನ್ ಹಾಡುಗಳನ್ನು ರಚಿಸುತ್ತಿದ್ದಾರೆ. ರವಿ ಕಲ್ಯಾಣ್‌ಗೆ ನಾಯಕಿಯಾಗಿ ಪ್ರಿಯಾ ಹೆಗ್ಡೆ ಅಭಿನಯಿಸುತ್ತಿದ್ದು, ಡ್ರ್ಯಾಗನ್ ಮಂಜು ಖಳನಟನಾಗಿ ಅಬ್ಬರಿಸಲಿದ್ದಾರೆ. ಮಿಕ್ಕಂತೆ ಮಾನಸಿ ಸುಧೀರ್, ಜಾಲಿ ಜಾಲಿ ಜಾಕ್, ಮಹಾನಿಧಿ ಸಾಯಿ ತೇಜ್ ಸೇರಿದಂತೆ ಹಲವು ಪ್ರತಿಭಾವಂತ ಕಲಾವಿದರು ಈ ಚಿತ್ರದಲ್ಲಿ ನಟಿಸುತ್ತಿದ್ದಾರೆ.

## ಪರಾಕ್ ಟೀಸರ್ ಬಿಡುಗಡೆ



ಶ್ರೀ ಮುರಳಿಅವರ ಸಿನಿಮಾ ಪರಾಕ್. ಇದೀಗ ಚಿತ್ರದ ಟೀಸರ್ ಬಿಡುಗಡೆ ಮಾಡಲಾಗಿದೆ..

ಟೀಸರ್ ಬಿಡುಗಡೆ ಕಾರ್ಯಕ್ರಮದಲ್ಲಿ ನಿರ್ದೇಶಕ ಹಾಲೇಶ್ ಮಾತನಾಡಿ, ಇದು ಜಸ್ಟ್ ಟೀಸರ್ ಅಷ್ಟೇ. ಸಿನಿಮಾದಲ್ಲಿ ಸಾಕಷ್ಟು ವಿಷಯಗಳನ್ನು ಹೇಳಿದ್ದೇವೆ. ಶ್ರೀಮುರಳಿ ಜೊತೆ ಕೆಲಸ ಮಾಡಿದ್ದು ಖುಷಿ ಕೊಟ್ಟಿದೆ. ಎಂದರು.

ನಟ ಶ್ರೀಮುರಳಿ ಮಾತನಾಡಿ, ಪರಾಕ್ ಟೀಸರ್ ನೋಡಿದ್ರೆ ಇದು ಸುಲಭವಾಗಿ ಆದ ಕೆಲಸ ಅಲ್ಲ. ಅದಕ್ಕೆ ಆದ ಶ್ರಮ. ಸಾಕಷ್ಟು ಮೀಟಿಂಗ್ ಆಯ್ತು. ಇದನ್ನು ತೆಗೆಯಲು ಎರಡೂವರೆ ವರ್ಷ ತೆಗೆದುಕೊಂಡೆವು. ಪರಾಕ್ ಸುಲಭವಾಗಿ ಶುರುವಾದ ಸಿನಿಮಾವಲ್ಲ. ಕಥೆಗೆ ಮೂರೂವರೆ ವರ್ಷ ಟೈಮ್ ಕೊಟ್ಟಿದ್ದೇವೆ. ಹೊಸಬರು, ಹೊಸ ಪ್ರೊಡಕ್ಷನ್ ಜೊತೆ ಯಾಕೆ ಸಿನಿಮಾ ಮಾಡಿದ್ದೇನೆ ಅಂದರೆ ಅವರ ಜೊತೆ ಕೆಲಸ ಮಾಡಲು ನನಗೆ ಕಿಕ್ಕು. ನಾನು ಹೊಸಬರನ್ನು, ಅವರ ಆಲೋಚನೆಯನ್ನು, ಇಷ್ಟಪಡುತ್ತೇನೆ ನಂಬುತ್ತೇನೆ. ಪರಾಕ್ ಎಂಬ ಅದ್ಭುತ ಪ್ರಯತ್ನವನ್ನು ಎಲ್ಲರಿಗೂ ನೀಡಬೇಕು ಎಂಬ ಆಸೆ, ಹಠ, ಕಾಳಜಿಯಿಂದ ಮಾಡುತ್ತಿದ್ದೇವೆ. ಈ ಹೊಸತಂಡ ನಮ್ಮ ಚಿತ್ರರಂಗದ ಆಸ್ತಿಗಳು. ಚಿತ್ರದ ಬಗ್ಗೆ ಹೆಚ್ಚಿನದಾಗಿ ಹೇಳಲ್ಲ. ಇನ್ನೂ ಸಿನಿಮಾ ಚಿತ್ರೀಕರಣ ಮಾಡುವುದು ಇದೆ ಎಂದರು.

ಚರಣ್ ರಾಜ್ ಮ್ಯೂಸಿಕ್, ಸಂದೀಪ್ ಕ್ಯಾಮೆರಾ ಇದೆ. ಬ್ರ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಚಿತ್ರ ಸಿನಿಮಾ ನಿರ್ಮಾಣವಾಗುತ್ತಿದೆ.

## ಡಿ ಟಾಕ್ಸ್ ಶೀರ್ಷಿಕೆ ಅನಾವರಣ



ಕನ್ನಡ ಸೇರಿದಂತೆ ಐದು ಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟ ಕಿಶೋರ್ ಕುಮಾರ್ ಅಭಿನಯಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಶೀರ್ಷಿಕೆ ಅನಾವರಣ ಹಾಗೂ ಪತ್ರಿಕಾಗೋಷ್ಠಿ ನಡೆಯಿತು.

ನಾನು ಸಾಮಾನ್ಯವಾಗಿ ಚಿತ್ರ ಮುಗಿದ ಮೇಲೆ ಚಿತ್ರದ ಕುರಿತು ಮಾತನಾಡುತ್ತೇನೆ. ಏಕೆಂದರೆ ನಾವು ಮಾತನಾಡಬಾರದು. ನಮ್ಮ ಕೆಲಸ ಮಾತನಾಡಬೇಕು ಎಂಬುದರಲ್ಲಿ ನಂಬಿಕೆ ಇಟ್ಟಿರುವವನು ನಾನು. ಈ ಚಿತ್ರದ ಚಿತ್ರೀಕರಣ ಕೂಡ ಈಗ ಮುಕ್ತಾಯ ಹಂತ ತಲುಪಿದೆ. ಸೆಪ್ಟೆಂಬರ್ ಕೊನೆಯಲ್ಲಿ ತೆರೆಗೆ ತರುವ ಸಿದ್ದತೆ ನಡೆಯುತ್ತಿದೆ. ಇನ್ನೂ, "ಡೀಟಾಕ್ಸ್" ಸೈಕಲಾಜಿಕಲ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರ. ಏಳರಿಂದ ಎಪ್ಪತ್ತರ ವಯಸ್ಸಿನ ಹೆಣ್ಣುಮಕ್ಕಳ ಮನಸ್ಸಿನಲ್ಲಿ ಯಾವ ರೀತಿ ಹೋರಾಟ ಇರುತ್ತದೆ. ಹೊಡೆದಾಟ ಇರುತ್ತದೆ ಇಂತಹ ವಿಷಯಗಳನ್ನು ಕ್ರೋಢೀಕರಿಸಿ ಈ ಕಥೆ ಬರೆದಿದ್ದೇನೆ. ಸಮಾಜದಲ್ಲಿರುವ ತೊಡಕುಗಳನ್ನು ಸಿನಿಮಾ ಮಾಧ್ಯಮದ ಮೂಲಕ "ಡೀಟಾಕ್ಸ್" ಮಾಡುವ ಪ್ರಯತ್ನ ಮಾಡಿದ್ದೇನೆ. ಇದೊಂದು ಸಮಾಜಕ್ಕೆ ಹತ್ತಿರವಾಗುವ ಕಥಾಹಂದರ ಹೊಂದಿರುವ ಚಿತ್ರ. ಕನ್ನಡ ಭಾಷೆಯಲ್ಲಿ ಮಾತ್ರ ಆರಂಭವಾದ ಈ ಚಿತ್ರ ಇಂದು ಐದು ಭಾಷೆಗಳಲ್ಲಿ ಬರುತ್ತಿದೆ. ಇದೊಂದು ಯುನಿವರ್ಸಲ್ ಕಂಟೆಂಟ್ ಆಗಿರುವುದರಿಂದ ಈ ಪ್ರಯತ್ನ ಮಾಡಿದ್ದೇವೆ.

ಕನ್ನಡ ಸೇರಿದಂತೆ ಹಲವು ಭಾಷೆಗಳ ಅನೇಕ ಕಲಾವಿದರು ನಟಿಸಿರುವ ಚಿತ್ರವಿದು. ಇದೊಂದು ತಂತ್ರಜ್ಞರ ಸಿನಿಮಾ ಕೂಡ ಹೌದು. ಎಂದಿನಂತೆ ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ದೇಶಕ ರಾಮಪ್ರಸಾದ್ ದಾಸಪ್ಪ.


ನನಗೆ ರಾಮಪ್ರಸಾದ್ ಅವರು ಬಂದು ಕಥೆ ಹೇಳಿದಾಗ ಇನ್ಸ್‌ಪೆಕ್ಟರ್ ಪಾತ್ರ ಆದರೆ ಬೇಡ ಅಂತ ಹೇಳಿದೆ. ಅವರು ಇಲ್ಲ. ಇದು ಇನ್ಸ್‌ಪೆಕ್ಟರ್ ಪಾತ್ರ ಅಲ್ಲ. ಅವರು ಹೇಳಿದ ಹಾಗೆ ನಾನು ಈ ಚಿತ್ರದಲ್ಲಿ ಇನ್ಸ್‌ಪೆಕ್ಟರ್ ಪಾತ್ರ ಮಾಡುತ್ತಿಲ್ಲ. ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ರಾಮ್ ಪ್ರಸಾದ್ ಒಂದೊಳ್ಳೆ ಕಥೆ ಮಾಡಿಕೊಂಡಿದ್ದಾರೆ. ಅದು ಜನರಿಗೂ ಮೆಚ್ಚುಗೆಯಾಗುವ ಭರವಸೆ ಇದೆ ಎಂದರು ನಟ ಕಿಶೋರ್ ಕುಮಾರ್.

ಎಲ್ಲರೂ ವಶೀಕರಣದ ಸಿನಿಮಾ ಮಾಡುತ್ತಿರುವ ಈ ಸಮಯದಲ್ಲಿ ನಿರ್ವಿಶಿಕರಣ ಮಾಡುವ ಸಿನಿಮಾ ಮಾಡಲು ರಾಮಪ್ರಸಾದ್ ಹೊರಟಿದ್ದಾರೆ. ನಾನು ಈ ಹಿಂದಿನ ಅವರ ಚಿತ್ರದಲ್ಲೂ ನಟಿಸಿದ್ದೆ. ಈ ಚಿತ್ರದಲ್ಲೂ ನಟಿಸಿದ್ದೇನೆ ಎಂದು ನಟ ಸುಚೇಂದ್ರ ಪ್ರಸಾದ್ ಹೇಳಿದರು.

ನಾನು ಈ ಹಿಂದೆ ವರುಣ್ ಎಂಬ ಹೆಸರಿನಲ್ಲಿ ಅಭಿನಯಿಸಿದ್ದೆ. ಈಗ ಅದ್ಭುತ್ ಎಂದು ಹೆಸರು ಬದಲಾವಣೆ ಮಾಡಿಕೊಂಡಿದ್ದೇನೆ. ಎಂದು ನಟ ಅದ್ಭುತ್ ತಿಳಿಸಿದರು. ಪ್ರಮುಖಪಾತ್ರದಲ್ಲಿ ನಟಿಸುತ್ತಿರುವ

ಕಿರಿಶಾ ತಾರಿಕಾ ದೇವಿ, ತುಮುಲ್ ಬಾಲ್ಯನ್, ವಾಣಿಶ್ರೀ ಕೂಡ ತಮ್ಮ ಪಾತ್ರದ ಕುರಿತು ಮಾತನಾಡಿದರು. ಈ ಚಿತ್ರದ ಮತ್ತೊಂದು ವಿಶೇಷವೆಂದರೆ ನಾಗೇಂದ್ರ ಅರಸ್, ಗುರುಪ್ರಸಾದ್, ಜಗದೀಶ್ ಕೊಪ್ಪ, ಮಂಜು ದೈವಜ್ಞ ಸೇರಿದಂತೆ ಆರುಜನ ನಿರ್ದೇಶಕರು ಅಭಿನಯಿಸಿದ್ದಾರೆ.

## "ಫಾರೆವರ್"ಗೆ ಚಾಲನೆ



ಸುಪ್ರೀಮ್ ಕ್ರಿಯೇಷನ್ಸ್ ಲಾಂಛನದಲ್ಲಿ ಎಂ.ವೆಂಕಟನಾರಾಯಣ್ ನಿರ್ಮಾಣದ, "ಯೋಗೇಶ್ ಎಂ ನಿರ್ದೇಶಿಸುತ್ತಿರುವ "ಫಾರೆವರ್" ಚಿತ್ರದ ಮುಹೂರ್ತ ಸಮಾರಂಭ ನೆರವೇರಿತು.

ಚಿತ್ರದ ಮೊದಲ ಸನ್ನಿವೇಶಕ್ಕೆ ಧ್ರುವ ಸರ್ಜಾ ಆರಂಭ ಫಲಕ ತೋರಿದರು. ಶಾಸಕ ಕೃಷ್ಣಪ್ಪ ಕ್ಯಾಮೆರಾ ಚಾಲನೆ ಮಾಡಿದರು. ಗಣ್ಯರೆಲ್ಲರೂ ಸೇರಿ ಟ್ಯಾಂಕರ್ ಮೇಲಿದ್ದ ಶೀರ್ಷಿಕೆಯನ್ನು ಅನಾವರಣ ಮಾಡಿದರು.

ನಾನು ಹಾಗೂ ಧ್ರುವ ಸರ್ಜಾ ಒಂದೇ ಸ್ಕೂಲ್ ನಲ್ಲಿ ಓದಿದವರು. ಮೆಚ್ಚಿನ ಗೆಳೆಯ ಅವರು. ಅವರು ಬಂದು ನಮ್ಮ ಚಿತ್ರಕ್ಕೆ ಕ್ಲಾಪ್ ಮಾಡಿದ್ದು ಖುಷಿಯಾಗಿದೆ. ಸುಮಾರು ಎರಡು ವರ್ಷಗಳ ನಂತರ ನಾನು ನಾಯಕನಾಗಿ ನಟಿಸುತ್ತಿರುವ ಚಿತ್ರದ ಮುಹೂರ್ತ ನಡೆಯುತ್ತಿದೆ. ಬಹಳ ಅದ್ದೂರಿಯಾಗಿಯೇ ನಡೆದಿದೆ. ಚಿತ್ರ ಕೂಡ ಇಷ್ಟೇ ಅದ್ದೂರಿಯಾಗಿರುತ್ತದೆ. ನಿರ್ದೇಶಕರು ಒಂದೊಳ್ಳೆ ಕಥೆ ಬರೆದಿದ್ದಾರೆ. ನಾನು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಫಸ್ಟ್ ಲುಕ್ ಪೋಸ್ಟರ್ ತುಂಬಾ ಚೆನ್ನಾಗಿದೆ. ಈ ಚಿತ್ರದಲ್ಲಿ ಲವ್, ಸೆಂಟಿಮೆಂಟ್, ಆಕ್ಷನ್ ಅಲ್ಲದೆ ಮತ್ತೊಂದು ಇದೆ. ಅದನ್ನು ಮುಂದಿನ ದಿನಗಳಲ್ಲಿ ಹೇಳುತ್ತೇವೆ. ನಾನು ತುಂಬಾ ಬೈಕ್ ಇಷ್ಟ ಪಡುತ್ತೇನೆ. ಬೈಕ್ ರೈಡರ್ ಕೂಡ. ಈ ಕಥೆ ಅದಕ್ಕೆ ಹತ್ತಿರವಾಗಿರುವುದು ಮತ್ತಷ್ಟು ಇಷ್ಟವಾಯಿತು. ಬೆಂಗಳೂರಿನಲ್ಲೇ ಮೊದಲ ಹಂತದ ಚಿತ್ರೀಕರಣ ನಡೆಯುತ್ತಿದೆ. ಚಿತ್ರವನ್ನು ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡುವುದಾಗಿ ಹೇಳಿರುವ ನಿರ್ಮಾಪಕರಿಗೆ ಹಾಗೂ ಇಡೀ ಚಿತ್ರತಂಡಕ್ಕೆ ನನ್ನ ಧನ್ಯವಾದ ಎಂದರು ನಾಯಕ ಲೂಸ್ ಮಾದ ಯೋಗಿ.

ನಾನು ಮೂರು ವರ್ಷಗಳಲ್ಲಿ ಅತೀ ಹೆಚ್ಚು ಬಾರಿ ವಿಮಾನದಲ್ಲಿ ಪ್ರಯಾಣ ಮಾಡಿದ್ದೇನೆ. ವಿಮಾನ ಹತ್ತಿದ ತಕ್ಷಣ ಮೊಬೈಲ್ ಪಕ್ಕಕ್ಕೆ ಇಟ್ಟು ಈ ಚಿತ್ರದ ಕಥೆ ಬರೆಯುತ್ತಿದ್ದೆ. ಪ್ರತಿಬಾರಿ ಯೋಗಿ ಅವರ ಹುಟ್ಟುಹಬ್ಬಕ್ಕೆ ವಿಶ್ ಮಾಡುವಾಗ ಈ ವರ್ಷದ ಹುಟ್ಟುಹಬ್ಬಕ್ಕೆ ಚಿತ್ರ ಆರಂಭ ಮಾಡೋಣ ಅಂತ ಹೇಳುತ್ತಿದ್ದೆ. ಕಾಲ ಈಗ ಕೂಡಿ ಬಂದಿದೆ. ಇತ್ತೀಚೆಗಷ್ಟೇ ಯೋಗಿ ಅವರು ಹುಟ್ಟುಹಬ್ಬ ಆಚರಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲೇ ಮುಹೂರ್ತ ನಡೆದಿರುವುದು ಖುಷಿಯಾಗಿದೆ. ನಮ್ಮ ಚಿತ್ರಕ್ಕೆ "ಯುಗ ಮರೆಯದ ಪ್ರೇಮ ಕಥೆ" ಎಂಬ ಅಡಿಬರಹವಿದೆ. ಹಾಗಾಗಿ ಇದೊಂದು ಪ್ರೇಮಕಥೆ. ಆದರೆ, ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳು ಈ ಚಿತ್ರದಲ್ಲಿದೆ. ವಿಶೇಷವಾದ್ದದ್ದು ಮತ್ತೊಂದಿದೆ. ಅದನ್ನು ಮುಂದಿನ ದಿನಗಳಲ್ಲಿ ತಿಳಿಸುವುದಾಗಿ ನಿರ್ದೇಶಕ ಯೋಗೇಶ್ ಮುನಿಸಿದ್ದಪ್ಪ ಹೇಳಿದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,